ಸಂಪುಟ: 04 ಸಂಚಿಕೆ: 344 ಪುಟಗಳು: 08 ಮಂಗಳವಾರ 25 ಫೆಬ್ರವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

**ಮುಂಜಾನೆ ಮಾತು**

ಬದುಕುವುದಕ್ಕಾಗಿ ದುಡಿಯುವುದು ಅನಿವಾರ್ಯ, ಹಾಗಂತ ಫಲದ ಮೇಲೆ ಕಣ್ಣಿಟ್ಟು ಕೆಲಸ ಮಾಡಿದರೆ ನಿರಾಸೆ ಹೆಚ್ಚು, ಕೆಲಸವನ್ನು ಶ್ರದ್ಧೆಯಿಂದ, ಪ್ರೀತಿಯಿಂದ ಮಾಡಿದರೆ ಫಲ ಇಂದಲ್ಲ ನಾಳೆ ದೊರಕಿಯೇ ದೊರಕುತ್ತದೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಶುದ್ಧ ಕುಡಿಯುವ ನೀರಿನ ಘಟಕಗಳು ಜಲಮಂಡಳಿ ವ್ಯಾಪ್ತಿಗೆ

• ಉದಯವಾಹಿನಿ, ಬೆಂಗಳೂರು



ಬಿಬಿಎಂಪಿಯ ವ್ಯಾಪ್ತಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳ (ಆರ್.ಒ ಪ್ಲಾಂಟ್) ನಿರ್ವಹಣೆಯ ಹೊಣೆಯನ್ನು ಜಲಮಂಡಳಿಗೆ ಹಸ್ತಾಂತರಿಸಲು ಆದೇಶ ಹೊರಡಿಸುವಂತೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗೆ ಸೂಚಿಸಿದ್ದಾರೆ.

ನಗರದಲ್ಲಿ 905 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದ್ದು, ಇಲ್ಲಿಯವರೆಗೆ ಪಾಲಿಕೆಯೇ ನಿರ್ವಹಣೆ ಮಾಡುತ್ತಿತ್ತು. ನಗರಕ್ಕೆ ಕುಡಿಯುವ ನೀರು ಪೂರೈಕೆ ಜವಾಬ್ದಾರಿ ನಿರ್ವಹಿಸುತ್ತಿರುವ ಜಲಮಂಡಳಿಗೇ ಈ ಆರ್‌ಓ ಘಟಕಗಳನ್ನು ಹಸ್ತಾಂತರಿಸಲು ನಿರ್ಧರಿಸಲಾಗಿದೆ.

**ದುಬಾರಿ ಆಗ್ತಾವೆ!**

ಬೇಸಿಗೆ ಶುರುವಾಗಿದ್ದು, ಒಂದೊಮ್ಮೆ ಕೊಳವೆಬಾವಿಗಳು ಬತ್ತಿ ಹೋದರೆ, ಆರ್‌ಓ ಘಟಕಗಳಿಗೆ ಜಲಮಂಡಳಿಯೇ ನೀರು ಪೂರೈಸಬೇಕಾಗುತ್ತದೆ. ಈ ಸಂದರ್ಭದಲ್ಲಿ ಸಮನ್ವಯದ ಕೊರತೆ ಉಂಟಾಗಿ ಸಾರ್ವಜನಿರಿಗೆ ತೊಂದರೆಯಾಗುವುದನ್ನು ತಪ್ಪಿಸಲು, ನಗರಕ್ಕೆ ನೀರು ಸರಬರಾಜು ಮಾಡುತ್ತಿರುವ ಜಲಮಂಡಳಿಗೆ ಆರ್‌ಓ ಪ್ಲಾಂಟ್‌ಗಳ ನಿರ್ವಹಣೆ ಹೊಣೆ ವಹಿಸುವುದು ಸೂಕ್ತವಾಗಿದೆ ಎಂದು ಡಿಸಿಎಂ ತಿಳಿಸಿದ್ದಾರೆ. ಬೆಂಗಳೂರಿಗರೇ ಎಚ್ಚರ! ಈ ಬೇಸಿಗೆಯಲ್ಲಿ ಅಂತರ್ಜಲ 25 ಮೀ. ಇಳಿಕೆಯಾಗುತ್ತೆ! ನೀರಿನ ಟ್ಯಾಂಕರ್‌ಗಳೂ ದುಬಾರಿ ಆಗ್ತಾವೆ!

ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇತ್ತೀಚೆಗೆ ನಗರ ಸಂಚಾರ ಕೈಗೊಂಡು ಪರಿಶೀಲಿಸಿದ ಸಂದರ್ಭದಲ್ಲಿ ಹಲವೆಡೆ ಆರ್‌ಓ ಘಟಕಗಳು ಕಾರ್ಯ ನಿರ್ವಹಿಸದಿರುವುದನ್ನು ಗಮನಿಸಿದ್ದರು. ಈ ಬಗ್ಗೆ ವರದಿ ನೀಡುವಂತೆ ಪಾಲಿಕೆಯ ಮುಖ್ಯ ಆಯುಕ್ತರಿಗೆ ಸೂಚಿಸಿದ್ದರು.

**ಆರ್‌ಓ ಘಟಕಗಳ ಸ್ಥಿತಿಗತಿ ವರದಿ ಕೇಳಿದ್ದ ಆಯುಕ್ತರು:** ಬಿಬಿಎಂಪಿ ವ್ಯಾಪ್ತಿಯಲ್ಲಿನ ಎಲ್ಲಾ ಶುದ್ಧ ಕುಡಿಯುವ ನೀರಿನ ಘಟಕಗಳ ಸಮೀಕ್ಷೆ ನಡೆಸಿ, ಅವುಗಳ ಸ್ಥಿತಿಗತಿ ಕುರಿತಂತೆ ಒಂದು ವಾರದೊಳಗೆ ವರದಿ ನೀಡಬೇಕು ಎಂದು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಕಳೆದ ವಾರ ಅಧಿಕಾರಿಗಳಿಗೆ ಸೂಚಿಸಿದ್ದರು.

## ಆರ್ಥಿಕ ಸದೃಢವಾಗಿದೆ ಅನ್ನೋದು ಎಲ್ಲದರ ದರ ಹೆಚ್ಚು ಮಾಡೋದು

• ಉದಯವಾಹಿನಿ, ಮೈಸೂರು

ರಾಜ್ಯದ ಆರ್ಥಿಕ ಸದೃಢವಾಗಿದೆ ಎಂದು ಹೇಳುತ್ತಾರೆ. ಎಲ್ಲಾ ಕಡೆ ತೆರಿಗೆ ಹೆಚ್ಚು ಮಾಡಿ ಖಜಾನೆ ತುಂಬಿಸುವ ಕೆಲಸ ಮಾಡ್ತಿದ್ದಾರೆ. ಬೇರೆ ರಾಜ್ಯದಲ್ಲೂ ಮೆಟ್ರೋ ಇದೆ. ಅಲ್ಲಿ ಯಾಕೆ ದರ ಹೆಚ್ಚು ಮಾಡಿಲ್ಲ. ಕೇಂದ್ರ ಮಾಡಿದ್ದರೆ ಕರ್ನಾಟಕದಲ್ಲಿ ಮಾತ್ರ ಏಕೆ ಮಾಡುತ್ತಿದ್ದರು ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಕಿಡಿಕಾರಿದರು. ಮೈಸೂರಲ್ಲಿ ಮಾತನಾಡಿದ ಅವರು, ನೀರು ಹಾಲು ಎಲ್ಲಾ ದರ ಹೆಚ್ಚು ಮಾಡುತ್ತಿದ್ದಾರೆ. ಜನರ ಕಿಸೆಗೆ ಕೈ ಹಾಕುವ ಕೆಲಸ ಮಾಡುತ್ತಿದ್ದಾರೆ. ಇದು ಇವರ ಆರ್ಥಿಕ ಶಕ್ತಿಯಾ. ಎರಡು ವರ್ಷಕ್ಕೆ 10 ಕೋಟಿಯಷ್ಟೆ ಕ್ಷೇತ್ರಕ್ಕೆ ಹಣ ಕೊಟ್ಟಿದ್ದಾರೆ. ಎರಡು ವರ್ಷಕ್ಕೆ ಇಷ್ಟು ಹಣ ಸಾಕಾಗುತ್ತಾ?, ಯಾವುದೇ ಅಭಿವೃದ್ಧಿಗೆ ಹಣ ನೀಡಿಲ್ಲ. ಬಿ ಖಾತಾ ಮಾಡಲು ಇಷ್ಟು ಅರ್ಜೆಂಟ್ ಏಕೆ. ಖಜಾನೆಯಲ್ಲಿ ದುಡ್ಡಿಲ್ಲ ಅದಕ್ಕಾಗಿ ಇದನ್ನು ಮಾಡಲು ಹೊರಟಿದ್ದಾರೆ. ಕೋರ್ಟ್‌ನಲ್ಲಿ ಕೇಸ್ ಇದ್ದರೂ ಇಷ್ಟು ತರಾತುರಿಯಲ್ಲಿ ಏಕೆ ಮಾಡುತ್ತಿದ್ದೀರಿ ಎಂದು ಹೇಳಿದರು. ಜನರ ಹಿತದೃಷ್ಟಿಯಿಂದ ಕಾಪಾಡುವ ಉದ್ದೇಶದಿಂದಲ್ಲ. ಇದು ಖಜಾನೆ ತುಂಬಿಸಲು ಈ ರೀತಿ ಮಾಡುತ್ತಿದ್ದಾರೆ ಎಂದು ಹೇಳಿದರು

## ಕಲಬುರಗಿಯಲ್ಲಿ ಭಾರೀ ಬಿಸಿಲು, ಉ.ಕನ್ನಡ ಜಿಲ್ಲೆಗೆ 3 ದಿನ ಅಲರ್ಟ್

• ಉದಯವಾಹಿನಿ, ಕಲಬುರಗಿ

ರಾಜ್ಯದಾದ್ಯಂತ ಸೂರ್ಯನ ಶಾಖ ಹೆಚ್ಚಾಗಿದ್ದು, ಉರಿ ಸೆಕೆಗೆ ಜನ ಬಳಲಿ ಬೆಂಡಾಗಿದ್ದಾರೆ. ಅದರಲ್ಲೂ ಪ್ರಮುಖವಾಗಿ ಬಿಸಿ ವಾತಾವರಣದಿಂದ ಎಚ್ಚರಿಕೆಯಿಂದ ಇರುವಂತೆ ಉತ್ತರ ಕನ್ನಡ ಜಿಲ್ಲೆಗೆ ಅಲರ್ಟ್ ನೀಡಲಾಗಿದೆ. ಉತ್ತರ ಕನ್ನಡ ಜಿಲ್ಲೆಯ ಕಾರವಾರ ಸೇರಿದಂತೆ ಹಲವು ತಾಲ್ಲೂಕುಗಳಲ್ಲಿ ದಿನದಿಂದ ದಿನಕ್ಕೆ ಬಿಸಿಲ ಝಳ ಹೆಚ್ಚಾಗಿದ್ದು, ಬಿಸಿ ವಾತಾವರಣ ಹಾಗೂ ತೇವಾಂಶದ (ಹ್ಯುಮಿಡಿಟಿ) ವಾತಾವರಣ ಇರಲಿದೆ. ಮುಂದಿನ 3 ದಿನದ ವರೆಗೆ ಈ ಅಲರ್ಟ್ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕಳೆದ 24 ಗಂಟೆಯಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಗರಿಷ್ಠ ತಾಪಮಾನ ದಾಖಲಾಗಿದೆ. ಕಲಬುರಗಿಯಲ್ಲಿ ಅತಿ ಹೆಚ್ಚು ಉಷ್ಣಾಂಶ ಅದರೆ 36.9 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಕನಿಷ್ಠ ಉಷ್ಣಾಂಶ ದಾವಣಗೆರೆಯಲ್ಲಿ 15 ಡಿ.ಸೆ ದಾಖಲಾಗಿದೆ. ಕಳೆದ ಶನಿವಾರ ಹಾಗೂ ಭಾನುವಾರ ಮೈಸೂರು, ಉತ್ತರ ಕನ್ನಡ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಮಳೆಯಾಗಿತ್ತು. ಆದರೆ ಮುಂದಿನ 5 ದಿನ ಮಳೆ ಮುನ್ಸೂಚನೆ ಇಲ್ಲ. ಒಣ ಹವೆ ಅಲರ್ಟ್ ನೀಡಲಾಗಿದೆ.

## ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಪೂರ್ವ ತಯಾರಿ:ಡಿಸಿಎಂ ಸಭೆ

• ಉದಯವಾಹಿನಿ, ಬೆಂಗಳೂರು

ನಗರ, ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಪೂರ್ವ ತಯಾರಿ ನಡೆಸಲು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಇಂದು ಸರಣಿ ಸಭೆಗಳನ್ನು ನಡೆಸಿದರು. ಬೆಳಿಗ್ಗೆ ವಿಧಾನಸಭೆ ಹಾಗೂ ಲೋಕಸಭೆ ಚುನಾವಣೆಗಳಲ್ಲಿ ಸ್ಪರ್ಧಿಸಿ ಸೋಲು ಕಂಡ ಅಭ್ಯರ್ಥಿಗಳ ಜೊತೆ ಸಭೆ ನಡೆಸಿದರು. ರಾಜ್ಯಾದ್ಯಂತ ಎಲ್ಲಾ ಕ್ಷೇತ್ರಗಳಿಂದಲೂ ಸೋಲು ಕಂಡ ಅಭ್ಯರ್ಥಿಗಳು ಸಭೆಯಲ್ಲಿ ಭಾಗವಹಿಸಿದ್ದರು. ಮೇ ತಿಂಗಳಿನಲ್ಲಿ ಬಿಬಿಎಂಪಿ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಇತರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಲು ರಾಜ್ಯ ಸರ್ಕಾರ ಸಿದ್ದತೆ ನಡೆಸಿದೆ. ನ್ಯಾಯಾಲಯದಲ್ಲಿ ಹಿಂದುಳಿದ ವರ್ಗಗಳ ಮೀಸಲಾತಿ ಕುರಿತ ಪ್ರಕರಣದ ತೀರ್ಪಿಗಾಗಿ ನಿರೀಕ್ಷಿಸಲಾಗುತ್ತಿದ್ದು, ಈ ನಡುವೆ ಪಕ್ಷದ ವತಿಯಿಂದ ಚುನಾವಣಾ ತಯಾರಿಯ ಬಗ್ಗೆ ಸಭೆಗಳನ್ನು ಆರಂಭಿಸಲಾಗಿದೆ. ಶಾಸಕರು, ಸಚಿವರ ಜೊತೆ ಸಭೆ ನಡೆಸುವ ಮೊದಲು ಮಾಜಿ ಶಾಸಕರು ಹಾಗೂ ಪರಾಜಿತ ಅಭ್ಯರ್ಥಿಗಳ ಜೊತೆ ಡಿ.ಕೆ.ಶಿವಕುಮಾರ್ ಚರ್ಚೆ ನಡೆಸಿರುವುದು ಮಹತ್ವ ಪಡೆದುಕೊಂಡಿದೆ. ಸಭೆಯಲ್ಲಿ ಪರಾಜಿತ ಅಭ್ಯರ್ಥಿಗಳು ತಮಗೆ ಪಕ್ಷದಲ್ಲಿ ಸೂಕ್ತ ಸ್ಥಾನಮಾನ ದೊರೆಯುತ್ತಿಲ್ಲ ಎಂಬ ಅಸಮಾಧಾನ ಹೊರಹಾಕಿದ್ದಾರೆ. ಸಚಿವರು ನಮ್ಮ ಪತ್ರಗಳನ್ನು ಪರಿಗಣಿಸುತ್ತಿಲ್ಲ. ವರ್ಗಾವಣೆ, ಅನುದಾನ ಬಿಡುಗಡೆ ಸೇರಿದಂತೆ ಹಲವಾರು ವಿಚಾರಗಳಲ್ಲಿ ಕಡೆಗಣಿಸಲಾಗುತ್ತಿದೆ ಮತ್ತು ಅನ್ಯಪಕ್ಷಗಳಿಂದ ವಲಸೆ ಬಂದವರ ಪತ್ರಗಳಿಗೆ ಹೆಚ್ಚಿನ ಮಾನ್ಯತೆ ದೊರೆಯುತ್ತಿದೆ. ನಮ್ಮದೇ ಪಕ್ಷದಲ್ಲಿ ನಾವು ನಿರ್ಲಕ್ಷ್ಯಕ್ಕೆ ಒಳಗಾಗುತ್ತಿದ್ದೇವೆ ಎಂದು ಕೆಲವರು ಅಸಮಾಧಾನ ಹೊರಹಾಕುತ್ತಿದ್ದಾರೆ ಎಂದು ತಿಳಿದುಬಂದಿದೆ.

• ಬಲ್ಡೋಟಾ ಹೊಸ ಕಾರ್ಖಾನೆ ವಿರೋಧಿಸಿ ಕೊಪ್ಪಳ ಬಂದ್ • ಪ್ರತಿಭಟನೆಯಲ್ಲಿ ಕಣ್ಣೀರು ಹಾಕಿದ ಗವಿಶ್ರೀಗಳು ಬಲ್ಡೋಟಾ ವಿರುದ್ಧ ಬೀದಿಗಿಳಿದ ಜನ • ಕೊಪ್ಪಳ ಬಂದ್ ಗೆ ಪೂರ್ಣ ಬೆಂಬಲ • ಸ್ವಯಂ ಪ್ರೇರಿತ ಅಂಗಡಿ ಮುಂಗಟ್ಟುಗಳು ಕ್ಲೋಸ್ • ಕೊಪ್ಪಳದಲ್ಲಿ ಬಲ್ಡೋಟಾ ಸ್ಟೀಲ್ ಕಾರ್ಖಾನೆ ಆರಂಭಕ್ಕೆ ವಿರೋಧ • ದುಸ್ಥಿತಿ ಕಂಡು ಗವಿಸಿದ್ದೇಶ್ವರ ಸ್ವಾಮೀಜಿ ಕಣ್ಣೀರು

# ಉಕ್ಕು ಕಾರ್ಖಾನೆ ಸದ್ದು ಬಂಡವಾಳ ಶಾಹಿಗಳಿಗೆ ಸೆಡ್ಡು



**ಅರಿಯಲಿ ಬಡವರ ಸಂಕಟ**

### ವೇದಿಕೆಯಲ್ಲೇ ಕಣ್ಣೀರು ಹಾಕಿದ ಗವಿಮಠದ ಸ್ವಾಮೀಜಿ



ತಾಲ್ಲೂಕು ಕ್ರೀಡಾಂಗಣದಲ್ಲಿ ಸಾರ್ವಜನಿಕ ಸಭೆ ನಡೆಯಿತು. ಈ ಸಭೆಯಲ್ಲಿ ಗವಿಮಠದ ಶ್ರೀ ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿ ಕಣ್ಣೀರು ಹಾಕಿದ ಘಟನೆ ನಡೆಯಿತು. ಈಗಾಗಲೇ ಇರುವ ಅನೇಕ ಸ್ಟೀಲ್ ಪ್ಯಾಕ್ಟರಿಗಳಿಂದ ಸುತ್ತಮುತ್ತಲಿನ ಜನರ ಮೇಲೆ ಆಗುತ್ತಿರುವ ದುಷ್ಪರಿಣಾಮ ಬಗ್ಗೆ ವಿಡಿಯೋ ಪ್ರದರ್ಶನ ಮಾಡಲಾಯಿತು. ಧೂಳು ಮತ್ತು ಹೊಗೆಯಿಂದ ಜನರು ಸಂಕಷ್ಟ ಪಡುತ್ತಿರುವ ದೃಶ್ಯಗಳನ್ನು ನೋಡುತ್ತಲೇ ಗವಿಮಠದ ಸ್ವಾಮೀಜಿ ಭಾವುಕರಾಗಿ ಕಣ್ಣೀರು ಹಾಕಿದರು. ಸುತ್ತಮುತ್ತಲಿನ ಜನರ ಸ್ಥಿತಿ ನೋಡಿದರೆ ಕಣ್ಣೀರು ಬರುತ್ತದೆ. ಸಣ್ಣ ಮಕ್ಕಳಿಗೆ ಕ್ಯಾನ್ಸರ್, ಅಸ್ತಮಾ ಬರುತ್ತಿದೆ. ಇರುವ ಕಾರ್ಖಾನೆಗಳ ವಿಸ್ತರಣೆಗೆ ಅವಕಾಶ ನೀಡಬಾರದು. ಹೊಗೆ ಉಗಳುವ ಕಾರ್ಖಾನೆಗಳನ್ನು ನಮಗೆ ಕಳಿಸುವ ಕೆಲಸ ಸರ್ಕಾರ ಮಾಡಬಾರದು. ಸರ್ಕಾರ ಬಂಡವಾಳ ಶಾಹಿಗಳ ಪರವಾಗಿರಬಾರದು. ಸರ್ಕಾರ ಬಡವರ ಪರ ಇರಬೇಕು. ಸರ್ಕಾರ ಕೊಪ್ಪಳ ಜನರನ್ನು ಜೋಪಾನ ಮಾಡಬೇಕಿದೆ. ಸರ್ಕಾರ ತಾಯಿಯಿದ್ದಂತೆ, ವಿಷ ಹಾಕುತ್ತೀರೋ ಅಥವಾ ಅಮೃತ ಹಾಕುತ್ತಿರೋ ನಿಮಗೆ ಬಿಟ್ಟಿದ್ದು. ಕೊಪ್ಪಳ ಜನರಿಗೆ ಬದುಕಲು ಅವಕಾಶ ನೀಡಿ ಎಂದು ವಾಗ್ದಾಳಿ ಮಾಡಿದರು.

**ಶಾಲೆಗಳಿಗೆ ರಜೆ**

ಬಲ್ಡೋಟಾ ಫ್ಯಾಕ್ಟರಿ ಸ್ಥಾಪನೆ ವಿರೋಧಿಸಿ ಕೊಪ್ಪಳದಲ್ಲಿ ಸೋಮವಾರ ಸ್ವಯಂಪ್ರೇರಿತ ಬಂದ್‌ಗೆ ಪರಿಸರ ಸಂರಕ್ಷಣಾ ಸಮಿತಿ ಕರೆ ನೀಡಿದೆ. ಬಂದ್ ಹಿನ್ನೆಲೆ ಕೊಪ್ಪಳ ತಾಲ್ಲೂಕಿನ ಪ್ರಾಥಮಿಕ, ಪ್ರೌಢಶಾಲೆಗಳಿಗೆ ಕೊಪ್ಪಳ ಬಿಇಓ ಶಂಕರಯ್ಯ ರಜೆ ಘೋಷಿಸಿದ್ದಾರೆ. ಕೊಪ್ಪಳ ನಗರ ಹೊರವಲಯದಲ್ಲಿ ನಿರ್ಮಾಣವಾಗುತ್ತಿರುವ ಬಲ್ಡೋಟಾ ಸ್ಟೀಲ್ ಫ್ಯಾಕ್ಟರಿಯು ಆರಂಭದಿಂದ ಕೊಪ್ಪಳ ಜನರ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಪರಿಸರದಲ್ಲಿ ಹೆಚ್ಚಿನ ಮಾಲಿನ್ಯ ಉಂಟುಮಾಡುತ್ತದೆ, ಈ ಹಿನ್ನೆಲೆ ನಗರಕ್ಕೆ ಹೊಂದಿಕೊಂಡು ಫ್ಯಾಕ್ಟರಿ ಬೇಡ ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.



• ಉದಯವಾಹಿನಿ, ಕೊಪ್ಪಳ

ನಗರಕ್ಕೆ ಹೊಂದಿಕೊಂಡು ಬಲ್ಡೋಟಾ ಹೊಸ ಕಾರ್ಖಾನೆ ಸ್ಥಾಪನೆ ವಿರೋಧಿಸಿ ಕೊಪ್ಪಳ ಪರಿಸರ ಹಿತರಕ್ಷಣಾ ವೇದಿಕೆ, ಜಿಲ್ಲಾ ಬಚಾವೋ ಆಂದೋಲನ ಸಮಿತಿ ಸೇರಿದಂತೆ ವಿವಿಧ ಕನ್ನಡ ಪರ ಸಂಘಟನೆಗಳು ಸೋಮವಾರ ಕರೆ ನೀಡಿರುವ ಬೃಹತ್ ಕೊಪ್ಪಳ ಬಂದ್ ಕರೆಗೆ ಗವಿಮಠದ ಆವರಣದಲ್ಲಿ ಶ್ರೀ ಗವಿಸಿದ್ದೇಶ್ವರ ಮಹಾ ಸ್ವಾಮೀಜಿಗಳು ಚಾಲನೆ ನೀಡಿದರು. ಕೊಪ್ಪಳದ ಗವಿಮಠದ ಆವರಣದಿಂದ ಸಾವಿರಾರು ಸಂಖ್ಯೆಯಲ್ಲಿ ಜನರು ಸ್ವಯಂ ಪ್ರೇರಿತವಾಗಿ ಕೊಪ್ಪಳ ಬಂದ್ ಪ್ರತಿಭಟನೆ ಮೆರವಣಿಗೆಯಲ್ಲಿ ಪಾಲ್ಗೊಂಡು ಕೈಗಾರಿಕೆ ಸ್ಥಾಪನೆ ವಿರೋಧಿಸಿ ಧಿಕ್ಕಾರ ಕೂಗಿ ತಮ್ಮ ಆಕ್ರೋಶ ಹೊರ ಹಾಕಿದರು. ಗವಿಮಠದ ಆವರಣದಿಂದ ಆರಂಭವಾದ ಬೃಹತ್ ಪ್ರತಿಭಟನಾ ಮೆರವಣಿಗೆಯ ಜಾಥಾವು ಗಡಿಯಾರ ಕಂಬದ ಮಾರ್ಗವಾಗಿ ಜವಾಹರ ರಸ್ತೆಯ ಮೂಲಕ ಅಶೋಕ ವೃತ್ತದ ಮಾರ್ಗವಾಗಿ ಕೊಪ್ಪಳ ತಾಲ್ಲೂಕು ಕ್ರೀಡಾಂಗಣದವರೆಗೂ ಮೆರವಣಿಗೆಯಲ್ಲಿ ಸಾಗಿತು. ನಗರದ ನಿವಾಸಿಗಳು ಅಕ್ಕಪಕ್ಕದ ಹತ್ತಾರು ಹಳ್ಳಿಗಳ ರೈತರು, ರೈತ ಮಹಿಳೆಯರು, ಗೃಹಣಿಯರು, ಯುವಕರು ಮಕ್ಕಳು, ವಿವಿಧ ಧರ್ಮ ಗುರುಗಳು ಸೇರಿದಂತೆ ನೂರಾರು ಸಂಘಟನೆಗಳ ಪದಾಧಿಕಾರಿಗಳು ಮುಖಂಡರು ಕಾರ್ಯಕರ್ತರು ಬೃಹತ್ ಪ್ರತಿಭಟನಾ ಮೆರವಣಿಗೆಯಲ್ಲಿ ಪಾಲ್ಗೊಂಡು ಕೈಗಾರಿಕೆ ತೊಲಗಿಸಿ ಕೊಪ್ಪಳವನ್ನು ಉಳಿಸಿ ಎನ್ನುವ ಘೋಷದ ಕಹಳೆಯನ್ನ ಮೊಳಗಿಸಿ ಬಯೋಟಾ ಕಂಪನಿಗೆ ಬಹುದೊಡ್ಡ ಎಚ್ಚರಿಕೆ ನೀಡಿದರು. ಬೃಹತ್ ಪ್ರತಿಭಟನಾ ಮೆರವಣಿಗೆಯಲ್ಲಿ ಸಹಸ್ರಾರು ಸಂಖ್ಯೆಯ ಜನರು ಪಾಲ್ಗೊಂಡು ತಮ್ಮ ಕೈಗಾರಿಕಾ ವಿರೋಧಿ ನಡೆಯನ್ನ ಪ್ರದರ್ಶಿಸಿ ಗವಿಸಿದ್ದೇಶ್ವರ ಮಹಾ ಸ್ವಾಮೀಜಿಗಳು ಧ್ವನಿಗೆ ಬೆನ್ನೆಲುಬಾಗಿ ನಿಂತರು.

**ಸ್ವಯಂ ಪ್ರೇರಿತ ಅಂಗಡಿ ಮುಂಗಟ್ಟುಗಳು ಬಂದ್ :** ವಿವಿಧ ಸಂಘಟನೆಗಳು ಕರೆ ನೀಡಿರುವ ಕೊಪ್ಪಳ ಬಂದ್ ಕರೆಗೆ ಕೊಪ್ಪಳದ ಸಾವಿರಾರು ಅಂಗಡಿ ಮುಂಗಟ್ಟುಗಳು ಇಂದು ತಮ್ಮ ವ್ಯಾಪಾರ ವಹಿವಾಟನ್ನು ಸಂಪೂರ್ಣ ಸ್ಥಗಿತಗೊಳಿಸಿ, ಬಂದ್ ಗೆ ಬೆಂಬಲಿಸಿ ಬಂದ್‌ನಲ್ಲಿ ಪಾಲ್ಗೊಂಡಿದ್ದರು. ಹೀಗಾಗಿ ಬೆಳಗ್ಗೆ 8 ಗಂಟೆಯಿಂದಲೇ ಎಲ್ಲಾ ವ್ಯಾಪಾರ ವಹಿವಾಟುಗಳು ಬಂದಾಗಿದ್ದವು. ಹೋಟಲ್‌ಗಳೂ ಬಂದ್ ಆಗಿದ್ದವು. ಸಾರಿಗೆ ವ್ಯವಸ್ಥೆ ಸಂಪೂರ್ಣ ಸ್ತಬ್ಧವಾಗಿತ್ತು. ಯಾವುದೇ ಸರಕಾರಿ ವಾಹನಗಳು ರಸ್ತೆಗೆ ಇಳಿದಿರಲಿಲ್ಲ. ರೈತರು ತಂಡೋಪ ತಂಡವಾಗಿ ಕೊಪ್ಪಳದ ಹೊರಭಾಗಕ್ಕೆ ಆಗಮಿಸಿ ಪ್ರತಿಭಟನೆ ಜಾಥಾದಲ್ಲಿ ಪಾಲ್ಗೊಂಡು ತಮ್ಮ ಬೆಂಬಲ ಸೂಚಿಸಿದರು. ಮಹಿಳೆಯರು ಯುವಕರು, ಮಕ್ಕಳು, ಹಿರಿಯರು , ಚಿಂತಕರು ರಾಜಕಾರಣಿಗಳು, ಸಂಘಟನೆಗಳ ಪದಾಧಿಕಾರಿಗಳು, ಪಕ್ಷಾತೀತವಾಗಿ, ಜಾತ್ಯತೀತವಾಗಿ ಪಾಲ್ಗೊಂಡು ಬಂದ್‌ಗೆ ಬೆಂಬಲ ಸೂಚಿಸಿದರು.

ಬೃಹತ್ ಪ್ರತಿಭಟನೆ ಮೆರವಣಿಗೆಯಲ್ಲಿ ಜನರಿಗೆ ತಂಪು ಪಾನೀಯ, ಮಜ್ಜಿಗೆಯ ವ್ಯವಸ್ಥೆಯನ್ನು ಮಾಡಲಾಗಿತ್ತು.


1 ಬಿಎಸ್‌ಪಿಎಲ್ ಕಾರ್ಖಾನೆ ವಿರೋಧಿಸಿ ಕೊಪ್ಪಳದಲ್ಲಿ ಬಂದ್ ಕರೆ; ವ್ಯಾಪಕ ಬೆಂಬಲ

2 ಗವಿಮಠದ ಆವರಣದಲ್ಲಿ ಶ್ರೀ ಗವಿಸಿದ್ದೇಶ್ವರ ಮಹಾ ಸ್ವಾಮೀಜಿಗಳಿಂದ ಚಾಲನೆ

3 ಸ್ವಯಂ ಪ್ರೇರಿತ ಅಂಗಡಿ ಮುಂಗಟ್ಟುಗಳು ಬಂದ್

### ಏನಿದು ಉಕ್ಕು ಕಾರ್ಖಾನೆ ಪ್ರಕರಣ..?

ಕೊಪ್ಪಳದ ಕೈಗಾರಿಕಾ ಪ್ರದೇಶ ಹಾಲವರ್ತಿಯಲ್ಲಿ ಬಲ್ದೋಟಾ ಕಂಪನಿಯಿಂದ ಉಕ್ಕಿನ ಕಾರ್ಖಾನೆ ನಿರ್ಮಾಣ ಮಾಡಲಾಗುತ್ತಿದೆ. ಇದು 54 ಸಾವಿರ ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗ್ತಿರೋ ರಾಜ್ಯದ ಎರಡನೇ ಅತಿ ದೊಡ್ಡ ಸ್ಟೀಲ್ ಕಾರ್ಖಾನೆ. ಜರ್ಮನ್ ತಂತ್ರಜ್ಞಾನವನ್ನು ಬಳಸಿ ಉಕ್ಕಿನ ಕಾರ್ಖಾನೆ ನಿರ್ಮಾಣ ಮಾಡಲಾಗುತ್ತಿದ್ದು, ಇದು 13 ದಶಲಕ್ಷ ಟನ್ ಉತ್ಪಾದನೆ ಮಾಡುವ ಸಾಮರ್ಥ್ಯ ಹೊಂದಿದೆ. ಈ ಕಾರ್ಖಾನೆ ನಿರ್ಮಾಣಕ್ಕೆ ಸರ್ಕಾರ ಈಗಾಗ್ಲೆ ಸಹಿ ಹಾಕಿದ್ದು, ಕಂಪನಿ ಈಗಾಗಲೇ 15,000 ಮಾನವ ಸಂಪನ್ಮೂಲ ಆಯ್ಕೆ ಪ್ರಕ್ರಿಯೆ ನಡೆಸಿದೆ. ಕೊಪ್ಪಳದ ಕೈಗಾರಿಕಾ ಪ್ರದೇಶದಲ್ಲಿ 200ಕ್ಕೂ ಹೆಚ್ಚು ಸ್ಟೀಲ್ ಕಾರ್ಖಾನೆಗಳು ಇವೆ. ಈಗಾಗಲೇ ಕಾರ್ಖಾನೆಗಳ ಹೊಗೆಯಿಂದ ಇಲ್ಲಿನ ಗ್ರಾಮಸ್ಥರು ನಲುಗಿ ಹೋಗಿದ್ದಾರೆ. ಕಾರ್ಖಾನೆ ಹೊರಸೂಸುವ ಹೊಗೆ, ಧೂಳಿನಿಂದ ಪರಿಸರ ಕಲುಷಿತ ಆಗಿದೆ. ಗ್ರಾಮದ ಜನರ ಆರೋಗ್ಯದ ಮೇಲೆ ಪರಿಣಾಮ ಬೀರಿದ್ದು, ರೈತರು ಬೆಳೆದ ಬೆಳೆಗಳಿಗೆ ಹಾನಿಯಾಗುತ್ತಿದೆ. ಈಗಾಗ್ಲೇ ಕಾರ್ಖಾನೆಗಳ ಹೊಗೆಯಿಂದ ಜನರು ನಲುಗಿ ಹೋಗಿದೆ.



## ಕೊಹ್ಲಿ ಒಬ್ಬ ಆರ್‌ಎಸ್‌ಎಸ್ ಕಾರ್ಯಕರ್ತ: ಸುಳ್ಳು ಪೋಸ್ಟ್‌ಗೆ ಕೆಪಿಸಿಸಿ ವಕ್ತಾರ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಭಾರತ ಕ್ರಿಕೆಟ್ ತಂಡದ ಸ್ಟಾರ್ ಬ್ಯಾಟರ್ ವಿರಾಟ್ ಕೊಹ್ಲಿ ಅಭಿಮಾನಿಗಳು ಪಾಕಿಸ್ತಾನದ ಗಡಿಯಾಚೆಯೂ ಇದ್ದಾರೆ. ವಿರಾಟ್ ಕೊಹ್ಲಿಗೆ ಭಾರತೀಯ ಅಭಿಮಾನಿಗಳಿಂದ ಸಿಗುವ ಪ್ರೀತಿಗಿಂತ ಪಾಕಿಸ್ತಾನದಲ್ಲಿ ಹೆಚ್ಚಿನ ಅಭಿಮಾನಿಗಳಿದ್ದಾರೆ. ಭಾನುವಾರ ದುಬೈ ಅಂತಾರಾಷ್ಟ್ರೀಯ ಸ್ಟೇಡಿಯಂ ನಡೆದ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಅವರ ಅದ್ಭುತ ಶತಕದ ನೆರವಿನಿಂದ ಭಾರತ ತಂಡ ಪಾಕಿಸ್ತಾನವನ್ನು 6 ವಿಕೆಟ್‌ಗಳಿಂದ ಸೋಲಿಸಿತು. ಇದರೊಂದಿಗೆ 2025ರ ಚಾಂಪಿಯನ್ಸ್ ಟ್ರೋಫಿಯಿಂದ ಪಾಕಿಸ್ತಾನ ಹೊರಬಿದ್ದಿತು. ಆದರೆ, ಪಾಕಿಸ್ತಾನಿ ಅಭಿಮಾನಿಗಳು ವಿರಾಟ್ ಕೊಹ್ಲಿ ಶತಕವನ್ನು ಆಚರಿಸಿದ್ದಾರೆ.

ಇದರ ಮಧ್ಯ, ವಿರಾಟ್ ಕೊಹ್ಲಿ ಆರ್‌ಎಸ್‌ಎಸ್ ಕಾರ್ಯಕರ್ತ ಎನ್ನುವ ಪೋಸ್ಟ್ ಸಹ ಹರಿದಾಡುತ್ತಿದೆ. ಕೆಪಿಸಿಸಿ ವಕ್ತಾರ ಎಂ ಲಕ್ಷ್ಮಣ್ ಹೆಸರಿನಲ್ಲಿ ಪೋಸ್ಟ್ ಮಾಡಲಾಗಿದ್ದು, ಇದೀಗ ಇದಕ್ಕೆ ಸ್ವತಃ ಲಕ್ಷ್ಮಣ್ ಅವರೇ ಸ್ಪಷ್ಟೀಕರಣ ನೀಡಿದ್ದಾರೆ.



**ಕಾನೂನು ಹೋರಾಟದ ಎಚ್ಚರಿಕೆ**

ತಮ್ಮ ಹೆಸರಿನಲ್ಲಿ ವಿರಾಟ್ ಕೊಹ್ಲಿ ಬಗ್ಗೆ ಆಕ್ಷೇಪಾರ್ಹ ರೀತಿಯ ಹೇಳಿಕೆಯ ಪೋಸ್ಟ್ ಬಗ್ಗೆ ಸ್ಪಷ್ಟನೆ ನೀಡಿದ ಕೆಪಿಸಿಸಿ ವಕ್ತಾರ ಎಂ ಲಕ್ಷ್ಮಣ, ಬಿಜೆಪಿಯವರಿಗೆ ನಾಚಿಕೆ ಮಾನ ಮರ್ಯಾದೆ ಇಲ್ಲ. ಈ ರಾಜ್ಯದ ಜನತೆಗೆ ಬರೀ ಸುಳ್ಳನ್ನ ಹೇಳುತ್ತಾ ಬಂದಿದ್ದಾರೆ. ಅದಕ್ಕೆ ಇದೊಂದು ಸಣ್ಣ ಉದಾಹರಣೆ. ನನ್ನ ಹೆಸರಿನಲ್ಲಿ ಸಾಮಾಜಿಕ ಜಾಲತಾಣದಲ್ಲಿ ವಿರಾಟ್ ಕೊಹ್ಲಿಯ ಹೆಸರನ್ನು ಬಳಸಿಕೊಂಡು ಹಿಂದುಗಳ ಭಾವನೆಯನ್ನು ಕೆಣಿಸುವಂತಹ ಪೋಸ್ಟ್‌ಗಳನ್ನು ಹಾಕಿದ್ದಾರೆ. ಇದು ನಾಚಿಕೆಗೇಡಿನ ಸಂಗತಿ/ ಸದ್ಯದಲ್ಲೇ ಅವರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟನೆ ನೀಡುವ ಮೂಲಕ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಟೀಂ ಇಂಡಿಯಾ ಪಾಕಿಸ್ತಾನ ವಿರುದ್ಧ ಗೆದ್ದು ಬೀಗಿದೆ. ಅದರಲ್ಲೂ ವಿರಾಟ್ ಕೊಹ್ಲಿ ಶತಕ ಬಾರಿಸಿದ್ದಕ್ಕೆ ಮೆಚ್ಚುಗೆ ಪೋಸ್ಟ್‌ಗಳು ಹರಿದಾಡುತ್ತಿವೆ. ಇದರ ಮಧ್ಯ, ಕೆಪಿಸಿಸಿ ವಕ್ತಾರ ಎಂ ಲಕ್ಷ್ಮಣ್ ಹೆಸರಿನಲ್ಲಿ ವಿರಾಟ್ ಕೊಹ್ಲಿ ಬಗ್ಗೆ ಆಕ್ಷೇಪಾರ್ಹ ರೀತಿ ಹೇಳಿಕೆ ಪೋಸ್ಟ್ ವೈರಲ್ ಆಗಿತ್ತು. ಪಾಕ್ ನೆಲದಲ್ಲಿ ಪಾಕಿಗಳ ಎದುರೇ ಶತಕ ಸಿಡಿಸಿ ಪಾಕಿಗಳಿಗೆ ಅವಮಾನ ಮಾಡಿ ಭಾರತ ಗೆದ್ದು ಬಂದಿದ್ದು ನೋಡಿದರೆ ವಿರಾಟ್ ಕೊಹ್ಲಿ ಒಬ್ಬ ಆರ್‌ಎಸ್‌ಎಸ್ ಕಾರ್ಯಕರ್ತನೇ ಇರಬೇಕು ಎಂದು ಎಂ ಲಕ್ಷ್ಮಣ್ ಹೆಸರಿನಲ್ಲಿ ಪೋಸ್ಟ್ ಮಾಡಲಾಗಿತ್ತು. ಇದೀಗ ಇದಕ್ಕೆ ಸ್ವತಃ ಎಂ ಲಕ್ಷ್ಮಣ್ ಸ್ಪಷ್ಟನೆ ನೀಡಿದ್ದಾರೆ.

# ಐಎಂಎ ಹಗರಣ: ಹಣ ಕಳೆದುಕೊಂಡವರಿಗೆ ಸಿಗಲಿದೆ ಪರಿಹಾರದ ಮೊತ್ತ

### ಹಣ ಕಳೆದುಕೊಂಡ ಎಲ್ಲಾ ಠೇವಣಿದಾರರಿಗೂ ನಿಗದಿತ ಪರಿಹಾರದ ಹಣ ನೀಡಲು ಸೂಕ್ತ ಕ್ರಮ

• ಉದಯವಾಹಿನಿ, ಬೆಂಗಳೂರು


ಐಎಂಎ (ಐ-ಮಾನಿಟರಿ ಅಡ್ವೈಸರಿ) ಬಹುಕೋಟಿ ವಂಚನೆ ಪ್ರಕರಣದಿಂದಾಗಿ ಹಣ ಕಳೆದುಕೊಂಡ ಎಲ್ಲಾ ಠೇವಣಿದಾರರಿಗೂ ರಂಜಾನ್ ಹಬ್ಬಕ್ಕೂ ಮುನ್ನ ನಿಗದಿತ ಪರಿಹಾರದ ಹಣವನ್ನು ನೀಡಲು ಸೂಕ್ತ ಕ್ರಮವಹಿಸಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಭರವಸೆ ನೀಡಿದರು.

**ಐಎಂಎ ಹಗರಣದ ಮೊತ್ತ ಎಷ್ಟು?:** ಈವರೆಗೆ ಈ ಸಂಸ್ಥೆಯ ಎಷ್ಟು ಕೋಟಿ ಮೌಲ್ಯದ ಸ್ಥಿರಾಸ್ತಿ/ಚರಾಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ? ಕಳೆದ ಏಳು ವರ್ಷದಲ್ಲಿ ಈ ಕಂಪೆನಿಯಲ್ಲಿ ಹಣ ಹೂಡಿ ಕಳೆದುಕೊಂಡ ಎಷ್ಟು ಜನರಿಗೆ ಎಷ್ಟು ಪ್ರಮಾಣದಲ್ಲಿ ಹಣ ಹಿಂತಿರುಗಿಸಲಾಗಿದೆ ಮತ್ತು ಉಳಿದ ಸಂತ್ರಸ್ತರಿಗೆ ಯಾವಾಗ ಮತ್ತು ಹೇಗೆ ಹಣ ಹಿಂತಿರುಗಿಸಬೇಕು? ಎಂಬ ಕುರಿತು ಸೋಮವಾರ ವಿಕಾಸಸೌಧ ಕಚೇರಿಯಲ್ಲಿ ಸಭೆ ನಡೆಸಿ ಚರ್ಚಿಸಲಾಯಿತು. ಈ ಸಭೆಯಲ್ಲಿ ಸಚಿವರಾದ ಜಮೀರ್ ಅಹ್ಮದ್ ಖಾನ್, ಶಾಸಕರಾದ ರಿಜ್ವಾನ್ ಅರ್ಷದ್, ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ಅವರ ಜೊತೆಗೆ ಐಎಂಎ ಹಗರಣದಿಂದ ಹಣ ಕಳೆದುಕೊಂಡ ಹಲವರು ಭಾಗಿಯಾಗಿದ್ದರು. ಈ ವೇಳೆ ಸಂತ್ರಸ್ತರಿಗೆ ಭರವಸೆ ನೀಡಿದ ಸಚಿವ ಕೃಷ್ಣ ಬೈರೇಗೌಡ ಅವರು, ''ರಂಜಾನ್ ಹಬ್ಬಕ್ಕೂ ಹತ್ತು ದಿನ ಮೊದಲೇ ಐಎಂಎನಲ್ಲಿ ಹಣ ಹೂಡಿ ಮೋಸ ಹೋದವರಿಗೆ ಅವರ ಹೂಡಿಕೆಯ ಅನುಪಾತದ ಆಧಾರದಲ್ಲಿ ಪರಿಹಾರ ನೀಡಲು ಕ್ರಮವಹಿಸಲಾಗುವುದು, ಎಂದರು.

**ಸಚಿವ ಕೃಷ್ಣಬೈರೇಗೌಡ ಭರವಸೆ**







ಐಎಂಎ ಕಂಪೆನಿಗೆ ಸಂಬಂಧಿಸಿದ ಹತ್ತಕ್ಕೂ ಹೆಚ್ಚು ಆಸ್ತಿಗಳನ್ನು ಈಗಾಗಲೇ ಸರ್ಕಾರ ವಶಕ್ಕೆ ಪಡೆದಿದೆ. ಚರಾಸ್ಥಿಗಳ ಮೌಲ್ಯ 106.92 ಕೋಟಿ ಹಾಗೂ ಸ್ಥಿರಾಸ್ತಿಗಳ ಮೌಲ್ಯ 401.92 ಕೋಟಿ ರೂ. ಎಂದು ಅಂದಾಜಿಸಲಾಗಿದೆ. ಇದಲ್ಲದೆ, ಕಂಪೆನಿಗೆ ಸಂಬಂಧಿಸಿದ ವಿವಿಧ ಬ್ಯಾಂಕ್ ಖಾತೆಗಳಿಂದ 2.88 ಕೋಟಿ ರೂ., ನಗದು ಹಣ 11.72 ಕೋಟಿ ರೂ., ಹೂಡಿಕೆ ಪತ್ರ 11.06 ಕೋಟಿ ರೂ. ಸೇರಿದಂತೆ ಒಟ್ಟಾರೆ 534.5 ಕೋಟಿ ರೂ.ಗಳನ್ನು ಸರ್ಕಾರ ಮುಟ್ಟುಗೋಲು ಹಾಕಿದೆ. ನ್ಯಾಯಮೂರ್ತಿ ಜಸ್ಟೀಸ್ ನಾಗಪ್ರಸನ್ನ ಪೀಠದ ಆದೇಶದಂತೆ ಶೀಘ್ರವೇ ಈ ಆಸ್ತಿಗಳನ್ನು ಹರಾಜಿಗೊಳಪಡಿಸಿ ಇದರಿಂದ ಬಂದ ಹಣವನ್ನು ಹೂಡಿಕೆದಾರರಿಗೆ ಹಿಂತಿರುಗಿಸಲಾಗುವುದು

– ಕೃಷ್ಣ ಬೈರೇಗೌಡ, ಸಚಿವ

ಹಣ ಡಬ್ಲಿಂಗ್ ಆಸೆಯಿಂದಾಗಿ ಸುಮಾರು ಒಂದು ಲಕ್ಷಕ್ಕೂ ಅಧಿಕ ಠೇವಣಿದಾರರು 3213.58 ಕೋಟಿ ರೂ.ಗಳನ್ನು ಐಎಂಎ ಕಂಪೆನಿಯಲ್ಲಿ ಹೂಡಿಕೆ ಮಾಡಿ ಮೋಸ ಹೋಗಿದ್ದಾರೆ. ಕಂಪೆನಿಯ ಒಟ್ಟು ಠೇವಣಿದಾರರ ಸಂಖ್ಯೆ 69069. ಈ ಪೈಕಿ 1,400 ಕೋಟಿ ರೂ.ಗಳನ್ನು ಲಾಭಾಂಶದ ಮಾದರಿಯಲ್ಲಿ ಐಎಂಎ ಕಾಲಕಾಲಕ್ಕೆ ಠೇವಣಿದಾರರಿಗೆ ನೀಡುತ್ತಾ ಬಂದಿದೆ. ಹಗರಣ ಬೆಳಕಿಗೆ ಬಂದ ನಂತರ ವಿಶೇಷ ನ್ಯಾಯಾಲಯದ ಆದೇಶದಂತೆ ಕಂಪೆನಿ ಖಾತೆಯಲ್ಲಿದ್ದ 19.12 ಕೋಟಿ ರೂ.ಗಳನ್ನು 50,000 ರೂ.ಗಳಂತೆ 6,858 ಜನ ಸಂತ್ರಸ್ತರ ಖಾತೆಗಳಿಗೆ 2022 ಏಪ್ರಿಲ್‌ನಲ್ಲಿ ಜಮೆ ಮಾಡಲಾಗಿತ್ತು. 66.66 ಕೋಟಿ ರೂ.ಗಳನ್ನು 53,142 ಜನ ಸಂತ್ರಸ್ತರ ಖಾತೆಗಳಿಗೆ 2023ರ ನವೆಂಬರ್ 8ರಂದು ಜಮೆ ಮಾಡಲಾಗಿತ್ತು. 1.28 ಕೋಟಿ ರೂ.ಗಳನ್ನು 626 ಸಂತ್ರಸ್ತರ ಖಾತೆಗಳಿಗೆ 2024ರ ಮೇ 23ರಂದು ಜಮೆ ಮಾಡಲಾಗಿತ್ತು. 276 ಜನ ಸಂತ್ರಸ್ತರಿಗೆ 36.14 ಲಕ್ಷ ರೂ.ಗಳನ್ನು 2024ರ ನವೆಂಬರ್ 7ರಂದು ಜಮೆ ಮಾಡಲಾಗಿತ್ತು. ಒಟ್ಟಾರೆ ಈವರೆಗೆ 87.43 ಕೋಟಿ ರೂ.ಗಳನ್ನು 60,902 ಜನ ಸಂತ್ರಸ್ತರ ಖಾತೆಗಳಿಗೆ ಜಮೆ ಮಾಡಲಾಗಿದೆ ಎಂದು ಸಭೆಯಲ್ಲಿ

### ಅರ್ಹ ಸಂತ್ರಸ್ತರಿಗೆ ಹರಿಹಾರ

ಐಎಂಎ ಹಗರಣ ಬೆಳಕಿಗೆ ಬಂದಾಗಲೇ ಸರ್ಕಾರ ಸಂತ್ರಸ್ತರನ್ನು ಗುರುತಿಸಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಕಾಶ ನೀಡಿತ್ತು. ಈ ವೇಳೆ ಐಎಂಎ ಜೊತೆ ಆರ್ಥಿಕ ವ್ಯವಹಾರ ಮಾಡಿದ ಬ್ಯಾಂಕ್ ಖಾತೆ ಚಾಲ್ತಿಯಲ್ಲಿದ್ದರೆ ಅದನ್ನೇ ಅಧಿಕೃತ ಎಂದು ಪರಿಗಣಿಸಲಾಯಿತು. ಒಂದು ವೇಳೆ ಖಾತೆ ನಿಷ್ಕ್ರಿಯವಾಗಿದ್ದರೆ ಠೇವಣಿಪತ್ರ, ಷೇರುಪ್ರಮಾಣ ಪತ್ರದಂತಹ ದಾಖಲಾತಿಗಳನ್ನು ಕೋರಿತ್ತು. ಅರ್ಜಿ ಸಲ್ಲಿಸುವವರ ಮಾಹಿತಿಗಳನ್ನು ಐಎಂಎ ಸಂಸ್ಥೆಯಲ್ಲಿರುವ ದತ್ತಾಂಶಗಳೊಂದಿಗೆ ಹೊಂದಾಣಿಕೆ ಮಾಡಿ ಹಾಗೂ ಆಧಾರ್ ಕಾರ್ಡ್, ಇತರ ಮಾಹಿತಿಗಳನ್ನು ಸಮೀಕರಿಸಿ ಅರ್ಹ ಫಲಾನುಭವಿಗಳನ್ನು ಗುರುತಿಸಲಾಗಿದೆ. ಒಂದು ವೇಳೆ ಫಲಾನುಭವಿಗಳು ಮೃತಪಟ್ಟಿದ್ದರೆ ಠೇವಣಿದಾರರು ಸೂಚಿಸಿರುವ ನಾಮನಿರ್ದೇಶಿತ ವ್ಯಕ್ತಿಗಳಿಗೆ ಆ ಹಣವನ್ನು ನೀಡಲು ಕ್ರಮವಹಿಸಲಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,787 /Gram24ct ₹8,055/Gram22ct | ಬೆಳ್ಳಿ: ₹101.00/Gram

# ಪೊಲೀಸ್ ಠಾಣೆಗೆ ಕಲ್ಲು ತಂದು ಹೊಡೆದವರನ್ನು ರಕ್ಷಿಸಬೇಕೇ?

• **ಉದಯವಾಹಿನಿ, ಮೈಸೂರು**

ಉದಯಗಿರಿ ಪೊಲೀಸ್ ಠಾಣೆಯ ಮೇಲೆ ಕಲ್ಲು ತೂರಾಟ ಪ್ರಕರಣ ಸಂಬಂಧ ಮೂಟೆಗಟ್ಟಲೆ ಕಲ್ಲು ತೆಗೆದುಕೊಂಡು ಬಂದು ಹೊಡೆದವರನ್ನ ರಕ್ಷಣೆ ಮಾಡಬೇಕಾ? ಕ್ರಮ ತೆಗೆದುಕೊಳ್ಳಬೇಕಾದದ್ದು ರಾಜ್ಯ ಸರ್ಕಾರದ ಕರ್ತವ್ಯ ಎಂದು ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಕಿಡಿಕಾರಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುವೆಂಪು ಅವರ ಸಂದೇಶ ಜಾರಿಗೆ ಬರಬೇಕು. ರಾಜ್ಯ ಸರ್ವಜನಾಂಗದ ಶಾಂತಿಯ ತೋಟ ಆಗಿ ಉಳಿಯಬೇಕು ಎಂದರು. ಸಮಾಜಕ್ಕೆ ರಕ್ಷಣೆ ನೀಡಬೇಕೆಂದು ಹೋಗುತ್ತೀರಿ. ಮತ್ತೊಂದೆಡೆ ಅವರು ಭದ್ರವಾಗುತ್ತಾ ಹೋಗುತ್ತಾರೆ. ಎರಡೂ ಪಕ್ಷದ ನಾಯಕರಿಗೆ


ಉದಯವಾಹಿನಿ ಚಿತ್ರ

ಮನವಿ ಮಾಡಿಕೊಳ್ಳುತ್ತೇನೆ. ರಾಜ್ಯದಲ್ಲಿ ಹಲವು ಜ್ವಲಂತ ಸಮಸ್ಯೆಗಳಿಗೆ ಇಂತಹವರನ್ನ ಬಲಿ ಹಾಕಲೇಬೇಕು. ಪೊಲೀಸ್ ವಾಹನದ ಮೇಲೆ ಕಲ್ಲು ತೂರಿದವರನ್ನ ಬಲಿ ಹಾಕಬೇಕು. ಎಷ್ಟು ದಿನ ಅಂತ ಇದನ್ನ ಸಹಿಸಿಕೊಳ್ಳುತ್ತೀರಿ. ಯಾರನ್ನೋ ಓಲೈಸಲು ಸರ್ಕಾರ ಇಲ್ಲ. ಕಾನೂನು ಬಾಹಿರ ಚಟುವಟಿಕೆ ನಡೆಸುವವನು ಯಾರೇ ಇರಲಿ ಕ್ರಮ ತೆಗೆದುಕೊಳ್ಳಬೇಕಾದದ್ದು ರಾಜ್ಯ ಸರ್ಕಾರದ ಕರ್ತವ್ಯ ಎಂದರು. ರೈತರು, ಮಹಿಳೆಯರು, ಯುವಕರು, ಮಧ್ಯಮ ವರ್ಗದ ಜನರಿಗೆ ಅನುಕೂಲ ಮಾಡುವುದು ಈ ಬಾರಿಯ ಬಜೆಟ್ ಆಶಯವಾಗಿದೆ. ಈ ಬಾರಿ 50 ಲಕ್ಷ ಕೋಟಿ ರೂ ಆಯವ್ಯಯ ಮಂಡನೆ ಮಾಡಲಾಗಿದೆ. 11.20 ಲಕ್ಷ ಕೋಟಿ ರೂ ಕ್ಯಾಪಿಟಲ್ ಎಕ್ಸ್‌ಪೆಂಡಿಚರ್ ಗೆ ತೀರ್ಮಾನ ಮಾಡಲಾಗಿದೆ.

ರೈತರ ಕೃಷಿವಲಯಕ್ಕೆ 1.72 ಲಕ್ಷ ರೂ. ಅನುದಾನ ನೀಡಲಾಗುತ್ತಿದೆ. ಹಿಂದುಳಿದ ನೂರು ಜಿಲ್ಲೆಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಸ್ಟಾರ್ಟಪ್‌ಗಳ ಮೂಲಕ ಆ ಜಿಲ್ಲೆಗಳ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದು ಅವರು ಹೇಳಿದರು.

**ಗೃಹಸಚಿವರಿಗೆ ಪೊಲಿಟಿಕಲ್ ವೈರಾಗ್ಯ**

**ಗೃಹ ಸಚಿವರು ರಾಜೀನಾಮೆ ನೀಡುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಗೃಹಸಚಿವರಿಗೆ ಪೊಲಿಟಿಕಲ್ ವೈರಾಗ್ಯ ಬಂದ ಆಗಿದೆ ಎಂದು ವ್ಯಂಗ್ಯವಾಡಿದರು. ಮಹದೇವಪ್ಪ ಹೇಳುತ್ತಾರೆ. ಸಿಎಂ ರೆಕಾರ್ಡ್ ಮಾಡಬೇಕು ಅಂತಾರೆ. ಮಹದೇವಪ್ಪ ಅವರೇ, ಎಷ್ಟು ವರ್ಷ ಆಡಳಿತ ನಡೆಸಿದ್ದೀರಿ ಅನ್ನೋದಲ್ಲ. ಈ ನಾಡಿನ ಜನರ ಎಷ್ಟು ಸಮಸ್ಯೆ ಬಗೆಹರಿಸಿದ್ದೀರಿ ಅನ್ನೋದು ಮುಖ್ಯ ಎಂದರು.**

ಮೀನುಗಾರಿಕೆ, ಹೈನುಗಾರಿಕೆ, ಚರ್ಮೋದ್ಯಮಕ್ಕೆ ಒತ್ತು ನೀಡಲಾಗಿದ್ದು, ಯುವಕರಿಗೆ ಲೆದರ್ ಇಂಡಸ್ಟ್ರಿ ಮೂಲಕ ಉದ್ಯೋಗ ಸೃಷ್ಟಿಸುವ ಗುರಿ ಹೊಂದಿದ್ದೇವೆ ಎಂದು ಸಚಿವರು ಹೇಳಿದರು.

# ಮತ್ತೊಂದು ಬಜೆಟ್ ಬಂದರೂ ಜಾನಪದ ಲೋಕಕ್ಕೆ ಬಾರದ ಅನುದಾನ

## ಕಳೆದ ಬಜೆಟ್‌ನಲ್ಲಿ ವಿಶೇಷ ಅನುದಾನ ಘೋಷಿಸಿದ್ದ ರಾಜ್ಯ ಸರ್ಕಾರ, ಇನ್ನೂ ಬಿಡುಗಡೆ ಆಗದ 1 ಕೋಟಿ

• **ಉದಯವಾಹಿನಿ, ರಾಮನಗರ:**


ಇಲ್ಲಿಯ ಜಾನಪದ ಕಲೆಗಳ ಸಾಂಸ್ಕೃತಿಕ ಕೇಂದ್ರ, ಹಾಗೂ ವಸ್ತು ಸಂಗ್ರಹಾಲಯ ಜಾನಪದ ಲೋಕಕ್ಕೆ ರಾಜ್ಯ ಸರ್ಕಾರ ಕಳೆದ ಬಜೆಟ್‌ನಲ್ಲಿ ಘೋಷಿಸಿದ್ದ 2 ಕೋಟಿ ವಿಶೇಷ ಅನುದಾನದಲ್ಲಿ ಕೇವಲ 1 ಕೋಟಿ ಮಾತ್ರ ಬಿಡುಗಡೆಯಾಗಿದೆ. ಇದೀಗ ಮತ್ತೊಂದು ಬಜೆಟ್ ಸಮೀಪಿಸಿದರೂ ಬಾಕಿ 1 ಕೋಟಿಗೆ ಬಿಡುಗಡೆ ಭಾಗ್ಯ ಸಿಕ್ಕಿಲ್ಲ. ಮತ್ತೊಂದು ಬಜೆಟ್ ಮಂಡನೆಗೂ ಮುಂಚೆ ಹಣ ಬಿಡುಗಡೆಯಾಗದಿದ್ದರೆ ಎಲ್ಲಿ ಅನುದಾನ ಕೈ ತಪ್ಪುವುದೊ ಎಂಬ ಆತಂಕ ಕರ್ನಾಟಕ ಜಾನಪದ ಪರಿಷತ್ತನ್ನು ಕಾಡುತ್ತಿದೆ.

ಬಾಕಿ ಅನುದಾನಕ್ಕಾಗಿ ಜಾನಪದ ಪರಿಷತ್ತಿನ ಅಧ್ಯಕ್ಷ ಹಾಗೂ ಅಧಿಕಾರಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯೊಂದಿಗೆ ಪತ್ರ ವ್ಯವಹಾರ ನಡೆಸುವ ಜೊತೆಗೆ ಕಚೇರಿಗೆ ಅಲೆದು ಹೈರಾಣಾಗಿದ್ದಾರೆ. ಕರ್ನಾಟಕ ಜಾನಪದ ಪರಿಷತ್ತಿನ ಭಾಗವಾಗಿರುವ ಜಾನಪದ ಲೋಕ ಆರ್ಥಿಕ ಬಲವಿಲ್ಲದೆ ಸಂಕಷ್ಟದಲ್ಲಿದೆ. ಇದನ್ನು ಮನಗಂಡಿದ್ದ ಸರ್ಕಾರ ಕಳೆದ ವರ್ಷ ವಿಶೇಷ ಅನುದಾನದ ಕೊಡುಗೆ ನೀಡಿತ್ತು. ಸಾಂಸ್ಕತಿಕ ಪರಂಪರೆ ಸಂರಕ್ಷಣೆಯ ಉದ್ದೇಶಕ್ಕಾಗಿ ಪರಿಷತ್ತು ಯುನೆಸ್ಕೊ ಮಾನ್ಯತೆ ಪಡೆದಿದೆ. ಆದರೆ, ವರ್ಷವಾಗುತ್ತಾ ಬಂದರೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಣ ಬಂದಿಲ್ಲ. ಇದರಿಂದ ಜಾನಪದ ಲೋಕದ ಚಟುವಟಿಕೆಗಳಿಗೆ ಹಿನ್ನಡೆಯಾಗಿದೆ.

ಕಳೆದ ಬಜೆಟ್‌ನಲ್ಲಿ ಘೋಷಿಸಿದ್ದ ವಿಶೇಷ ಅನುದಾನದ 2 ಕೋಟಿ ಪೈಕಿ ಬಾಕಿ 1 ಕೋಟಿ ಬಿಡುಗಡೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಮನವಿ ಮಾಡುತ್ತಲೇ ಇದ್ದೇವೆ. ಈಗಾಗಲೇ ಬಿಡುಗಡೆಯಾದ 1 ಕೋಟಿ ಮೊತ್ತದ ಖರ್ಚುವೆಚ್ಚದ ಲೆಕ್ಕದ ಮಾಹಿತಿ ಕೊಡುವಂತೆ ಇಲಾಖೆ ಕೇಳಿತ್ತು. ಅದನ್ನು ಸಹ ಕೊಟ್ಟಿದ್ದೇವೆ. ಆದರೂ ಹಣ ಬಂದಿಲ್ಲ ಎಂದು ಜಾನಪದ ಪರಿಷತ್ತಿನ ಅಧ್ಯಕ್ಷ ಪ್ರೊ.ಹಿ.ಚಿ. ಬೋರಲಿಂಗಯ್ಯ ತಿಳಿಸಿದರು. ಜಾನಪದ ಕಲೆ ಹಾಗೂ ಕಲಾವಿದರನ್ನು 31 ವರ್ಷಗಳಿಂದ ಪೋಷಿಸಿಕೊಂಡು ಬರುತ್ತಿರುವ ಜಾನಪದ ಲೋಕವು ಶಾಶ್ವತ ಅನುದಾನಿತ ಸಂಸ್ಥೆಯಾಗಿದ್ದು ಇತ್ತೀಚಿನ ವರ್ಷಗಳಲ್ಲಿ ಆರ್ಥಿಕ ಸಂಕಷ್ಟದಲ್ಲೇ ಮುನ್ನಡೆಯುತ್ತಿದೆ. ಸರ್ಕಾರದಿಂದ ಪ್ರತಿ ವರ್ಷ 1 ಕೋಟಿ ಮಾತ್ರ ಬಿಡುಗಡೆಯಾಗುತ್ತದೆ. ಬಹುತೇಕ ಆ ಮೊತ್ತವು ಇಲ್ಲಿ ಕೆಲಸ ಮಾಡುವ 30 ಸಿಬ್ಬಂದಿಯ ಸಂಬಳಕ್ಕೆ ವ್ಯಯವಾಗುತ್ತದೆ ಎಂದು ಹೇಳಿದರು.

ಸಿಬ್ಬಂದಿ ಸಂಬಳಕ್ಕೆ ಹಿಂದೆ ಇಲಾಖೆ ನೀಡುತ್ತಿದ್ದ ಪ್ರತ್ಯೇಕ ಅನುದಾನವನ್ನು ಮೂರು ವರ್ಷದಿಂದ ಸ್ಥಗಿತಗೊಳಿಸಲಾಗಿದೆ. ಸಿಬ್ಬಂದಿಗೆ ಸಂಬಳ ಹೆಚ್ಚಳ ಮಾಡಲಾಗದ ಸ್ಥಿತಿಯಲಿದ್ದು, ಕಡಿಮೆ ಸಂಬಳಕ್ಕೆ ಅವರು ದುಡಿಯುತ್ತಿದ್ದಾರೆ.

ಪ್ರವೇಶ ಶುಲ್ಕ ಮತ್ತು ಹೋಟೆಲ್ ಬಾಡಿಗೆ ಮೊತ್ತದಲ್ಲೇ ಲೋಕೋತ್ಸವ, ಕಲಾವಿದರ ಸಂಭಾವನೆ ಸೇರಿದಂತೆ ಲೋಕದ ಚಟುವಟಿಕೆಗಳು, ನಿರ್ವಹಣೆಯನ್ನು ಸರಿದೂಗಿಸಿಕೊಂಡು ಹೋಗಲಾಗುತ್ತಿದೆ ಎಂದರು.


ಉದಯವಾಹಿನಿ ಚಿತ್ರ

**1 ಕೋಟಿಗೆ ಬಿಡುಗಡೆ ಭಾಗ್ಯ ಸಿಕ್ಕಿಲ್ಲ**



**ಜಾನಪದ ಲೋಕಕ್ಕೆ ಬರಬೇಕಾದ ಬಾಕಿ 1 ಕೋಟಿ ವಿಶೇಷ ಅನುದಾನದ ಜೊತೆಗೆ ಇಲ್ಲಿನ ಕಾರ್ಯಚಟುವಟಿಕೆ ಮತ್ತು ಅಭಿವೃದ್ಧಿ ಕಾರ್ಯಗಳಿಗಾಗಿ ಈ ಸಲದ ಬಜೆಟ್‌ನಲ್ಲಿ 5 ಕೋಟಿ ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿಗೆ ಮನವಿ ಮಾಡಲಾಗಿದೆ**

**-ಪ್ರೊ.ಹಿ.ಚಿ. ಬೋರಲಿಂಗಯ್ಯ**
**ಅಧ್ಯಕ್ಷ ಕರ್ನಾಟಕ ಜಾನಪದ ಪರಿಷತ್ತು**

**ಹುದ್ದೆ ಭರ್ತಿಗೂ ಗ್ರಹಣ**

**ಮುಂಚೆ ಸರ್ಕಾರದಿಂದ ಲೋಕಕ್ಕೆ 11 ಹುದ್ದೆ ಮಂಜೂರಾಗಿದ್ದವು. ಆ ಪೈಕಿ 9 ಮಂದಿ ಈಗಾಗಲೇ ನಿವೃತ್ತರಾಗಿದ್ದು, ಸದ್ಯ ಇಬ್ಬರಷ್ಟೇ ಉಳಿದಿದ್ದಾರೆ. ಆ ಹುದ್ದೆಗಳ ಮರು ಭರ್ತಿಗೂ ಸರ್ಕಾರ ಮುಂದಾಗುತ್ತಿಲ್ಲ. ಇದರಿಂದಾಗಿ, ಲೋಕದ ಕಾರ್ಯಚಟುವಟಿಕೆಗಳಿಗೂ ಮಾನವ ಸಂಪನ್ಮೂಲದ ಕೊರತೆ ಎದುರಾಗಿದೆ ಎಂದು ಬೋರಲಿಂಗಯ್ಯ ಅಸಮಾಧಾನ ವ್ಯಕ್ತಪಡಿಸಿದರು.**

# ಹಾರೋಹಳ್ಳಿಯಲ್ಲಿ ಇಲ್ಲ ಅಗ್ನಿಶಾಮಕ ಠಾಣೆ

• **ಉದಯವಾಹಿನಿ, ಹಾರೋಹಳ್ಳಿ**

ಹಾರೋಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಅಗ್ನಿ ಅವಘಡಗಳು ಹೆಚ್ಚಾಗಿದ್ದು, ಆದರೆ ಅದನ್ನು ತಡೆಯಲು ಸುಸಜ್ಜಿತ ಅಗ್ನಿ ಶಾಮಕ ಠಾಣೆ ಸನಿಹದಲ್ಲೇ ಇಲ್ಲದೆ ಜನರಲ್ಲಿ ಆತಂಕ ಕಾಡುತ್ತಿದೆ. 400ಕ್ಕೂ ಅಧಿಕ ಕೈಗಾರಿಕೆಗಳಿರುವ ಹಾರೋಹಳ್ಳಿಯಲ್ಲಾಗಲಿ, ಬಿಡದಿಯಲ್ಲಾಗಲಿ ಅಗ್ನಿಶಾಮಕ ಠಾಣೆಯೇ ಇಲ್ಲವಾಗಿದೆ.

ಏನೇ ಅಗ್ನಿ ಅವಘಡ ಸಂಭವಿಸಿದರೂ ರಾಮನಗರ ಇಲ್ಲವೇ ಕನಕಪುರದಿಂದ ಅಗ್ನಿಶಾಮಕ ಸಿಬ್ಬಂದಿ ಬರಬೇಕಾಗಿದೆ. ಹೆಚ್ಚುವರಿ ನೆರವು ಬೇಕಾದರಂತೂ ಬೆಂಗಳೂರಿನಿಂದಲೇ ಬರಬೇಕಿದೆ. ತಿಂಗಳ ಅಂತರದಲ್ಲಿ ಟೈರ್ ಕಾರ್ಖಾನೆ ಮತ್ತು ತ್ಯಾಜ್ಯ ನಿರ್ವಹಣೆ ಗೋದಾಮಿನಲ್ಲಿ ಅಗ್ನಿ ಅವಘಡ ಸಂಭವಿಸಿದ್ದು, ಲಕ್ಷಾಂತರ ರೂಪಾಯಿ ನಷ್ಟ ಆಗಿದೆ. ಇಷ್ಟೆಲ್ಲಾ ಅವಾಂತರ ಆದರೂ ಕೂಡ ಜಿಲ್ಲಾಡಳಿತ ಎಚ್ಚೆತ್ತುಕೊಳ್ಳದಿರುವುದು ದುರಂತವೇ ಸರಿ.

**ಇಚ್ಛಾಶಕ್ತಿ ಕೊರತೆ:** ಕಳೆದ ಎರಡು - ಮೂರು ವರ್ಷಗಳ ಹಿಂದೆಯೇ ಹಾರೋಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಅಗ್ನಿಶಾಮಕ ಠಾಣೆ ಮಂಜೂರು ಮಾಡಿ, ಆದೇಶ ಹೊರಡಿಸಲಾಗಿದೆ. ಆದರೆ ಇದುವರೆಗೂ ಜಾಗ ಗುರುತಿಸಿರುವುದು ಬಿಟ್ಟರೆ, ಅನುದಾನ ನೀಡಿ ಠಾಣೆ ನಿರ್ಮಿಸಿ, ಅವಘಡ ಸಂಭವಿಸದಂತೆ ಎಚ್ಚರಿಕೆ ತಗೆದುಕೊಳ್ಳುವ ಇಚ್ಛಾಶಕ್ತಿ ಕೊರತೆ ಇದೆ.

ಹಾರೋಹಳ್ಳಿಯಲ್ಲಿ ಅಗ್ನಿಶಾಮಕ ಠಾಣೆ ನಿರ್ಮಾಣವಾಗಿದ್ದರೆ ಅಗ್ನಿ ಅವಘಡ ಸಂಭವಿಸಿದಾಗ ಶೀಘ್ರ, ಬೆಂಕಿ ನಂದಿಸಿ ಹೆಚ್ಚು ಅನಾಹುತ ಆಗದಂತೆ ತಪ್ಪಿಸಬಹುದು ಎಂಬುದು ಸ್ಥಳೀಯರ ಅಭಿಪ್ರಾಯವಾಗಿದೆ.

**ಹೆಚ್ಚಿದ ಅಗ್ನಿ ಅವಘಡ**


ಉದಯವಾಹಿನಿ ಚಿತ್ರ

**ಜನತೆ ಆರೋಗ್ಯದ ಮೇಲೆ ಪರಿಣಾಮ**

**ಕೈಗಾರಿಕೆ ಪ್ರದೇಶದಲ್ಲಿ ಸಂಭವಿಸುವ ಅಗ್ನಿ ದುರಂತಗಳಿಂದ ಕಾರ್ಖಾನೆಯೊಳಗೆ ಸಂಗ್ರಹಿಸಿಡಲಾಗಿದ್ದ ವಿಷಕಾರಕ ರಾಸಾಯನಿಕಗಳು ಉರಿದು, ವಿಷಾನಿಲ ಪರಿಸರ ಸೇರಿ ಸುತ್ತಮುತ್ತಲಿನ ಜನತೆ ಆರೋಗ್ಯದ ಮೇಲೂ ಪರಿಣಾಮ ಬೀರುತ್ತಿದೆ. ಹಾರೋಹಳ್ಳಿ ಕೈಗಾರಿಕಾ ಪ್ರದೇಶದ ಸುತ್ತಮುತ್ತ 10ಕ್ಕೂ ಹೆಚ್ಚು ಹಳ್ಳಿಗಳಿವೆ. ಘಟಕದಲ್ಲಿ ಯಾವುದೇ ಅಹಿತಕರ ಘಟನೆ ಸಂಭವಿಸಿದರೂ ಮೊದಲು ಪರಿಣಾಮ ಹಳ್ಳಿಗಳ ಮೇಲೆ ಬೀರುವಂತಾಗಿದೆ.**

# ಪೊಲೀಸರಿಗೆ ಸಾರ್ವಜನಿಕರ ಸಹಕಾರ ಅಗತ್ಯ: ಡಿವೈಎಸ್‌ಪಿ ಗಿರಿ

• **ಉದಯವಾಹಿನಿ, ಚನ್ನಪಟ್ಟಣ**

ಅಪರಾಧಮುಕ್ತ ಸಮಾಜ ನಿರ್ಮಾಣಕ್ಕೆ ಪೊಲೀಸರ ಜತೆ ಸಾರ್ವಜನಿಕರ ಸಹಕಾರ ಅಗತ್ಯ ಎಂದು ಡಿವೈಎಸ್‌ಪಿ ಗಿರಿ ಅಭಿಪ್ರಾಯಪಟ್ಟರು. ತಾಲ್ಲೂಕಿನ ಹುಣಸನಹಳ್ಳಿಯ ಬಿಸಿಲೇಶ್ವರಿದೇವಿ ದೇವಸ್ಥಾನ ಆವರಣದಲ್ಲಿ ಅಕ್ಕೂರು ಪೊಲೀಸ್ ಠಾಣೆ ವತಿಯಿಂದ ಶನಿವಾರ ಏರ್ಪಡಿಸಿದ್ದ ಜನಸಂಪರ್ಕ ಸಭೆಯಲ್ಲಿ ಮಾತನಾಡಿದ ಅವರು, ಪೊಲೀಸರ ಜತೆ ಸಾರ್ವಜನಿಕರು ಕೈಜೋಡಿಸಿದಾಗ ಮಾತ್ರ ಸಮಾಜದಲ್ಲಿ ನಡೆಯುವ ಅಪರಾಧ ಪ್ರಕರಣಗಳನ್ನು ಪತ್ತೆ ಹಚ್ಚಲು ಸಾಧ್ಯ ಎಂದರು.

ಈಗಲೂ ಕೆಲವು ವಾಹನ ಸವಾರರು ಚಾಲನಾ ಪರವಾನಗಿ ಇಟ್ಟುಕೊಂಡಿಲ್ಲ. ವಾಹನಗಳ ವಿಮೆ ಮುಕ್ತಾಯವಾಗಿದ್ದರೂ ಅದನ್ನು ನವೀಕರಣ ಮಾಡಿಸಿಕೊಂಡಿಲ್ಲ. ಅಪಘಾತಗಳಂತಹ ಸಮಸ್ಯೆಗಳು ಉಂಟಾದಾಗ ವಾಹನ ಸವಾರರಿಗೆ ಇದರಿಂದ ತೊಂದರೆ ಎದುರಾಗುತ್ತದೆ. ಚಾಲನಾ ಪರವಾನಗಿ ಇಲ್ಲದ, ವಿಮೆ ಮುಕ್ತಾಯವಾಗಿರುವ ವಾಹನ ಸವಾರರು ಪೊಲೀಸ್ ಇಲಾಖೆಯ ಸಹಕಾರ ಪಡೆದು ತಮ್ಮ ದಾಖಲೆಗಳನ್ನು ನವೀಕರಣ ಮಾಡಿಸಿಕೊಳ್ಳಬಹುದು ಎಂದರು.

ಗ್ರಾಮಾಂತರ ಠಾಣೆ ಸರ್ಕಲ್ ಇನ್‌ಸ್ಪೆಕ್ಟರ್ ಕೃಷ್ಣ ಮಾತನಾಡಿ, ಅಪರಾಧ ಪ್ರಕರಣಗಳು ನಡೆಯುವಾಗ ಅದನ್ನು ನೋಡಿಯೂ ಸುಮ್ಮನಿದ್ದರೆ ಅದು ಸಹ ಅಪರಾಧವಾಗುತ್ತದೆ. ಇದರಿಂದ ಅಪರಾಧ ಪ್ರಕರಣಗಳಿಗೆ ಪರೋಕ್ಷವಾಗಿ ಸಹಕಾರ ನೀಡಿದಂತಾಗುತ್ತದೆ. ಸಾರ್ವಜನಿಕರು ಅಂತಹ ಪ್ರಕರಣಗಳು ಕಂಡುಬಂದಾಗ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು. ಸಭೆಯಲ್ಲಿ ಸಾರ್ವಜನಿಕರೊಬ್ಬರು ಕೋಡಂಬಹಳ್ಳಿ ಶಾಲಾವರಣದಲ್ಲಿ ಕೆಲವರು ಮದ್ಯಪಾನದಂತಹ ಅನೈತಿಕ ಚಟುವಟಿಕೆಯಲ್ಲಿ ತೊಡಗಿಕೊಂಡಿರುವುದರಿಂದ ಮಕ್ಕಳಿಗೆ ತೊಂದರೆ ಎದುರಾಗುತ್ತಿದೆ. ಇದಕ್ಕೆ ಕಡಿವಾಣ ಹಾಕಬೇಕು ಎಂದರು.

ಇದಕ್ಕೆ ಸ್ಪಂದಿಸಿದ ಡಿವೈಎಸ್‌ಪಿ ಇಂದಿನಿಂದಲೇ ರಾತ್ರಿಯ ವೇಳೆ ಪೊಲೀಸ್ ಬೀಟ್ ಹಾಕಲು ಅಕ್ಕೂರು ಠಾಣೆ ಸಬ್ ಇನ್‌ಸ್ಪೆಕ್ಟರ್‌ಗೆ ಸೂಚಿಸಿದರು. ಇದಲ್ಲದೆ ಸಭೆಯಲ್ಲಿ ರೈತರು, ಸಾರ್ವಜನಿಕರು ರಾತ್ರಿ ವೇಳೆ ಬೆಳೆಗಳ ಮೇಲೆ ಕಾಡಾನೆ ದಾಳಿ, ರೈತರ ಪಂಪ್ ಸೆಟ್, ಕೇಬಲ್ ಕಳ್ಳತನ, ಮನೆ ಕಳ್ಳತನ ಮುಂತಾದ ಹಲವಾರು ಸಮಸ್ಯೆಗಳನ್ನು ಹೇಳಿಕೊಂಡರು. ಇಲಾಖೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸಮಸ್ಯೆಗಳನ್ನು ಪರಿಹರಿಸುವುದಾಗಿ ಭರವಸೆ ನೀಡಿದರು.

ಅಕ್ಕೂರು ಠಾಣೆ ಸಬ್ ಇನ್‌ಸ್ಪೆಕ್ಟರ್ ಬಸವರಾಜು, ಸಿಬ್ಬಂದಿ ಸುನೀಲ್, ಸ್ಥಳೀಯರು, ರೈತರು ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

**ಪತ್ತೆ ಹಚ್ಚಲು ಸಾಧ್ಯ**

**ಸಮಸ್ಯೆ ಪರಿಹರಿಸುವ ಭರವಸೆ**

**ಮತ್ತೊಬ್ಬರು ಕೋಡಂಬಹಳ್ಳಿ ಅಂಗಡಿಬೀದಿಯ ಅಂಗಡಿಗಳ ಮಾಲೀಕರು ತಮ್ಮ ಅಂಗಡಿ ಬೋರ್ಡ್‌ಗಳನ್ನು ರಸ್ತೆಯಲ್ಲಿ ಇಡುತ್ತಿದ್ದು, ಇದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗುತ್ತದೆ. ಇದಕ್ಕೆ ಪರಿಹಾರ ನೀಡಿ, ಸ್ಥಳೀಯ ಗ್ರಾ.ಪಂ ಸಹಕಾರದೊಂದಿಗೆ ಈ ಸಮಸ್ಯೆ ಪರಿಹರಿಸುವ ಭರವಸೆ ನೀಡಿದರು.**

# ಪತ್ನಿ ಮೇಲೆ ಹಲ್ಲೆ ಪ್ರಕರಣ ಪತಿಗೆ 10 ವರ್ಷ ಜೈಲು

• **ಉದಯವಾಹಿನಿ, ಚಿಂತಾಮಣಿ**

ಪತ್ನಿ ಮೇಲೆ ಹಲ್ಲೆ ನಡೆಸಿದ್ದ ಪತಿಗೆ 10ವರ್ಷ ಜೈಲು ಶಿಕ್ಷೆ ಮತ್ತು 40 ಸಾವಿರ ದಂಡ ವಿಧಿಸಿ ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ತೀರ್ಪು ನೀಡಿದೆ. ನಗರದ ಹೊರವಲಯದ ಕರಿಯಪ್ಪಲ್ಲಿಯಲ್ಲಿ 2022, ಮಾರ್ಚ್ 30ರಂದು ಆರೋಪಿ ಮುನಿವೆಂಕಟಪ್ಪ, ಪತ್ನಿ ನಾಗವೇಣಿ ಮೇಲೆ ಹಲ್ಲೆ ನಡೆಸಿದ್ದರು. ಈ ಸಂಬಂಧ ಪ್ರಕರಣ ದಾಖಲಾಗಿತ್ತು. ಆರೋಪಿ ಸದಾ ಕುಡಿದು ಗಲಾಟೆ ಮಾಡುತ್ತಿದ್ದ. ಇದರಿಂದ ಬೇಸತ್ತ ನಾಗವೇಣಿ ಮಕ್ಕಳೊಂದಿಗೆ ತವರು ಸೇರಿದ್ದರು. ಆರೋಪಿಯು 2022, ಮಾರ್ಚ್ 30ರಂದು ಪತ್ನಿ ತವರು ಮನೆಗೆ ಬಂದು ಗಲಾಟೆ ಮಾಡಿ ಹಲ್ಲೆ ನಡೆಸಿದ್ದ.

ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶೆ ನಾಗವೇಣಿ ಶಿಕ್ಷೆ ಪ್ರಕಟಿಸಿ, ದಂಡ ವಿಧಿಸಿದ್ದಾರೆ.ಸರ್ಕಾರಿ ಅಭಿಯೋಜಕಿ ಸುಮತಿ ವಾದ ಮಾಡಿದ್ದರು.

# ಗಾಳಿಗೆ ಉರುಳಿ ಬಿದ್ದ ತೆಂಗಿನ ಮರ ಎರಡು ವರ್ಷದ ಮಗು ಸಾವು

• **ಉದಯವಾಹಿನಿ, ಗೌರಿಬಿದನೂರು**

ತಾಲ್ಲೂಕಿನ ಹಾಲಗಾನಹಳ್ಳಿ ಗ್ರಾಮ ಪಂಚಾಯಿತಿಯ ಎಚ್. ಕಾಲೋನಿಯಲ್ಲಿ ಮನೆಯ ಮುಂದಿನ ತೆಂಗಿನ ಮರ ಬಿದ್ದು ಎರಡು ವರ್ಷದ ಮಗು ಮೃತಪಟ್ಟಿದೆ. ಎರಡು ವರ್ಷದ ಪೃಥ್ವಿ ಮೃತಪಟ್ಟ ಮಗು. ಮೋನಿಕಾ ನಾಗರಾಜು ಎಂಬುವರು ಮನೆಯ ಮುಂದಿನ ತೆಂಗಿನ ಮರದ ಕೆಳಗೆ ತಮ್ಮ ಮಗುವನ್ನು ಆಟವಾಡಿಸುತ್ತಿದ್ದರು. ಜೋರಾಗಿ ಬೀಸಿದ ಗಾಳಿಗೆ ತೆಂಗಿನ ಮರ ಅವರ ಮೇಲೆ ಉರುಳಿ ಬಿದ್ದಿದೆ. ಮರದ ಕೆಳಗೆ ಸಿಲುಕಿದ ಮಗು ಸ್ಥಳದಲ್ಲೇ ಮೃತಪಟ್ಟಿದೆ. ಮಗುವಿನ ತಾಯಿ ಮೋನಿಕಾ (21) ಏಳು ತಿಂಗಳ ಗರ್ಭಿಣಿಯಾಗಿದ್ದು, ಆಕೆಯೂ ಗಂಭೀರವಾಗಿ ಗಾಯ ಗೊಂಡಿದ್ದಾರೆ. ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರು ಆಸ್ಪತ್ರೆಗೆ ಸಾಗಿಸಲಾಗಿದೆ. ಘಟನೆ ನಡೆದ ತಕ್ಷಣ 108 ಆಂಬುಲೆನ್ಸ್ ಗೆ ಕರೆ ಮಾಡಿ ತಿಳಿಸಿದರೂ ಆಂಬುಲೆನ್ಸ್ ತಡವಾಗಿ ಬಂತು ಎಂದು ಸ್ಥಳೀಯರು ಬೇಸರ ವ್ಯಕ್ತಪಡಿಸಿದರು.

# ಶಿಶು ಮಾರಾಟ: ಅಂಗನವಾಡಿ ಕಾರ್ಯಕರ್ತೆ ಸೇರಿ ಐವರ ಬಂಧನ

• **ಉದಯವಾಹಿನಿ, ಕುಣಿಗಲ್**

ಐದು ದಿನಗಳ ಹಿಂದೆ ಇಲ್ಲಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ಅವಿವಾಹಿತ ಯುವತಿ ಜನ್ಮನೀಡಿದ್ದ ಗಂಡು ಮಗುವನ್ನು ಮಾರಾಟ ಮಾಡಲಾಗಿದೆ. ಈ ವಿಷಯ ಗೊತ್ತಾಗುತ್ತಲೇ ಪೊಲೀಸರು ಮಗುವಿನ ತಾಯಿ ಮತ್ತು ಅಂಗನವಾಡಿ ಕಾರ್ಯಕರ್ತೆ ಸೇರಿ ಐವರನ್ನು ಬಂಧಿಸಿದ್ದಾರೆ. ಮಗು ಮಾರಾಟಕ್ಕೆ ನೆರವಾಗಿದ್ದ ಅಂಗನವಾಡಿ ಕಾರ್ಯಕರ್ತೆ ಎನ್.ಜ್ಯೋತಿ, ಜ್ಯೋತಿ, ಮಗು ಖರೀದಿಸಿದ ಮುಬಾರಕ್ ಪಾಷಾ, ಮಗುವಿನ ತಾಯಿ ಮತ್ತು ಆಕೆಯ ಪ್ರಿಯಕರ ಮಾಗಡಿಯ ಶ್ರೀನಂದ ಎಂಬಾತನನ್ನು ಕುಣಿಗಲ್ ಪೊಲೀಸರು ಬಂಧಿಸಿದ್ದಾರೆ.

ಮಾಗಡಿಯ 21 ವರ್ಷದ ಅವಿವಾಹಿತ ಯುವತಿಗೆ ಕುಣಿಗಲ್ ಸಾರ್ವಜನಿಕ ಆಸ್ಪತ್ರೆಯಲ್ಲಿ ಫೆ. 20ರಂದು ಹೆರಿಗೆಯಾಗಿತ್ತು. ತುಂಬು ಗರ್ಭಿಣಿಯಾಗಿದ್ದ ಯುವತಿಯನ್ನು ಆಕೆಯ ಪ್ರಿಯಕರ ಶ್ರೀನಂದ ಆಸ್ಪತ್ರೆಗೆ ಸೇರಿಸಿದ್ದ. ಇನ್ನೂ ಮದುವೆಯಾಗದ ಕಾರಣ ಮಗುವನ್ನು ಮನೆಗೆ ಕರೆದೊಯ್ಯಲು ಯುವತಿ ನಿರಾಕರಿಸಿದ್ದಳು. ಆಗ ಆಕೆಯ ಪ್ರಿಯಕರನ ಸಂಬಂಧಿ ಮಾಗಡಿಯ ಜ್ಯೋತಿ ಎಂಬಾಕೆ ಕುಣಿಗಲ್ ತಾಲ್ಲೂಕು ಕೊತ್ತಗೆರೆ ಅಂಗನವಾಡಿ ಕಾರ್ಯಕರ್ತೆ ಎನ್.ಜ್ಯೋತಿ ಎಂಬುವರನ್ನು ಸಂಪರ್ಕಿಸಿ ಮಗು ಮಾರಾಟಕ್ಕೆ ವ್ಯವಸ್ಥೆ ಮಾಡಿದ್ದರು.

ಪೊಲೀಸರು ಎರಡೂ ಕಡೆಯವರನ್ನು ಠಾಣೆಗೆ ಕರೆ ತಂದು ವಿಚಾರಣೆ ನಡೆಸಿದಾಗ ಇಡೀ ಪ್ರಕರಣ ಹೊರ ಬಂದಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮೇಲ್ವಿಚಾರಕಿ ಹುಚ್ಚರಂಗಮ್ಮ ನೀಡಿದ ದೂರಿನ ಮೇರೆಗೆ ಕುಣಿಗಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪ್ರಾಣಿಬಲಿ ತ್ಯಜಿಸಲು ದಯಾನಂದ ಸ್ವಾಮೀಜಿ ಮನವಿ

• **ಉದಯವಾಹಿನಿ, ತಿ.ನರಸೀಪುರ**

ತಾಲ್ಲೂಕಿನ ತಲಕಾಡಿನಲ್ಲಿ ನಡೆಯುವ ಬಂಡರಸಮ್ಮ ದೇವಿ ಜಾತ್ರೆಯಲ್ಲಿ ಭಕ್ತರು ಪ್ರಾಣಿಬಲಿ ತ್ಯಜಿಸಿ ಅಹಿಂಸಾತ್ಮಕವಾಗಿ ಸಾತ್ವಿಕ ಪೂಜೆ ಸಲ್ಲಿಸುವಂತೆ ವಿಶ್ವ ಪ್ರಾಣಿ ಕಲ್ಯಾಣ ಮಂಡಳಿ, ಬಸವ ಧರ್ಮ ಜ್ಞಾನ ಪೀಠ ಮತ್ತು ಪಶು-ಪ್ರಾಣಿ ಬಲಿ ನಿರ್ಮೂಲನಾ ಮಹಾಸಂಘದ ಅಧ್ಯಕ್ಷ ದಯಾನಂದ ಸ್ವಾಮೀಜಿ ಮನವಿ ಮಾಡಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಜಾತ್ರೆಗೆ ಭಕ್ತರು ಆಗಮಿಸಿ ದೇವಿಗೆ ಪೂಜೆ ಧಾರ್ಮಿಕ ಸೇವೆ ಸಲ್ಲಿಸಲಿದ್ದಾರೆ. ಆದರೆ, ಇದೇ ಸಂದರ್ಭ ಹಲವು ಭಕ್ತರು ದೇವರು ಮತ್ತು ಧರ್ಮದ ಹೆಸರಿನಲ್ಲಿ ಹರಕೆ ರೂಪದಲ್ಲಿ ಆಡು, ಕುರಿ, ಕೋಳಿ ಪ್ರಾಣಿಗಳ ಬಲಿ ನೀಡುವುದು ಸರಿಯಲ್ಲ ಎಂದು ತಿಳಿಸಿದ್ದಾರೆ.

# ಇನ್ನೂ ಈಡೇರದ ತಾಂಡಾಗಳ ಕಂದಾಯ ಗ್ರಾಮ ಬೇಡಿಕೆ

• **ಉದಯವಾಹಿನಿ, ಬಾಗೇಪಲ್ಲಿ**

ತಾಲ್ಲೂಕು ಪಂಚಾಯಿತಿ ಕಚೇರಿ ಎದುರು ಲಂಬಾಣಿ ಅಭಿವೃದ್ಧಿ ಸಂಘದಿಂದ ಸೋಮವಾರ ಸೇವಾಲಾಲ್ ಮಹಾರಾಜರ 286ನೇ ಜಯಂತಿ ನಡೆಯಿತು.

ಚಿಂತಕ ಆನಂತ್ ನಾಯ್ಕ ಮಾತನಾಡಿ, ದೇಶದ ಉದ್ದಗಲಕ್ಕೂ ಗೋರ್ ಬಂಜಾರ್ ಸಮುದಾಯದವರು ನೆಲೆಸಿದ್ದಾರೆ. ಈ ಸಮುದಾಯದ ಭಾಷೆ ಹಾಗೂ ಊಟದ ಖಾದ್ಯ ವಿಭಿನ್ನ. ಕದಿರಿ ಹುಣ್ಣಿಮೆ ಸೇರಿದಂತೆ ವಿಶೇಷ ಹಬ್ಬಗಳಲ್ಲಿ ಕಿರಿಯರು, ಹಿರಿಯರು ತಮ್ಮ ವೇಷ ಧರಿಸಿ ಕುಣಿದು ಕುಪ್ಪಳಿಸಿ ಸಂತಸಪಡುತ್ತಾರೆ. ಬೆಟ್ಟ-ಗುಡ್ಡಗಳಲ್ಲಿ ನೆಲೆಸಿದ ಲಂಬಾಣಿ ತಾಂಡಾದ ಜನರು ಶಾಂತಿ, ಪ್ರೀತಿ, ಸೌಹಾರ್ದತೆ ಮೂಡಿಸಿದ್ದಾರೆ ಎಂದರು. ಲಂಬಾಣಿ (ಗೋರ್ ಬಂಜಾರ್) ಸಮುದಾಯಕ್ಕೆ ಸಂವಿಧಾನ 9ನೇ ಪರಿಚ್ಛೇಧನದಲ್ಲಿ ಮೀಸಲಾತಿ ಸಿಕ್ಕಿಲ್ಲ. ತಾಂಡಾಗಳು ಇಂದಿಗೂ ಕಂದಾಯ ಗ್ರಾಮಗಳು ಆಗಿಲ್ಲ. ಗೋರ್ ಬಂಜಾರ್ ಸಮುದಾಯ ಭವನ ನಿರ್ಮಿಸಬೇಕು. ಶಿಕ್ಷಣ ಹಾಗೂ ಉದ್ಯೋಗದಲ್ಲಿ ವಿಶೇಷವಾಗಿ ಮೀಸಲಾತಿ ಕಲ್ಪಿಸಬೇಕು. ಈ ಸಂಬಂಧ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ, ಬಜೆಟ್ ಅಧಿವೇಶನದಲ್ಲಿ ಒತ್ತಾಯ ಮಾಡಬೇಕು ಎಂದು ಮನವಿ ಮಾಡಿದರು. ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಮಾತನಾಡಿ, ಈಗಿನ ತಾಂಡಾ ಗಳಲ್ಲಿ ಅಕ್ಷರತೆ, ಉದ್ಯೋಗಾವಕಾಶ ಲಭಿಸಿದೆ. ಯಾವುದೇ ಕಾರಣಕ್ಕೂ ಕುಡಿತದ ಚಟಕ್ಕೆ ಒಳಗಾಗದೆ, ಪ್ರತಿಯೊಬ್ಬರು ಆರೋಗ್ಯದ ಕಡೆ ಹೆಚ್ಚು ಗಮನ ಹರಿಸಬೇಕು. ಬಾಲ್ಯವಿವಾಹ ಮಾಡಿದರೆ ಜೈಲು, ದಂಡ ವಿಧಿಸುವ ಕಾನೂನು ಇದೆ. ಬಾಲ್ಯದ ಜೀವನದಲ್ಲಿ ಹೆಣ್ಣುಮಕ್ಕಳಿಗೆ ವಿವಾಹ ಮಾಡಿದರೆ, ಹುಟ್ಟಿದ ಮಗುವಿನ ಆರೋಗ್ಯಕ್ಕೆ ತೊಂದರೆ ಆಗಲಿದೆ. ತಾಂಡಾ ಮುಖಂಡರು, ಅಕ್ಷರಸ್ಥರು ಜಾಗೃತಿ ಮೂಡಿಸಬೇಕಾಗಿದೆ ಎಂದು ತಿಳಿಸಿದರು.

ಚಿಕ್ಕಬಳ್ಳಾಪುರ ಲಂಬಾಣಿ ಗೋರ್ ಬಂಜಾರ್ ಅಭಿವೃದ್ಧಿ ಸಂಘದ ಅಧ್ಯಕ್ಷ ವೆಂಕಟರಮಣಪ್ಪ, ಸಮುದಾಯದವರಾದ ಗೋಪಿನಾಯ್ಕ, ಶ್ರೀನಿವಾಸ ನಾಯ್ಕ, ಶ್ರೀರಾಮನಾಯ್ಕ, ಸದ್ದಪಲ್ಲಿ ಶಂಕರ ನಾಯ್ಕ, ಸೀತಾರಾಮನಾಯ್ಕ, ಗೊರ್ತಪಲ್ಲಿ ಶ್ರೀನಿವಾಸ ನಾಯ್ಕ, ಟ್ರಸ್ಟ್ ಅಧ್ಯಕ್ಷ ಶ್ರೀನಿವಾಸನಾಯ್ಕ, ನಾಗಭೂಷಣ, ಕೃಷ್ಣಾನಾಯ್ಕ, ಮತ್ತಿತರರು ಇದ್ದರು.


ಉದಯವಾಹಿನಿ ಚಿತ್ರ

**ಅಕ್ಷರಸ್ಥರು ಜಾಗೃತಿ ಮೂಡಿಸ ಬೇಕು**

**ಬೆಳ್ಳಿರಥದಲ್ಲಿ ಇಟ್ಟು ಮೆರವಣಿಗೆ**

**ತಾಂಡಾಗಳನ್ನು ಹಂತ ಹಂತದಲ್ಲಿ ಕಂದಾಯ ಗ್ರಾಮಗಳಾಗಿ ಮಾಡಲಾಗುವುದು. ಮುಂದಿನ ಸೇವಾಲಾಲ್ ಜಯಂತಿಯೊಳಗೆ ಗೋರ್ ಬಂಜಾರ್ ಸಮುದಾಯ ಭವನ ನಿರ್ಮಿಸಲಾಗುವುದು ಎಂದು ಭರವಸೆ ನೀಡಿದರು. ಸರ್ಕಾರಿ ನೌಕರರ ಸಂಘದ ತಾಲ್ಲೂಕು ಸದಸ್ಯೆ ವೀಣಾಮಂಜುನಾಥ್ ನಾಯ್ಕ, ಲಂಬಾಣಿ ಸಮುದಾಯದ ಹಿರಿಯ ಮಹಿಳೆಯರು, ಪ್ರತಿಭಾನ್ವಿತರನ್ನು ಅಭಿನಂದಿಸಲಾಯಿತು. ಸಂತ ಸೇವಾಲಾಲ್ ಭಾವಚಿತ್ರ ಬೆಳ್ಳಿರಥದಲ್ಲಿ ಇಟ್ಟು ಮೆರವಣಿಗೆ ಮಾಡಲಾಯಿತು.**


# 4 ಕೋಟಿ ವೆಚ್ಚದ ಡಾಂಬರು ರಸ್ತೆಗೆ ಗುದ್ದಲಿ ಪೂಜೆ

• **ಉದಯವಾಹಿನಿ, ಬೇತಮಂಗಲ**

ಬೇತಮಂಗಲದಿಂದ ಕೋಲಾರಕ್ಕೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆಯ ಚಿಗರಾಪುರ ಗೇಟ್ ನಿಂದ ಜಯಮಂಗಲ ಗೇಟ್ ವರೆಗೂ ಡಾಂಬರೀಕರಣ ಕಾಮಗಾರಿಗೆ ಕೆಜಿಎಫ್ ಶಾಸಕಿ ರೂಪಕಲಾ ಶಶಿಧರ್ ಗುದ್ದಲಿ ಪೂಜೆ ನೆರವೇರಿಸಿದರು. ಗ್ರಾಮದ ಸಮೀಪದ ಟಿ.ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಯಮಂಗಲ ಗೇಟ್ ನಲ್ಲಿ ಗುದ್ದಲಿ ಪೂಜೆ ಸಲ್ಲಿಸಿ ಕಾಮಗಾರಿಗೆ ಚಾಲನೆ ನೀಡಲಾಯಿತು.

ಈ ವೇಳೆ ಶಾಸಕಿ ರೂಪಕಲಾ ಶಶಿಧರ್ ಮಾತನಾಡಿ. ಸುಮಾರು ವರ್ಷಗಳಿಂದ ಬೇತಮಂಗಲ-ಕೋಲಾರ ರಸ್ತೆಗೆ ಅಭಿವೃದ್ಧಿ ಮಾಡಬೇಕೆಂದು ಗಮನಕ್ಕೆ ತಂದಿದ್ದರು, ಅದೇ ರೀತಿ ಚುನಾವಣೆ ಸಮಯದಲ್ಲಿ ನಾನು ಸಹ ಮಾತು ಕೊಟ್ಟಿದೆ, ಉತ್ತಮ ಗುಣಮಟ್ಟದಿಂದ, ಅಗಲವಾದ ರಸ್ತೆಯನ್ನು ಮಾಡಬೇಕೆಂಬ ದೃಷ್ಟಿಯಿಂದ ತಡವಾದರೂ ಪರವಾಗಿಲ್ಲ ಅಂತ 4 ಕೋಟಿ ಅನುದಾನವನ್ನು ಮಂಜೂರು ಮಾಡಲಾಗಿದೆ ಎಂದರು.

ಟೆಂಡರ್ ಆದ 2-3 ದಿನಗಳಿಗೆ ಗುತ್ತಿಗೆದಾರರು ಗುದ್ದಲಿ ಪೂಜೆ ನೆರವೇರಿಸಿದರೆ, ಕೇವಲ ಒಂದು ತಿಂಗಳಲ್ಲಿಯೇ ಕಾಮಗಾರಿ ಪೂರ್ಣಗೊಳಿಸುವ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

**ಇಷ್ಟು ವರ್ಷಗಳಿಂದ ಕೇವಲ 5 ಮೀಟರ್ ಅಗಲದ ರಸ್ತೆ ಇತ್ತು, ಈಗ 7 ಮೀಟರ್ ಅಗಲದ ರಸ್ತೆ ಮಾಡಿ ವಾಹನ ಸವಾರರು ಸುಲಭವಾಗಿ ಸಂಚಾರ ಮಾಡುವಂತೆ ಮಾಡಲಾಗುತ್ತದೆ**

**-ರೂಪಕಲಾ ಶಶಿಧರ್, ಕೆಜಿಎಫ್ ಶಾಸಕಿ**

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅ.ಮು. ಲಕ್ಷ್ಮೀನಾರಾಯಣ್, ಗ್ರಾಮ ಪಂಚಾಯಿತಿ ಅಧ್ಯಕ್ಷ ಅಯ್ಯಪಲ್ಲಿ ಮಂಜುನಾಥ್, ಇಂಜಿನೀಯರ್ ರವೀಂದ್ರ, ಗುತ್ತಿಗೆದಾರರ ವಿನಯ್, ಮುಖಂಡರಾದ ಬ್ಯಾಟೇಗೌಡ, ಸುರೇಂದ್ರ ಗೌಡ, ಶಂಕರ್, ಮುನೇಗೌಡ, ಶ್ರೀದೇವಿ ಸಂಪತ್, ಗೋಪಾಲ್, ಕಾರಿ ಪ್ರಸನ್ನ, ಇನಾಯತ್ ಉಲ್ಲಾ ಷರೀಫ್, ಶ್ರೀರಾಮಪ್ಪ, ಬೌಡ್ರಿ ಬಾಬು, ಚಿದ್ದು, ಮಣಿ, ಕೃಷ್ಣಪ್ಪ, ಚಂದ್ರ, ಮುನಿಸ್ವಾಮಿ, ನಾಗರಾಜ್, ಕಾರ್ಯಕರ್ತರು ಇದ್ದರು.

# ಇಲಾಖೆಯೇ ನೆಲವಳಿ ಸುಂಕ ಪಡೆಯಲಿ

• **ಉದಯವಾಹಿನಿ, ಮಧುಗಿರಿ**

ಪಟ್ಟಣದ ದಂಡಿನ ಮಾರಮ್ಮ ಜಾತ್ರಾ ಮಹೋತ್ಸವದಲ್ಲಿ ಅಂಗಡಿಗಳ ಮೇಲೆ ವಿಧಿಸುವ ನೆಲವಳಿ ಸುಂಕ ವಸೂಲಿ ಮಾಡುವ ಟೆಂಡರನ್ನು ರದ್ದುಪಡಿಸಬೇಕು. ಇಲಾಖೆಯಿಂದಲೇ ಸುಂಕ ವಸೂಲಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಎಂದು ಭಕ್ತರು ಹಾಗೂ ಬಿಡ್‌ದಾರರು ಸೋಮವಾರ ಶ್ರೀನಿವಾಸ್ ಅವರಿಗೆ ಮನವಿ ಸಲ್ಲಿಸಿದರು.

ಸೋಮವಾರ ಉಪವಿಭಾಗಾಧಿಕಾರಿ ಕಚೇರಿಯಲ್ಲಿ ದಂಡಿನ ಮಾರಮ್ಮ ಜಾತ್ರಾ ಮಹೋತ್ಸವದ ಅಂಗಡಿಗಳ ಮೇಲೆ ನೆಲವಳಿ ಸುಂಕ ವಸೂಲಾತಿ ಟೆಂಡರ್ ಕರೆಯಲಾಗಿತ್ತು. ಆದರೆ ಬಿಡ್‌ದಾರರು ಟೆಂಡರ್‌ನಲ್ಲಿ ಭಾಗವಹಿಸದೆ ಇಲಾಖೆ ನಿಗದಿ ಮಾಡಿರುವ ಅಂಗಡಿ ಮೇಲೆ ನೆಲವಳಿ ಸುಂಕ ವಸೂಲಿ ಮಾಡಿ ಸಾರ್ವಜನಿಕರಿಗೆ ಹಾಗೂ ಭಕ್ತರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ ಮಾಡಿದರು. ಪುರಸಭೆ ಅಧ್ಯಕ್ಷ ಜಿ.ಮಂಜುನಾಥ್ ಮಾತನಾಡಿ, ಜಾತ್ರಾ ಮಹೋತ್ಸವದಲ್ಲಿ ಹರಾಜುದಾರರು ಹೆಚ್ಚಿಗೆ ಕೂಗುವುದರಿಂದ ಭಕ್ತಾದಿಗಳಿಗೆ ಹೊರೆಯಾಗುತ್ತಿದೆ. ಈ ಬಾರಿ ಇಲಾಖೆಯಿಂದ ಸುಂಕ ವಸೂಲಿ ಮಾಡಿ ಎಂದರು.


# ಜಲಜೀವನ್‌ನಲ್ಲಿ ಭ್ರಷ್ಟಾಚಾರ: ಕ್ರಮಕ್ಕೆ ಆಗ್ರಹ

## ನೂರಾರು ಕೋಟಿ ರೂಪಾಯಿ ಸಾರ್ವಜನಿಕರ ತೆರಿಗೆ ಹಣ ದುರುಪಯೋಗ

• **ಉದಯವಾಹಿನಿ, ಮಂಡ್ಯ**

ಜಲಜೀವನ್ ಮಿಷನ್ ಯೋಜನೆಯಲ್ಲಿ ನಿಯಮಾನುಸಾರ ಕಾಮಗಾರಿ ಮಾಡದೆ ಭ್ರಷ್ಟಾಚಾರ ಎಸಗಿರುವ ಅಧಿಕಾರಿಗಳ ಮೇಲೆ ಕ್ರಮ ಜರುಗಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ವಿವಿಧ ಸಂಘಟನೆಗಳ ಕಾರ್ಯಕರ್ತರು ಜಿಲ್ಲಾಧಿಕಾರಿ ಕುಮಾರ ಅವರಿಗೆ ಸೋಮವಾರ ಮನವಿ ನೀಡಿದರು. ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಜಮಾವಣೆಗೊಂಡ ಕಾರ್ಯಕರ್ತರು, ಭ್ರಷ್ಟಾಚಾರ ಎಸಗಿರುವ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ನಂತರ ಜಿಲ್ಲಾಧಿಕಾರಿ ಕುಮಾರ, ಜಿಲ್ಲಾ ಪಂಚಾಯಿತಿ ಸಿಇಒ ಕೆ.ಆರ್. ನಂದಿನಿ ಅವರಿಗೆ ಮನವಿ ನೀಡಿದರು. ಮನೆ ಮನೆಗೂ ಗಂಗೆ (ಜಲಜೀವನ್ ಮಿಷನ್) ಯೋಜನೆಯಲ್ಲಿ ಕಾಮಗಾರಿಯನ್ನು ಅನುಷ್ಠಾನಗೊಳಿಸುತ್ತಿರುವುದು ಸರಿಯಷ್ಟೆ. ಆದರೆ, ಮಂಡ್ಯ ಜಿಲ್ಲೆಯಾದ್ಯಂತ ಈಗಾಗಲೇ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಇದ್ದು, ತೊಂಬೆ, ನಲ್ಲಿ, ಕೊಳವೆ ಬಾವಿಗಳ ಮೂಲಕ ನೀರಿನ ಸರಬರಾಜು ಮಾಡುತ್ತಿದ್ದು, ಜೊತೆಗೆ ವಾಟರ್ ಮ್ಯಾನ್ ಅವರನ್ನು ನೇಮಿಸಿ ಅದರ ನಿರ್ವಹಣೆ ಮಾಡಲಾಗುತ್ತಿದೆ. ಸರ್ಕಾರದ ಮಾರ್ಗಸೂಚಿಗಳನ್ನು ಗಾಳಿಗೆ ತೂರಿ ಜಲಜೀವನ್ ಯೋಜನೆಯ ಕಾಮಗಾರಿ ಅನುಷ್ಠಾನಗೊಳಿಸುತ್ತಿರುವ ಪಿಡಿಒ ಮತ್ತು ಅಧ್ಯಕ್ಷರು, ಸಹಾಯಕ ಕಾರ್ಯಪಾಲಕ ಎಂಜಿನಿಯರ್, ಜಿಲ್ಲಾ ಪಂಚಾಯಿತಿ ಕಾರ್ಯಪಾಲಕ ಎಂಜಿನಿಯರ್‌ಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ನೂರಾರು ಕೋಟಿ ರೂಪಾಯಿ ಸಾರ್ವಜನಿಕರ ತೆರಿಗೆ ಹಣ ದುರುಪಯೋಗವಾಗುತ್ತಿದೆ ಎಂದು ಆರೋಪಿಸಿದರು. ಜಿಲ್ಲಾ ಪಂಚಾಯಿತಿ ಸಿಇಒ ಜೊತೆ ಆಗಮಿಸಿದ ಜಿಲ್ಲಾಧಿಕಾರಿ ಕುಮಾರ ಅವರು ಧರಣಿ ಸ್ಥಳಕ್ಕೆ ಆಗಮಿಸಿ ಸಮಸ್ಯೆ ಆಲಿಸಿದರು. ಈ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವ ಭರವಸೆಯನ್ನು ಜಿಲ್ಲಾಧಿಕಾರಿ ನೀಡಿದರು. ವಿವಿಧ ಸಂಘಟನೆಗಳ ಮುಖಂಡರಾದ ಕೆ.ಆರ್. ರವೀಂದ್ರ, ಬಿ.ಟಿ. ವಿಶ್ವನಾಥ್, ಜವರೇಗೌಡ, ಶಿವರಾಮೇಗೌಡ, ಮಮತಾ, ಎಚ್.ಡಿ. ಜಯರಾಮು, ಅಣ್ಣಯ್ಯ, ಆನಂದಕುಮಾರ್, ವೆಂಕಟಗಿರಿಯಯ್ಯ, ಜಯರಾಮು ಗಾಣಧಾಳು ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

**ಜೀವನ ನಿರ್ವಹಣೆಗೆ ಏಕಾಂಗಿ ಪ್ರತಿಭಟನೆ**

**ಜೀವನ ನಿರ್ವಹಣೆ ಮಾಡಲು ಕಷ್ಟವಾಗುತ್ತಿದ್ದು ಸರ್ಕಾರದ ವತಿಯಿಂದ ನೀಡಲಾಗುವ ಯೋಜನೆಗಳ ಪೈಕಿ ಯಾವುದಾದರೊಂದು ಯೋಜನೆಯನ್ನು ನೀಡಿ ಜೀವನ ನಿರ್ವಹಣೆಗೆ ಅನುಕೂಲ ಮಾಡಿಕೊಡಬೇಕೆಂದು ಮದ್ದೂರು ತಾಲ್ಲೂಕು ತರೀಕೆರೆ ಕಾಲೋನಿಯ ಟಿ.ದಿನೇಶ್ ಅವರು ಸೋಮವಾರ ಡಿಸಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.**

**ಮನವಿ ಸಲ್ಲಿಕೆ**

**ನನ್ನ ಗ್ರಾಮದಲ್ಲಿ ಯಾವುದೇ ಜಮೀನಿಲ್ಲ. ಉದ್ಯೋಗವೂ ಇಲ್ಲ. ಪರಿಷ್ಟ ಜಾತಿಗೆ ಸೇರಿಸಿರುವ ನನಗೆ ಯಾವುದೇ ಆದಾಯ ಮೂಲ ಇಲ್ಲದಿರುವ ಕಾರಣ ಮಾನವೀಯತೆ ದೃಷ್ಟಿಯಿಂದ ಯಾವುದಾದರೂ ಉದ್ಯೋಗ ಅಥವಾ ಹಸು ಸಾಕಾಣಿಕೆ ಕುರಿ ಅಥವಾ ಬೇರೆ ರೀತಿಯ ಸಾಮಾಜಿಕ ಯೋಜನೆಗಳನ್ನು ಕೊಡಿಸುವ ಮೂಲಕ ಜೀವನ ನಿರ್ವಹಣೆಗೆ ಅನುವು ಮಾಡಿಕೊಡಬೇಕು' ಎಂದು ಮನವಿ ಮಾಡಿದರು. ನಂತರ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅವರ ಆಪ್ತ ಸಹಾಯಕನಿಗೆ ಮನವಿ ಸಲ್ಲಿಸಿದರು.**

ಅಂತರಾಳದಿಂದ.. EDITORIAL

# ಅಮೆರಿಕದ ಇಂಗು ತಿಂದ ಮಂಗಗಳು !

ಹೀಗೆ ನಿಜವೇ? ಎಂದು ಕೇಂದ್ರ ಸರಕಾರವನ್ನು ಪ್ರಶ್ನಿಸಬೇಕಾಗಿತ್ತು. ಅಮೆರಿಕದಿಂದ ಈ ಹಣ ಬಂದಿರುವುದು ಹೌದೆ? ಇದನ್ನು ಅಮೆರಿಕ ತನ್ನ ಖಜಾನೆಯಿಂದ ಅಧಿಕೃತವಾಗಿ ಭಾರತ ಸರಕಾರಕ್ಕೆ ನೀಡಿದೆಯೆ? ಅಥವಾ ಕಿಕ್ ಬ್ಯಾಕ್ ರೂಪದಲ್ಲಿ ಯಾವುದಾದರೂ ಸರಕಾರೇತರ ಸಂಘಟನೆಗಳಿಗೆ ಸಂದಾಯ ಮಾಡಿದೆಯೆ? ಎನ್ನುವ ಪ್ರಶ್ನೆಗಳಿಗೆ ಉತ್ತರಿಸಬೇಕಾದದ್ದು ಕಳೆದ ಒಂದು ದಶಕದಿಂದ ಈ ದೇಶದ ಚುಕ್ಕಾಣಿ ಹಿಡಿದಿರುವ ಪ್ರಧಾನಿ ಮೋದಿ ನೇತೃತ್ವದ ಸರಕಾರ.

ಈ ದೇಶದಲ್ಲಿ ಮಾನವಹಕ್ಕುಗಳಿಗಾಗಿ, ಪರಿಸರದ ಉಳಿವಿಗಾಗಿ ಹೋರಾಡುತ್ತಾ ಬಂದಿರುವ ಹತ್ತು ಹಲವು ಸರಕಾರೇತರ ಸಂಘಟನೆಗಳಿಗೆ ಬರುತ್ತಿರುವ ದೇಣಿಗೆಯನ್ನು ನಿಧಿಯನ್ನು ಬೇರೆ ಬೇರೆ ನೆಪಗಳನ್ನು ಮುಂದೊಡ್ಡಿ ತಡೆಯುವಲ್ಲಿ ಸಂಪೂರ್ಣ ಯಶಸ್ವಿಯಾಗಿರುವ ಕೇಂದ್ರ ಸರಕಾರ, ಅಮೆರಿಕವು ಭಾರತಕ್ಕೆ ಚುನಾವಣೆಯ ಉತ್ತೇಜನದ ಹೆಸರಿನಲ್ಲಿ ಕಳುಹಿಸುತ್ತಿದ್ದ ದೇಣಿಗೆಯ ಬಗ್ಗೆ ಯಾಕೆ ಕುರುಡಾಗಿತ್ತು? ಇದು ಸರಕಾರದ ಅರಿವಿಗೇ ಬಂದಿರಲಿಲ್ಲವೇ? ಮೊದಲಾದ ಪ್ರಶ್ನೆಗಳಿಗೆ ಉತ್ತರಿಸಿ ಭಾರತದ ಜನರ ಆತಂಕಗಳನ್ನು ನಿವಾರಿಸುವ ಬದಲು, ಕೇಂದ್ರ ಸರಕಾರ ಈ ಹಣಕ್ಕೆ ಸಂಬಂಧಿಸಿ ವಿರೋಧ ಪಕ್ಷವನ್ನೇ ಹೊಣೆಗಾರ ಮಾಡಿತು.

> **ಬಿಜೆಪಿ ಮತ್ತು ಭಾರತದ ಕೆಲವು ಮಾಧ್ಯಮಗಳು ಅಮೆರಿಕದ ಇಂಗು ತಿಂದ ಮಂಗಗಳಂತಾಗಿವೆ. ಭಾರತದಲ್ಲಿ ಮತದಾನ ಉತ್ತೇಜನಕ್ಕೆ ಅಮೆರಿಕವು 21 ಮಿಲಿಯನ್ ಡಾಲರ್ ಅನುದಾನ ನೀಡಿದೆ. ಇದನ್ನು ನಾವು ರದ್ದುಗೊಳಿಸುತ್ತಿದ್ದೇವೆ ಎಂದು ಇತ್ತೀಚೆಗೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆ ನೀಡಿದ್ದರು.**

ಪ್ರಧಾನಿ ಮೋದಿಯನ್ನು ಅಧಿಕಾರಕ್ಕೇರದಂತೆ ತಡೆಯಲು ಕಾಂಗ್ರೆಸ್ ಪಕ್ಷ ಈ ಹಣವನ್ನು ಅಮೆರಿಕದಿಂದ ಪಡೆದಿದೆ ಎಂದು ಕೇಂದ್ರ ಸರಕಾರವೇ ಆರೋಪಿಸಿದ್ದಲ್ಲದೆ, ಪತ್ರಿಕೆಗಳು ಇದಕ್ಕೆ ಬಣ್ಣ ತುಂಬಿ ಮುಖ ಪುಟದಲ್ಲಿ ಪ್ರಕಟಿಸಿದವು. ಬಿಜೆಪಿಯ ಹಿರಿಯ ನಾಯಕ ಸುಬ್ರಮಣಿಯನ್ ಸ್ವಾಮಿಯಂತೂ ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ, ಸೋನಿಯಾಗಾಂಧಿ ಮತ್ತು ಸಿಐಎ ನಡುವೆ ಸಂಬಂಧವಿದೆ ಎಂದು ಆರೋಪಿಸಿದರು. ಒಟ್ಟಿನಲ್ಲಿ ಭಾರತಕ್ಕೆ ಹಣ ಸಂದಾಯವಾಗುತ್ತಿದೆ ಎಂದು ಟ್ರಂಪ್ ಹೇಳಿದಾಕ್ಷಣ, ಅದರ ಸತ್ಯಾಸತ್ಯತೆಯನ್ನು ಪರೀಕ್ಷಿಸದೇ, ಭಾರತ ಸರಕಾರವೇ ಅದನ್ನು ಒಪ್ಪಿಕೊಂಡಿತು.

ಮಾತ್ರವಲ್ಲ ಅದನ್ನು ತನ್ನ ರಾಜಕೀಯಕ್ಕೆ ಬಳಸಲು ಯತ್ನಿಸಿತು. ಆದರೆ ಒಂದೆರಡು ಮಾಧ್ಯಮಗಳು ಸತ್ಯಾಸತ್ಯತೆಯ ತನಿಖೆಗೆ ಇಳಿದಾಗ, ಭಾರತಕ್ಕೆ ಅಂತಹ ಹಣ ಬಂದಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ ಎನ್ನುವುದು ಗೊತ್ತಾಯಿತು. 2022ರಲ್ಲಿ ಅಮೆರಿಕ 180 ಕೋಟಿ ರೂಪಾಯಿ ನಿಧಿಯನ್ನು ಕೊಟ್ಟಿದ್ದು ಭಾರತಕ್ಕೆ ಅಲ್ಲ, ಬಾಂಗ್ಲಾದೇಶಕ್ಕೆ ಇದನ್ನು ಭಾರತಕ್ಕೆ ನೀಡಲಾಗಿದೆ ಎಂದು ಟ್ರಂಪ್ ತಪ್ಪಾಗಿ ವ್ಯಾಖ್ಯಾನಿಸಿದ್ದಾರೆ ಎಂದು ತನ್ನ ಸತ್ಯಶೋಧನಾ ವರದಿಯಲ್ಲಿ ಬಹಿರಂಗಪಡಿಸಿದರೂ, ಬಿಜೆಪಿ ಮತ್ತು ಭಾರತದ ಕೆಲವು ಮಾಧ್ಯಮಗಳು ಪ್ರಧಾನಿ ಮೋದಿಯನ್ನು ಸೋಲಿಸುವುದಕ್ಕಾಗಿ ಬೈಡನ್‌ನಿಂದ ಕಿಕ್ ಬ್ಯಾಕ್ ಎನ್ನುವ ಆರೋಪದಿಂದ ಒಂದಿಂಚೂ ಹಿಂದೆ ಸರಿಯಲಿಲ್ಲ ತನ್ನ ಗಮನಕ್ಕೆ ತಾರದೆ ಅಮೆರಿಕ ಅಷ್ಟೊಂದು ದುಡ್ಡನ್ನು ಭಾರತಕ್ಕೆ ಸುರಿದಿದೆ ಎನ್ನುವುದು ಮೋದಿ ಸರಕಾರದ ವೈಫಲ್ಯವಾಗಿದೆ. ತನ್ನದೇ ಸರಕಾರದ ವೈಫಲ್ಯವನ್ನು ಮುಚ್ಚಿಟ್ಟು ಇದು ಆತಂಕಕಾರಿ ವಿಚಾರ. ಸರಕಾರದ ಏಜೆನ್ಸಿಗಳು ಇದರ ಕುರಿತಂತೆ ತನಿಖೆ ನಡೆಸಲಿವೆ' ಎಂದು ವಿದೇಶಾಂಗ ವಕ್ತಾರ ರಣಧೀರ್ ಜೈಸ್ವಾಲ್ ಮಾಧ್ಯಮಗಳಿಗೆ ತಿಳಿಸಿದರು. ಆದರೆ ಬಿಜೆಪಿ ಮತ್ತು ಮಾಧ್ಯಮಗಳ ದುರದೃಷ್ಟಕ್ಕೆ ಅಮೆರಿಕದ ಅಧ್ಯಕ್ಷ ಟ್ರಂಪ್, ಇದೀಗ ಈ ದುಡ್ಡು ಯಾರ ಕೈಗೆ ಹೋಗಿದೆ ಎನ್ನುವುದನ್ನು ಕೂಡ ಬಹಿರಂಗಪಡಿಸಿದ್ದಾರೆ. ಬಾಂಗ್ಲಾಕ್ಕೆ ಮಾತ್ರವಲ್ಲ ಭಾರತದಲ್ಲಿ ಮತದಾನ ಉತ್ತೇಜನಕ್ಕಾಗಿ ಅಮೆರಿಕ ಹಣ ನೀಡಿದೆ. 21 ಮಿಲಿಯನ್ ಡಾಲರ್ ಹಣ ನನ್ನ ಗೆಳೆಯ ಮೋದಿಗೆ ಹೋಗುತ್ತಿದೆ ಎಂದು ಟ್ರಂಪ್ ಮತ್ತೊಂದು ಬಾಂಬ್ ಹಾಕಿದ್ದಾರೆ. ಇದೀಗ ಈ 21 ಮಿಲಿಯನ್ ಡಾಲರ್‌ನ್ನು ನುಂಗುವುದೋ, ಉಗುಳುವುದೋ ತಿಳಿಯದೇ ಕೇಂದ್ರ ಸರಕಾರ ಮತ್ತು ಭಾರತದ ಮಾಧ್ಯಮಗಳು ಇಂಗು ತಿಂದ ಮಂಗಗಳಂತೆ ಆಗಿವೆ. ಟ್ರಂಪ್ ಮೊದಲ ಬಾರಿ ಹೇಳಿಕೆ ನೀಡಿದಾಗ ಅದನ್ನು ಕೇಂದ್ರ ಸರಕಾರ ನಿರಾಕರಿಸಬೇಕಾಗಿತ್ತು. ಆದರೆ ಅದನ್ನು ಒಪ್ಪಿಕೊಂಡದ್ದು ಮಾತ್ರವಲ್ಲ, ಆ ಹಣ ಮೋದಿಯ ವಿರುದ್ಧ ಬಳಕೆಯಾಗಿದೆ ಎಂದು ಅದರಿಂದ ರಾಜಕೀಯ ಲಾಭ ಪಡೆಯಲು ಮುಂದಾಯಿತು. ಇದೀಗ ಪ್ರಧಾನಿ ಮೋದಿಯವರ ಗೆಳೆಯನಾಗಿರುವ ಟ್ರಂಪ್ ಸಾಹೇಬರೇ ಹಣವನ್ನು ಯಾರಿಗೆ ಕೊಡಲಾಗಿದೆ ಎನ್ನುವುದನ್ನು ಸ್ಪಷ್ಟಪಡಿಸಿದ್ದಾರೆ. ಭಾರತ ಸರಕಾರಕ್ಕಾಗಲಿ, ಚುನಾವಣಾ ಆಯೋಗಕ್ಕಾಗಲಿ ಈ ಹಣದ ಬಗ್ಗೆ ಯಾವುದೇ ಮಾಹಿತಿಯಿಲ್ಲ. ಆದರೆ ಟ್ರಂಪ್ ಪ್ರಕಾರ ಹಣ ಅವರ ಗೆಳೆಯ ಮೋದಿಗೆ ಹೋಗಿದೆ. ಹಾಗಾದರೆ ಪ್ರಧಾನಿ ಮೋದಿಯವರು ಇಷ್ಟು ಪ್ರಮಾಣದ ಹಣವನ್ನು ಯಾವುದಕ್ಕಾಗಿ ಬಳಸಿದರು? ಈ ಪ್ರಶ್ನೆಗೆ ಬಿಜೆಪಿ ಮತ್ತು ಕೇಂದ್ರ ಸರಕಾರ ಉತ್ತರಿಸಬೇಕು.

ಟ್ರಂಪ್ ಮತ್ತು ಮೋದಿಯ ನಡುವೆ ಸ್ನೇಹ ಎಲ್ಲಾ ಔಪಚಾರಿಕ ಗಡಿಗಳನ್ನು ಮೀರಿದ್ದಾಗಿದೆ. ಯಾಕೆಂದರೆ, ಕೊರೋನ ಕಾಲದಲ್ಲಿ ಎಲ್ಲಾ ನಿರ್ಬಂಧಗಳನ್ನು ಗಾಳಿಗೆ ತೂರಿ, ದೇಶದ ಜನತೆಯ ಆರೋಗ್ಯವನ್ನೇ ಬಲಿಕೊಟ್ಟು ಟ್ರಂಪ್‌ಗಾಗಿ ಗುಜರಾತ್‌ನಲ್ಲಿ ನಮಸ್ತೆ ಟ್ರಂಪ್ ಸಮಾವೇಶವನ್ನು ಮೋದಿಯವರು ಹಮ್ಮಿಕೊಂಡಿದ್ದರು. ಈ ಹಿಂದಿನ ಚುನಾವಣೆಯ ಸಂದರ್ಭದಲ್ಲಿ ಅಮೆರಿಕಕ್ಕೆ ತೆರಳಿ, ತನ್ನ ಪ್ರಧಾನಿ ಹುದ್ದೆಯ ಘನತೆಯನ್ನು ಬಲಿಕೊಟ್ಟು ಅಲ್ಲಿನ ಅನಿವಾಸಿ ಭಾರತೀಯರ ಮುಂದೆ 'ಅಬ್ ಕಿ ಬಾರ್ ಟ್ರಂಪ್ ಸರಕಾರ್ ಎಂದು ಘೋಷಣೆ ಕೂಗಿ ಭಾರತವನ್ನು ಮುಜುಗರಕ್ಕೆ ಸಿಲುಕಿಸಿದ್ದರು. ಇವುಗಳಿಗೂ ಅಮೆರಿಕದಿಂದ ಪ್ರಧಾನಿ ಮೋದಿಗೆ ಸಂದಾಯವಾಗಿರುವ ಅನಧಿಕೃತ ದೇಣಿಗೆಗೂ ಸಂಬಂಧವಿದೆಯೇ ಎಂದು ಜನರು ಪ್ರಶ್ನಿಸುವಂತಾಗಿದೆ. ಭಾರತಕ್ಕೆ ಅಮೆರಿಕದಿಂದ ಹಣ ಹೋಗಿರುವುದು ನಿಜ ಎಂದು ಟ್ರಂಪ್ ಮತ್ತೆ ಮತ್ತೆ ಉಚ್ಚರಿಸುತ್ತಿರುವುದು, ಭಾರತದ ಪಾಲಿಗೆ ಮುಜುಗರ ತರುವ ವಿಷಯವಾಗಿದೆ. ಇದನ್ನು ಭಾರತ ಸರಕಾರ ಗಂಭೀರವಾಗಿ ತೆಗೆದುಕೊಳ್ಳಲೇಬೇಕು. ಒಂದು ದೇಶದ ಅಧ್ಯಕ್ಷರಾಗಿ ಟ್ರಂಪ್ ಅವರು ಭಾರತದ ಪ್ರಧಾನಿಗೆ ಹಣ ಹೋಗಿದೆ ಎಂದು ಹೇಳಿದ ಬಳಿಕವೂ ಕೇಂದ್ರ ಸರಕಾರ ಯಾಕೆ ಮೌನವಾಗಿದೆ? ಪ್ರಧಾನಿ ಮೋದಿಯವರು ಈ ಬಗ್ಗೆ ಯಾಕೆ ಪ್ರತಿಕ್ರಿಯೆ ನೀಡುತ್ತಿಲ್ಲ?'ಅವರಿಗೆ ಅಷ್ಟು ಕೊಟ್ಟಿದ್ದೇನೆ, ಇವರಿಗೆ ಇಷ್ಟು ಕೊಟ್ಟಿದ್ದೇನೆ. ಎಲ್ಲಾ ಅನುದಾನಗಳನ್ನು ನಿಲ್ಲಿಸುತ್ತೇನೆ' ಎಂದೆಲ್ಲ ಪುಂಗಿ ಬಿಡುತ್ತಿರುವ ಅಮೆರಿಕ ಒಂದನ್ನು ತಿಳಿದುಕೊಳ್ಳಬೇಕಾಗಿದೆ.


---

# ಹೇಮಾವತಿ ತೀರ




ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಹೇಮಾವತಿ ತೀರ ಯುವ ಬರಹಗಾರ, ಇಂಜಿನಿಯರಿಂಗ್ ವಿದ್ಯಾರ್ಥಿ ಅಕ್ಕಿಹೆಬ್ಬಾಳು ಮೊಹಮ್ಮದ್ ಅಜರುದ್ದೀನ್ ಅವರ ಕೃತಿ. ಇದು ಲೇಖಕರ ತವರೂರು ಅಕ್ಕಿಹೆಬ್ಬಾಳು (ಮಂಡ್ಯ) ಜಿಲ್ಲೆ ಗ್ರಾಮದ ವಿಶೇಷಗಳನ್ನು ಪರಿಚಯಿಸುವ ಕೃತಿ. ಗಾಯತ್ರಿ ಪ್ರಕಾಶನ ಇವರು ಪ್ರಕಟಿಸಿದ್ದಾರೆ. ಮುನ್ನುಡಿಯಲ್ಲಿ ಶ್ರೀ ಶಶಿಧರ ಭಾರಿಘಾಟ್ ಅವರು, ಅಕ್ಕಿಹೆಬ್ಬಾಳು ಸಾಹಿತ್ಯ, ಸಂಸ್ಕೃತಿಯ ವಿಷಯದಲ್ಲಿ ಕರ್ನಾಟಕದ ಭೂಪಟದಲ್ಲಿ ವಿಶೇಷ ಸ್ಥಾನ ಪಡೆದಿದೆ. ಈ ಕೃತಿಯ ಲೇಖಕರು ಅಕ್ಕಿಹೆಬ್ಬಾಳು ಗ್ರಾಮದ ಸಾಹಿತ್ಯ ಪರಂಪರೆಯ ಕೊಂಡಿ ಕಳಚದಂತೆ ಯಶಸ್ಸು ಪಡೆಯಲೆಂದು ಹಾರೈಸಿದ್ದಾರೆ.



ಹಾಗಾಗಿ ಅಕ್ಕಿ ಹೆಬ್ಬಾಳು ಎಂದಾಯಿತು. ಅಕ್ಕಿ ಹೆಬ್ಬಾಳಿಗೆ ದಕ್ಷಿಣ ಬದರೀಕಾಶ್ರಮ, ಗೌತಮ ಕ್ಷೇತ್ರ' ಎಂದೂ ಕರೆಯುತ್ತಾರೆ. ಅಕ್ಕಿ ಹೆಬ್ಬಾಳಿನ ಕೊಂಕಣೇಶ್ವರ ದೇವಾಲಯವು ಸುಮಾರು 800 ವರ್ಷಗಳ ಹಿಂದಿನ ಚೋಳರ ಕಾಲದ್ದು, ಗ್ರಾಮದಲ್ಲಿ ಇರುವ ಪ್ರಾಚೀನ ದೇವಾಲಯಗಳಾದ ಶ್ರೀಲಕ್ಷ್ಮಿ ನರಸಿಂಹಸ್ವಾಮಿ ಮತ್ತು ಕೊಂಕಣೇಶ್ವರ ಈ ಗ್ರಾಮದ ಸಮಗ್ರ ಬೆಳವಣಿಗೆಯ ಮೂಲ ಕೇಂದ್ರವಾಗಿವೆ, ಈ ಕೃತಿಯಲ್ಲಿ ಗ್ರಾಮದ ದೇವಾಲಯಗಳಿಗೆ ಆಯಾ ಹೆಸರು ಬಂದಿರುವ ಹಿನ್ನೆಲೆ, ಗ್ರಾಮದ ಪ್ರಮುಖ ಶಾಸನಗಳು, ಗರುಡ ಬೃಂದಾವನಕಟ್ಟೆ ಉತ್ಸವಗಳು, ಜಾತ್ರೆ, ದೇವರಿಗೆ ಸಲ್ಲಿಸುವ ವಿಶೇಷ ಸೇವೆಗಳು, ಸಂರಕ್ಷಣಾ ಕಾರ್ಯ, ವಡ್ಡರಗುಡಿ ಲಕ್ಷ್ಮೀದೇವಿಯ ದೇವಾಲಯ... ಮೊದಲಾದ ವಿಷಯಗಳ ಕುರಿತಂತೆ ಮಾಹಿತಿಗಳಿವೆ. ಅಕ್ಕಿಹೆಬ್ಬಾಳಿಗೆ ಟಿಪ್ಪು ಭೇಟಿ ನೀಡಿದ್ದು, ಗಾಂಧೀಜಿ ಬಂದದ್ದು ಮೊದಲಾದ ವಿವರಗಳಿವೆ.

ಕೆಲವು ಕಥೆಗಳನ್ನು ತುಂಬ ಸ್ವಾರಸ್ಯ ಪೂರ್ಣವಾಗಿ ವಿವರಿಸಿದ್ದಾರೆ. ಅಕ್ಕಿಹೆಬ್ಬಾಳಿನ ಪ್ರಖ್ಯಾತ ಶ್ರೀ.ಎ.ಎನ್. ಮೂರ್ತಿರಾವ್, ಡಾ.ನಾಗಪ್ಪ (ಹಿಂದಿ ಭಾಷೆಯಲ್ಲಿ ದಕ್ಷಿಣ ಭಾರತದಲ್ಲೇ ಮೊಟ್ಟಮೊದಲು ಹಿಂದಿ ಭಾಷೆಯಲ್ಲಿ ಎಂ.ಎ. ಪದವಿ ಪಡೆದವರು), ಆ.ನ. ಸುಬ್ಬರಾವ್, ಆಕಾಶವಾಣಿ ಈರಣ್ಣ (ಎ.ಎಸ್.ಮೂರ್ತಿ) ವಿಡಂಬನಾ ಸಾಹಿತಿ ಅ.ರಾ.ಶೇಷಗಿರಿ, ಪತ್ರಕರ್ತ ಕೃ.ನ.ಮೂರ್ತಿ, ಕಾದಂಬರಿಕಾರ ಆ.ರಾ. ಆನಂದ, ಶಿಶುಸಾಹಿತಿ ಅ.ರಾ.ಚಂದ್ರ, ಹಾಸ್ಯಸಾಹಿತಿ ಅ.ರಾ. ಮಿತ್ರ, ಡಾ.ವಿಜಯಲಕ್ಷ್ಮಿ, ಡಾ.ಎ.ಆರ್.ಶ್ರೀಧರ್... ಮೊದಲಾದವರ ಪರಿಚಯವಿದೆ, ಶತಾಯುಷಿ ಡಾ.ಎ.ಎನ್.ಮೂರ್ತಿರಾಯರ ಪರಿಚಯವನ್ನು ತುಂಬ ಸೊಗಸಾಗಿ ಮಾಡಿದ್ದಾರೆ. ಅಕ್ಕಿಹೆಬ್ಬಾಳಿನ ಮೂಡಲಪಾಯ ಯಕ್ಷಗಾನ ಪರಂಪರೆಯ 'ಘಟ್ಟದಕೋರೆ' ಕುರಿತು ಮಾಹಿತಿ ನೀಡಿದ್ದಾರೆ. ಆದರೆ ಇಂದದು ಬರಿಯ ನೆನಪಾಗಿ ಉಳಿದಿರುವುದಕ್ಕೆ ಖೇದಿಸಿದ್ದಾರೆ. ಶ್ರೀ ಶಶಿಧರ ಭಾರಿಘಾಟ್ ಅವರ ಲೋಕಾಯನ ರಂಗಶಿಬಿರದ ಬಗ್ಗೆ ಹರ್ಷಿಸಿದ್ದಾರೆ. ಆಧುನಿಕ ಯುಗದ ಯುವ ಜನಾಂಗ ಪಾರಂಪರಿಕ ಕಲೆಗಳ ಬಗ್ಗೆ ಆಸಕ್ತಿ ವಹಿಸಬೇಕೆಂದು ಆಶಿಸಿದ್ದಾರೆ. ಈ ಲೋಕಾಯನ ಸಂಸ್ಥೆಯ ದಶಕದ ಸಾಧನೆಯನ್ನು ಹೃದ್ಯವಾಗಿ ನಿರೂಪಿಸಿದ್ದಾರೆ. ಇನ್ನೂ ವಿದ್ಯಾರ್ಥಿಯಾಗಿರುವ ಮೊಹಮ್ಮದ್ ಅಜರುದ್ದೀನ್ ಅವರ ಆಸಕ್ತಿ ಮೆಚ್ಚುವಂಥದ್ದು, ಇಂಥ ಯುವಕರು ಊರಿಗೆ ಒಬ್ಬೊಬ್ಬರಿದ್ದರೂ ಆ ಊರಿನ ಪರಿಚಯ ನಾಡಿಗಾಗುತ್ತದೆ. ಈ ನಿಟ್ಟಿನಲ್ಲಿ ಇಂದಿನ ಯುವಕರಿಗೆ ಮಾದರಿ ಆಗಿರುವ ಮೊಹಮ್ಮದ್ ಅಜರುದ್ದೀನ್ (9806160571) ಅವರಿಗೆ ಹಾರ್ದಿಕ ಅಭಿನಂದನೆಗಳು ತಮ್ಮೂರಿಗೆ ಸಂಬಂಧಿಸಿದಂತೆ ಅನೇಕ ವಿಷಯಗಳನ್ನು ಸುಂದರ ಚಿತ್ರಗಳಿಂದ ಅಲಂಕರಿಸಿ ರಚಿಸಿರುವ ಈ ಕೃತಿ ಆಸಕ್ತರಿಗೆ ಮಾರ್ಗದರ್ಶನವಾಲೆಂದು ಆಶಿಸುವೆ.





---

# ಎಂಇಎಸ್ ಪುಂಡರಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಬೆಂಬಲ

## ರಾಜೀನಾಮೆಗೆ ಇಂಡಿಯನ್ ವೆಹಿಕಲ್ ಡ್ರೈವರ್ಸ್ ಟ್ರೇಡ್ ಯೂನಿಯನ್ ಆಗ್ರಹ

• ಉದಯವಾಹಿನಿ ಬೆಂಗಳೂರು,

ಬೆಳಗಾವಿ ತಾಲ್ಲೂಕಿನ ಸಣ್ಣ ಬಾಳೆಕುಂದ್ರಿಯಲ್ಲಿ ಸಾರಿಗೆ ಸಂಸ್ಥೆ ನಿರ್ವಾಹಕನ ಮೇಲೆ ಎಂಇಎಸ್ ಪುಂಡರು ನಡೆಸಿದ ಪುಂಡಾಟಿಕೆಯಿಂದಾಗಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು, ಕೂಡಲೇ ಮರಾಠಿ ಪುಂಡರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಇಂಡಿಯನ್ ವೆಹಿಕಲ್ ಡ್ರೈವರ್ಸ್ ಟ್ರೇಡ್ ಯೂನಿಯನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಆಗ್ರಹಿಸಿದ್ದಾರೆ.



ಎಂಇಎಸ್ ಪುಂಡರ ಹಾವಳಿ ಹೆಚ್ಚಾಗಲು ಮಹಿಳಾ ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಾರಣರಾಗಿದ್ದು, ಮತಬ್ಯಾಂಕ್ ರಾಜಕಾರಣಕ್ಕಾಗಿ ಓಲೈಕೆ ರಾಜಕೀಯದಲ್ಲಿ ತೊಡಗಿದ್ದಾರೆ. ಕನ್ನಡಿಗರ ಹಿತ ರಕ್ಷಣೆ ಮಾಡಲು ಸಾಧ್ಯವಾಗದ ಅವರು ಕೂಡಲೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಕನ್ನಡಿಗರ ರಕ್ಷಣೆ ಮಾಡಲು ಸಾಧ್ಯವಾಗದಿದ್ದರೆ ಬೆಳಗಾವಿ ಮತ್ತು ಬೆಂಗಳೂರಿನ ಲಕ್ಷ್ಮೀ ಹೆಬ್ಬಾಳ್ಕರ್ ನಿವಾಸಕ್ಕೆ ಮುತ್ತಿಗೆ ಹಾಕುತ್ತೇವೆ. ರಾಜ್ಯದಲ್ಲಿ ಸಚಿವರು ಸಂಚರಿಸಲು ಸಾಧ್ಯವಾಗದಂತೆ ಎಲ್ಲೆಡೆ ಘೇರಾವ್ ಹಾಕುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ. ಎಂಇಎಸ್ ಪುಂಡರು ಹಲ್ಲೆ ಮಾಡಿದ ಕಾರಣಕ್ಕೆ ಎರಡೂ ರಾಜ್ಯಗಳಲ್ಲಿ ಕಾನೂನು ಪರಿಸ್ಥಿತಿ ಹದಗೆಟ್ಟಿದೆ. ಪ್ರತಿನಿತ್ಯ ಲಕ್ಷಾಂತರ ವಾಹನಗಳು ಸಂಚರಿಸುತ್ತವೆ. ಆದರೆ ಸರಕು ಸಾಗಾಣೆ ಮತ್ತು ಪ್ರಯಾಣಿಕರ ವಾಹನಗಳು ಸಂಚರಿಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಚಾಲಕರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಚಾಲಕರು ಮತ್ತು ಅವರ ಕುಟುಂಬಕ್ಕೆ ಏನಾದರೂ ತೊಂದರೆಯಾದರೆ ಅವರೇ ಹೊಣೆ ಹೊರಬೇಕಾಗುತ್ತದೆ. ಇದೇ ರೀತಿ ಪುಂಡಾಟಿಕೆ ಮುಂದುವರೆದರೆ ನಾವೂ ಕೂಡ ತಕ್ಕ ಪ್ರತ್ಯುತ್ತರ ನೀಡಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

> **ಮರಾಠಿ ಪುಂಡರ ವರ್ತನೆಗೆ ವ್ಯಾಪಕ ಆಕ್ರೋಶ**
> **ಕರ್ನಾಟಕದಲ್ಲಿ ಕನ್ನಡಿಗರ ಮೇಲೆ ಪರಭಾಷಿಕರ ದಬ್ಬಾಳಿಕೆ ನಿರಂತರವಾಗಿ ನಡೆಯುತ್ತಿದೆ. ಮರಾಠಿ ಪುಂಡರ ವರ್ತನೆಗೆ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ. ಕನ್ನಡ ಪರ ಸಂಘಟನೆಗಳು ಮರಾಠಿ ಪುಂಡರ ವಿರುದ್ಧ ಹಲವು ಕಡೆಗಳಲ್ಲಿ ಪ್ರತಿಭಟನೆ ನಡೆಸಿದ್ದು, ಸರ್ಕಾರಿ ನೌಕರನ ಮೇಲೆ ಹಲ್ಲೆ ಮಾಡುವ ಹಂತಕ್ಕೆ ಅವರು ತಲುಪಿರುವುದು ಖಂಡನೀಯ. ಕರ್ನಾಟಕ ಸುವರ್ಣ ಮಹೋತ್ಸವದಲ್ಲಿದೆ. ಇಂತಹ ಸಂದರ್ಭದಲ್ಲಿ ಕನ್ನಡಿಗರ ಸ್ವಾಭಿಮಾನ ಕೆಣಕುವ ಪ್ರಯತ್ನ ಮುಂದುವರೆಸಿದರೆ ತಕ್ಕ ಶಾಸ್ತಿ ಮಾಡುತ್ತೇವೆ ಎಂದು ಗಂಡಸಿ ಸದಾನಂದ ಸ್ವಾಮಿ ಹೇಳಿದ್ದಾರೆ.**

ಈ ಕುರಿತು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರಿಗೆ ಮನವಿ ಸಲ್ಲಿಸಿರುವ ಗಂಡಸಿ ಸದಾನಂದ ಸ್ವಾಮಿ, ಈ ಘಟನೆಯಿಂದ ಸರಕು ಸಾಗಣೆ, ವಾಣಿಜ್ಯ ವಾಹನಗಳ ಚಾಲಕರು ಭೀತಿಯಲ್ಲಿದ್ದಾರೆ. ಕಾನೂನು ಸುವ್ಯವಸ್ಥೆ ಹಾಳಾಗಿದ್ದು, ಮಹಿಳೆಯರು ಮತ್ತು ಮಕ್ಕಳ ರಕ್ಷಣೆ ಮಾಡುವುದು ಅತ್ಯಂತ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಮಹಾರಾಷ್ಟ್ರ ಸರ್ಕಾರ, ಅಲ್ಲಿನ ಸಾರಿಗೆ ಇಲಾಖೆ ಮತ್ತು ಪೊಲೀಸ್ ಇಲಾಖೆಗೆ ರಾಜ್ಯ ಸರ್ಕಾರ ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕು ಎಂದು ಆಗ್ರಹಿಸಿದ್ದಾರೆ.

---

# ಫೆ.26ರಂದು ಪ್ರಾಣಿ ವಧೆ, ಮಾಂಸ ಮಾರಾಟ ನಿಷೇಧ

• ಉದಯವಾಹಿನಿ ಬೆಂಗಳೂರು

ಮಹಾಶಿವರಾತ್ರಿ ಹಬ್ಬದ (ಪ್ರಯುಕ್ತ ಫೆಬ್ರವರಿ 26ರಂದು ಬೆಂಗಳೂರಿನಲ್ಲಿ ಪ್ರಾಣಿ ವಧೆ, ಮಾಂಸ ಮಾರಾಟ ನಿಷೇಧಿಸಲಾಗಿದೆ. ಎಲ್ಲಾ ರೀತಿಯ ಮಾಂಸ ಮಾರಾಟ ಮಾಡದಂತೆ ಬಿಬಿಎಂಪಿ ಆದೇಶ ಹೊರಡಿಸಿದೆ. ಹೀಗಾಗಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಎಲ್ಲಾ ಕಸಾಯಿಖಾನೆ ಮುಚ್ಚುವಂತೆ ಆದೇಶಿಸಿದ್ದು, ಒಂದು ವೇಳೆ ಆದೇಶ ಉಲ್ಲಂಘಿಸಿ ಪ್ರಾಣಿ ವಧೆ, ಮಾಂಸ ಮಾರಾಟ ಮಾಡಿದರೆ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಬಿಬಿಎಂಪಿ ಎಚ್ಚರಿಕೆ ನೀಡಿದೆ. ಬೆಂಗಳೂರಿನ ಯಲಹಂಕ ವಾಯುನೆಲೆಯಲ್ಲಿ ಏರ್ ಶೋ-2025ರ ಪ್ರಯುಕ್ತ 23ನೇ ಜನವರಿಯಿಂದ 17ನೇ ಫೆ.2025ರವರೆಗೆ ಮಾಂಸ ಮಾರಾಟವನ್ನು ನಿಷೇಧಿಸಲಾಗಿತ್ತು. ಯಲಹಂಕ ವಲಯದ ಏರ್‌ಪೋರ್ಸ್ ಸ್ಟೇಷನಿಂದ 13 ಕಿ.ಮೀ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮಾಂಸ ಮಾರಾಟದ ಉದ್ದಿಮೆಗಳು ಮುಚ್ಚಬೇಕು ಹಾಗೂ ಹೋಟೆಲ್ ಮತ್ತು ಡಾಬಾಗಳಲ್ಲಿ ಮಾಂಸಾಹಾರ ತಯಾರಿಕೆ ಮತ್ತು ಮಾರಾಟವನ್ನು ನಿಷೇಧ ಮಾಡಲಾಗಿತ್ತು.



ಇದಕ್ಕೆ ವ್ಯಾಪಕ ವಿರೋಧಗಳು ವ್ಯಕ್ತವಾಗಿದ್ದವು. ಇದೀಗ ಮಹಾಶಿವರಾತ್ರಿಯಂದು ಫೆ.26ರಂದು ಸಹ ಮತ್ತೊಮ್ಮೆ ಮಾಂಸ ಮಾರಾಟ ನಿಷೇಧಿಸಿ ಬಿಬಿಎಂಪಿ ಆದೇಶ ಹೊರಡಿಸಿದೆ. ಫೆಬ್ರವರಿ 26ರ ಬುಧವಾರ ಮಹಾಶಿವರಾತ್ರಿ ಹಬ್ಬ. ಈ ಹಬ್ಬ ಅತ್ಯಂತ ಶಕ್ತಿಯುತ, ಪವಿತ್ರ ಹಿಂದೂ ಹಬ್ಬಗಳಲ್ಲಿ ಒಂದಾಗಿದೆ. ಈ ದಿನ ಭಕ್ತರು ಶಿವನ ಪ್ರೀತಿ ಭಕ್ತಿಯಲ್ಲಿ ಮುಳುಗುತ್ತಾರೆ. ದೈವಿಕ ಶಕ್ತಿಗಳೊಂದಿಗೆ ಸಂಪರ್ಕ ಸಾಧಿಸಲು ರಾತ್ರಿಯನ್ನು ಧ್ಯಾನ, ಜಪ, ನೃತ್ಯ ಇನ್ನಿತರ ಧಾರ್ಮಿಕ ಚಟುವಟಿಕೆಯಲ್ಲಿ ತೊಡಗಿಕೊಳ್ಳುತ್ತಾರೆ. ಈ ದಿನ ಶಿವನ ಭಕ್ತರು ಬೆಳಗ್ಗೆಯಿಂದ ಸಂಜೆ ವರೆಗೂ ಉಪವಾಸ ಮಾಡುತ್ತಾರೆ.

---

# ಸಾರ್ವಜನಿಕರ ಸಹಕಾರದಿಂದ ಸಮಸ್ಯೆಗಳಿಗೆ ಪರಿಹಾರ ಸಾಧ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ ರಾಜಾಜಿನಗರ

ವಿಧಾನಸಭಾ ಕ್ಷೇತ್ರ ಶಾಸಕರ ಜನಸಂಪರ್ಕ ಕಛೇರಿ ಮುಂಭಾಗದಲ್ಲಿ ಜನರೊಂದಿಗೆ ಜನಸೇವಕ ಜನಸ್ಪಂದನಾ ಕಾರ್ಯಕ್ರಮ ಏಳನೇಯ ವಾರದ ಕಾರ್ಯಕ್ರಮವನ್ನು ಮಾಜಿ ಶಿಕ್ಷಣ ಸಚಿವರು, ಶಾಸಕರಾದ ಎಸ್.ಸುರೇಶ್ ಕುಮಾರ್ ರವರ ನೇತೃತ್ವದಲ್ಲಿ ಜರುಗಿತು. ಸಣ್ಣ, ಸಣ್ಣ ಸಮಸ್ಯೆಗಳು ದೊಡ್ಡದಾಗುತ್ತದೆ ಪ್ರಥಮ ಹಂತದಲ್ಲಿ ಕ್ರಮ ಕೈಗೊಂಡರೆ ದೊಡ್ಡ ಅನಾಹುತ ತಪ್ಪುತ್ತದೆ ಸಾರ್ವಜನಿಕರು ಕಸವನ್ನು ಕಸ ಸಂಗ್ರಹ ಮಾಡುವವರಿಗೆ ಕೊಡಿ ಮತ್ತು ಏಕ ಬಳಕೆ ಪ್ಲಾಸ್ಟಿಕ್ ಬಳಸಬೇಡಿ, ಒಟ್ಟೆ ಕೈ ಚೀಲ ಬಳಸಿ ಪರಿಸರ ಸ್ವಚ್ಛತೆ ಕಾಪಾಡಿ. ಬೇಸಿಗೆ ಕಾಲ ನೀರನ್ನು ಯಥೇಚ್ಛವಾಗಿ ಪೋಲು ಮಾಡಬೇಡಿ, ನೀರು ಅಮೂಲ್ಯ ಮಿತವಾಗಿ ಬಳಸಿ.

> **ಇದೇ ಸಂದರ್ಭದಲ್ಲಿ ಎಸ್. ಸುರೇಶ್ ಕುಮಾರ್ ರವರು ಮಾತನಾಡಿ ಸಮಸ್ಯೆ ನಿರಂತರ ಪರಿಹಾರಿಸಲು ಸಾರ್ವಜನಿಕರ ಸಹಕಾರ ಅಗತ್ಯ. ಪ್ರತಿ ಮನೆ ಮುಂದೆ ಕಸದ ಗಾಡಿಗಳು ಬರುತ್ತದೆ ಅದರು ಸಾರ್ವಜನಿಕರು ಎಲ್ಲೆಂದರಲ್ಲಿ ಕಸ ಬಿಸಾಡುತ್ತಾರೆ ಇದರಿಂದ ಪರಿಸರ ಸ್ವಚ್ಛತೆ ಹಾಳಾಗುತ್ತದೆ.**

ಕುಡಿಯುವ ನೀರು ಮತ್ತು ಕಸ ವಿಲೇವಾರಿ ಸಮಸ್ಯೆಗಳಿಗೆ ಸಾರ್ವಜನಿಕರು ಸಹಕಾರ ನೀಡಬೇಕು. ವಿಧಾನಸಭಾ ಕ್ಷೇತ್ರದಲ್ಲಿ ಗುಂಡಿಮುಕ್ತ ಮಾಡಬೇಕು ಎಂದು ತರಿತ್ವಗತಿಯಲ್ಲಿ ಗುಂಡಿ ಮುಚ್ಚಲಾಗುತ್ತಿದೆ.

ಮಾಜಿ ಉಪಮಹಾಪೌರರಾದ ರಂಗಣ್ಣ, ಮಾಜಿ ಪಾಲಿಕೆ ಸದಸ್ಯರುಗಳಾದ ರಾಜಣ್ಣ, ಹೆಚ್.ಕೃಷ್ಣಪ್ಪ, ಪ್ರತಿಮಾರವರು ಮಂಡಲ ಅಧ್ಯಕ್ಷರಾದ ಸುದರ್ಶನ್, ಮತ್ತು ಬಿಜೆಪಿ ಮುಖಂಡರುಗಳಾದ ಗಿರೀಶ್ ಗೌಡ, ಬಿ.ಎನ್.ಶ್ರೀನಿವಾಸ್, ಕಾಮಧೇನು ಸುರೇಶ್, ಯಶಸ್ ನಾಯಕ್, ವೆಂಕಟೇಶ್ ಬಾಬು,ಅನಿಲ್ ರಂಗಣ್ಣ, ಕೇಶವಮೂರ್ತಿ, ಮೋಹನ್ ರಾಜ್, ಪ್ರವೀಣ್ ಕಿರಣ್, ವಿಶ್ವನಾಥ್, ಟಿ.ಎನ್. ರಮೇಶ್, ಗೌತಮ್ ಹಾಗೂ ಬಿಬಿಎಂಪಿ ಅಧಿಕಾರಿಗಳು, ಬೆಸ್ಕಾಂ, ಜಲಮಂಡಳಿ ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

---

# ರಾಮಾಯಣ



## ಶ್ರೀರಾಮನ ಪಟ್ಟಾಭಿಷೇಕಕ್ಕೆ ಪುರೋಹಿತರ ಸಿದ್ಧತೆ

• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ದಶರಥರಾಯನು ಕೈಕೇಯಾದೇವಿಯ ನಿಷ್ಠುರೋಕ್ತಿಗಳೆಂಬ ಕಂಠಪಾಶವನ್ನು ಪರಿಹರಿಸಿಕೊಳ್ಳುವುದಕ್ಕೆ ಸಮರ್ಥನಾಗದೆ ಭ್ರಾಂತಿಯಿಂದ ಮುಖಕಾಂತಿಗುಂದಿ ಗಾಲಿ ನೊಗಗಳ ಮಧ್ಯಪ್ರದೇಶದಲ್ಲಿ ಸಿಕ್ಕಿದ ಎತ್ತಿನಂತೆ ಅತ್ಯಂತ ದುಃಖಪಡುತ್ತಿದ್ದನು. ಆ ಬಳಿಕ ಧೈರ್ಯವನ್ನು ತಂದುಕೊಂಡು ಕೈಕೇಯಿದೇವಿಯನ್ನು ಕುರಿತು ಹೀಗೆಂದನು: ಕೈಕೇಯಿ, ಪಾಪಸ್ವರೂಪಳಾದ ನಿನ್ನನ್ನು ಅಗ್ನಿ ಸಾಕ್ಷಿಕವಾಗಿ ಕೈ ಹಿಡಿದೆನು. ನೀನು ಶ್ರೀರಾಮನ ಪಟ್ಟಾಭಿಷೇಕಕ್ಕೆ ವಿಘ್ನವನ್ನು ಮಾಡಿದ ಪಕ್ಷದಲ್ಲಿ ನಿನ್ನನ್ನೂ ನಿನ್ನ ಮಗನಾದ ಭರತನನ್ನೂ ಪರಿತ್ಯಾಗ ಮಾಡುವೆನು. ಈಗ ರಾತ್ರಿಯು ಕಳೆದು ಪ್ರಾತಃಕಾಲವಾಗುತ್ತಿದೆ. ನನ್ನ ಗುರುವಾದ ವಸಿಷ್ಠ ಮುನೀಶ್ವರನು ಶ್ರೀರಾಮನ ಪಟ್ಟಾಭಿಷೇಕಕ್ಕಾಗಿ ತ್ವರೆಮಾಡುವನು. ಈ ಪಟ್ಟಾಭಿಷೇಕಾರ್ಥವಾಗಿ ಸಂಪಾದಿಸಿದ ವಸ್ತುಗಳಿಂದ ಶ್ರೀರಾಮನಿಗೆ ಪಟ್ಟಾಭಿಷೇಕವಾಗಲಿ! ನನ್ನ ಶರೀರಾಂತ್ಯದಲ್ಲಿ ನನಗೆ ಶ್ರೀರಾಮನೇ ಉತ್ತರಕ್ರಿಯೆಗಳನ್ನು ಮಾಡಲಿ! ನಿನ್ನ ಮಗನಾದ ಭರತನು ನನಗೆ ಅಂತ್ಯಕ್ರಿಯೆಗಳನ್ನು ಮಾಡಕೂಡದು! ಎಲೇ ದುಷ್ಟೆ, ಶ್ರೀರಾಮನ ಪಟ್ಟಾಭಿಷೇಕವನ್ನು ನಿಲ್ಲಿಸಿದರೆ ಆತನು ಅವೃತ್ತಾಂತವನ್ನು ಕೇಳಿ ಹರ್ಷಗುಂದಿ ತಲೆಬಾಗಿ ದೈನ್ಯದಿಂದ ಕೂಡಿದ ಮುಖವುಳ್ಳವ ನಾಗಿರುವುದನ್ನು ನೋಡಲಾರೆನು ! ನಕ್ಷತ್ರ ಸಮೂಹವನ್ನೂ ಚಂದ್ರಮಂಡಲವನ್ನೂ ಕೂಡಿ ಒಪ್ಪುತ್ತಿದ್ದ ರಾತ್ರಿಯು ಕಳೆದು ಪ್ರಾತಃಕಾಲವಾಯಿತು ಎಂದು ನುಡಿದನು. ಹಾಗೆ ಹೇಳುತ್ತಿರುವಾಗಲೇ ಕೈಕೇಯಾದೇವಿಯು ''ಮಹಾರಾಜ, ನೀನು ನುಡಿದ ವಾಕ್ಯವು ಶರೀರದಲ್ಲಿ ಹುಟ್ಟಿದ ವ್ಯಾಧಿಯಂತೆ ನನ್ನ ಮನಸ್ಸಿಗೆ ವ್ಯಥೆಯನ್ನುಂಟುಮಾಡುತ್ತದೆ. ನೀನು ಶ್ರೀರಾಮನ ಪಟ್ಟಾಭಿಷೇಕವನ್ನು ನಿಲ್ಲಿಸಿ ಆತನನ್ನು ವನವಾಸಕ್ಕೆ ಕಳುಹಿಸಿ ಭರತನಿಗೆ ಪಟ್ಟವನ್ನು ಕಟ್ಟಿ ನನಗೆ ಪರರಿಂದ ಭಯವಿಲ್ಲದಂತೆ ಮಾಡಿದರೆ ಕೃತಾರ್ಥನಾಗುತ್ತೀಯೆ ಎಂದು ನುಡಿದಳು.

ದಶರಥರಾಯನು ತೀಕ್ಷ್ಣವಾದ ಚುಬುಕಿನ ಪೆಟ್ಟಿನಿಂದ ಉತ್ತಮಾಶ್ವವು ಕೆರಳಿ ಏಳುವಂತೆ ಬೆಚ್ಚಿ ಬಿದ್ದು ಕೈಕೇಯಾದೇವಿಯನ್ನು ಕುರಿತು ನಾನು ಧರ್ಮದ ಕಟ್ಟಿಗೆ ಸಿಕ್ಕಿದ್ದೇನೆ. ಧಾರ್ಮಿಕನಾದ ನನ್ನ ಜೇಷ್ಠಪುತ್ರ ಶ್ರೀರಾಮನನ್ನು ನೋಡಬಯಸುತ್ತೇನೆ ಎಂದು ನುಡಿದನು. ಆ ಸಮಯದಲ್ಲಿ ರಾತ್ರಿಯು ಕಳೆದು ಸೂರ್ಯೋದಯವಾಗುತ್ತಿರಲು ವಸಿಷ್ಠ ಮುನೀಶ್ವರನು ಶುಭಮುಹೂರ್ತದಲ್ಲಿ ಪಟ್ಟಾಭಿಷೇಕವನ್ನು ಮಾಡಬೇಕೆಂದು ತನ್ನ ಶಿಷ್ಯರೊಡನೆ ಪಟ್ಟಾಭಿಷೇಕಕ್ಕೆಯೋಗ್ಯವಾದ ವಸ್ತುಗಳನ್ನು ತರಿಸಿಕೊಂಡು ಸರ್ವಾಲಂಕಾರಗಳಿಂದ ಮೆರೆಯುತ್ತಿದ್ದ ಅಯೋಧ್ಯಾ ಪಟ್ಟಣವನ್ನು ಪ್ರವೇಶಿಸಿದನು.

ಆ ಪಟ್ಟಣವು ಎಲ್ಲಿನೋಡಿದರೂ ಸಂಮಾರ್ಜನೆ ರಂಗವಲ್ಲಿ ಮೇಲ್ಕಟ್ಟು ತೋರಣ ಕಲಶ ಕನ್ನಡಿ ಪತಾಕೆ ಮುತ್ತಿನಸರ ಝುಲ್ಲರಿ ಪುಷ್ಪಸರ ಸಾಂಬ್ರಾಣಿ ಧೂಪ ಚಂದನ ಕರ್ಪೂರಾಗರುಮಿಶ್ರಿತವಾದ ಗಂಧೋದಕಗಳಿಂದಲೂ ಮುತ್ತು ಮಾಣಿಕ್ಯ ವೈಡೂರ ಪುಷ್ಯರಾಗ ಮರಕತ ವಜ್ರ ಇಂದ್ರನೀಲ ಪ್ರವಾಳ ಗೋಮೇಧಿಕಗಳೆಂಬ ನವರತ್ನ ರಾಶಿಗಳುಳ್ಳ ಅಂಗಡಿಗಳಿಂದಲೂ ಪುರಜನಗಳಿಂದಲೂ ಚೌಬೀದಿಗಳಲ್ಲಿ ಅತ್ಯಂತ ಸ್ವಾಮವಾದ ಅರವಟ್ಟಿಗೆಗಳಿಂದಲೂ ನಾನಾ ಆಭರಣಭೂಷಿತರಾದ ಜನರಿಂದಲೂ ಮನೋಹರವಾಗಿತ್ತು.

ಮುಂದುವರಿಯುವುದು...

---

# ಮಹಾಶಿವರಾತ್ರಿ ವ್ರತವನ್ನು ಹೇಗ ಮಾಡಬೇಕು ?

■ ಶ್ರೀ. ವಿನೋದ ಕಾಮತ್
• ಉದಯವಾಹಿನಿ ಬೆಂಗಳೂರು

ಮಹಾಶಿವರಾತ್ರಿ ಎಂದರೆ ಶಿವನ ವಿಶ್ರಾಂತಿಯ ಕಾಲ. ಮಾಘ ಕೃಷ್ಣ ಚತುರ್ದಶಿಯಂದು, ದೇವಲೋಕದಲ್ಲಿ ಶಿವನು ರಾತ್ರಿಯ ಒಂದು ಪ್ರಹರ ವಿಶ್ರಾಂತಿಯನ್ನು ಪಡೆಯುವಾಗ, ಅದು ಪೃಥ್ವಿಯ ಮೇಲೆ ವರ್ಷಕ್ಕೊಂದು ಸಲ ಮಹಾಶಿವರಾತ್ರಿ ಎಂದು ಆಚರಿಸಲಾಗುತ್ತದೆ. ಮಹಾಶಿವರಾತ್ರಿಯು ಭಾರತದಾದ್ಯಂತ ಆಚರಿಸಲ್ಪಡುವ ವಿಶೇಶ ವ್ರತವಾಗಿದೆ.



ಮಹಾಶಿವರಾತ್ರಿಯ ಕಾಲದಲ್ಲಿ ಶಿವತತ್ತ್ವದ ಕಾರ್ಯ ನಿಂತುಹೋಗುತ್ತದೆ ಅಂದರೆ ಆ ಸಮಯದಲ್ಲಿ ಶಿವನು ಧ್ಯಾನಾವಸ್ಥೆಯಿಂದ ಸಮಾಧಿ ಅವಸ್ಥೆಗೆ ಹೋಗುತ್ತಾನೆ. ಶಿವನ ಸಮಾಧಿಸ್ಥಿತಿ ಅಂದರೆ ಶಿವನು ತನಗಾಗಿ ಸಾಧನೆ ಮಾಡುವ ಕಾಲ. ಈ ಸಮಯದಲ್ಲಿ ತಿಳಿದೋ ತಿಳಿಯದೆಯೋ ಶಿವ ಪೂಜೆ-ಉಪಾಸನೆ ಮಾಡಿದ್ದಲ್ಲಿ, ಆ ಉಪಾಸನೆಯಲ್ಲಿ ಏನಾದರೂ ಕುಂದು ಕೊರತೆಯಿದ್ದರೂ, ಫಲ ಮಾತ್ರ 100 ಶೇ. ದೊರೆಯುತ್ತದೆ. ಮಹಾಶಿವರಾತ್ರಿಯ ದಿನ ಶಿವತತ್ತ್ವವು ಎಂದಿಗಿಂತ 1000 ಪಟ್ಟು ಹೆಚ್ಚು ಕಾರ್ಯನಿರತವಾಗಿರುತ್ತದೆ. ಈ ದಿನ ಮಾಡುವ ಉಪಾಸನೆಯಿಂದ ಹೆಚ್ಚಿನ ಪ್ರಮಾಣದಲ್ಲಿ ಶಿವ ತತ್ತ್ವದ ಲಾಭವೂ ಆಗುತ್ತದೆ.

**ಮಹಾಶಿವರಾತ್ರಿ ವ್ರತವನ್ನು ಹೇಗ ಮಾಡಬೇಕು ?:** ಮಹಾಶಿವರಾತ್ರಿ ವ್ರತಕ್ಕೆ 'ಉಪವಾಸ, ಪೂಜೆ ಮತ್ತು ಜಾಗರಣೆ' ಹೀಗೆ ಮೂರು ಅಂಗಗಳಾಗಿವೆ.

ಮಾಘ ಕೃಷ್ಣ ತ್ರಯೋದಶಿಯಂದು ಏಕಭುಕ್ತರಾಗಿರಬೇಕು (ಒಪ್ಪೊತ್ತಿನ ಊಟ ಮಾಡುವುದು) ಚತುರ್ದಶಿಯಂದು ಬೆಳಗ್ಗೆ ಮಹಾಶಿವರತ್ರಿ ವ್ರತದ ಸಂಕಲ್ಪವನ್ನು ಮಾಡಿ ಸಾಯಂಕಾಲ ನದಿಯಲ್ಲಿ ಅಥವಾ ಕೆರೆಯಲ್ಲಿ ಶಾಸ್ತ್ರೋಕ್ತವಾಗಿ ಸ್ನಾನ ಮಾಡಬೇಕು. ಭಸ್ಮ ಮತ್ತು ರುದ್ರಾಕ್ಷಿಗಳನ್ನು ಧರಿಸಬೇಕು. ಪ್ರದೋಷಕಾಲದಲ್ಲಿ ಶಿವನ ದೇವಸ್ಥಾನಕ್ಕೆ ಹೋಗಬೇಕು. ಶಿವನ ಧ್ಯಾನವನ್ನು ಮಾಡಬೇಕು, ಆಮೇಲೆ ಷೋಡಶೋಪಚಾರ ಪೂಜೆಯನ್ನು ಮಾಡಿ ಭವ ಭಾವಿನಿ ಪ್ರೀತ್ಯರ್ಥ ತರ್ಪಣವನ್ನು ನೀಡಬೇಕು. ಶಿವನಿಗೆ 108 ಕಮಲಗಳನ್ನು ಅಥವಾ ಬಿಲ್ವಪತ್ರೆಗಳನ್ನು ನಾಮಮಂತ್ರ ಸಹಿತ ಅರ್ಪಿಸಬೇಕು.

ಆಮೇಲೆ ಪುಷ್ಪಾಂಜಲಿಯನ್ನು ಅರ್ಪಿಸಿ ಅರ್ಘ್ಯ ನೀಡಬೇಕು. ಪೂಜೆ, ಸ್ತೋತ್ರ ಪಠಣ ಮತ್ತು ಮೂಲಮಂತ್ರ ಜಪದ ನಂತರ ಶಿವನ ಮಸ್ತಕದ ಮೇಲಿನ ಒಂದು ಹೂವನ್ನು ತಮ್ಮ ತಲೆಯ ಮೇಲಿಟ್ಟುಕೊಳ್ಳಬೇಕು ಮತ್ತು ಕ್ಷಮಾಯಾಚನೆ ಮಾಡಬೇಕು.


**ಯಾಮಪೂಜೆ:** ಶಿವರಾತ್ರಿಯಂದು ರಾತ್ರಿಯ ನಾಲ್ಕು ಪ್ರಹರಗಳಲ್ಲಿ ನಾಲ್ಕು ಪೂಜೆಗಳನ್ನು ಮಾಡಬೇಕೆಂಬ ವಿಧಾನವಿದೆ. ಅದಕ್ಕೆ ಯಾಮಪೂಜೆ ಎನ್ನುತ್ತಾರೆ.

ಪ್ರತಿಯೊಂದು ಯಾಮಪೂಜೆಯಲ್ಲಿ ದೇವರಿಗೆ ಅಭ್ಯಂಗಸ್ನಾನ ಮಾಡಿಸಬೇಕು, ಅನುಲೇಪನ ಮಾಡಿ ಧೋತ್ರಾ, ಮಾವಿನ, ಬಿಲ್ವದ ಎಲೆಗಳನ್ನು ಅರ್ಪಿಸಬೇಕು. ಅಕ್ಕಿಯ ಹಿಟ್ಟಿನ 26 ದೀಪಗಳನ್ನು ಮಾಡಿ ಅವುಗಳನ್ನು ದೇವರಿಗೆ ಬೆಳಗಬೇಕು. ಪೂಜೆಯ ನಂತರ 108 ದೀಪಗಳನ್ನು ದಾನ ಮಾಡಬೇಕು. ಪ್ರತಿಯೊಂದು ಪೂಜೆಯ ಮಂತ್ರಗಳು ಬೇರೆಬೇರೆಯಾಗಿರುತ್ತವೆ, ಅವುಗಳಿಂದ ಅರ್ಘ್ಯವನ್ನು ನೀಡಬೇಕು. ನೃತ್ಯ, ಗೀತೆ, ಕಥಾಶ್ರವಣ ಮುಂತಾದ ವಿಷಯಗಳಿಂದ ಜಾಗರಣೆಯನ್ನು ಮಾಡಬೇಕು. ಬೆಳಗ್ಗೆ ಸ್ನಾನ ಮಾಡಿ ಮತ್ತೊಮ್ಮೆ ಶಿವ ಪೂಜೆ ಮಾಡಬೇಕು. ಉಪವಾಸವನ್ನು ಬಿಡುವಾಗ ಬ್ರಾಹ್ಮಣಭೋಜನ ನೀಡಬೇಕು. ಆಶೀರ್ವಾದ ಪಡೆದುಕೊಂಡು ವ್ರತದ ಸಮಾಪ್ತಿ ಮಾಡಬೇಕು. 12, 14 ಅಥವಾ 24 ವರ್ಷ ಈ ವ್ರತವನ್ನು ಆಚರಿಸಿದ ನಂತರ ವ್ರತದ ಪರಿಹಾರವನ್ನು ಮಾಡಬೇಕು. ಮಹಾಶಿವರಾತ್ರಿಯ ದಿನ ಶಿವತತ್ತ್ವವು ಎಂದಿಗಿಂತ 1000 ಪಟ್ಟು ಹೆಚ್ಚು ಕಾರ್ಯನಿರತವಾಗಿರುತ್ತದೆ. ಶಿವತತ್ತ್ವದ ಲಾಭವು ಹೆಚ್ಚು ಪ್ರಮಾಣದಲ್ಲಿ ಸಿಗಲು ಮಹಾಶಿವರಾತ್ರಿಯ ದಿನ ಭಾವಪೂರ್ಣವಾಗಿ । ಓಂ ನಮಃ ಶಿವಾಯ । ನಾಮವನ್ನು ಆದಷ್ಟು ಹೆಚ್ಚು ಜಪಿಸಿ. ಈ ದಿನ ನಾಮಜಪವನ್ನು ಮಾಡುವ ಜೀವಕ್ಕೆ ಶಿವನ ಸೂಕ್ಷ್ಮ ಶಕ್ತಿ ಸಿಗುತ್ತದೆ.

**ಮಹಾಶಿವರಾತ್ರಿ ದಿನ ಇವನ್ನು ತಪ್ಪದೇ ಮಾಡಿ !**

- ದಿನವಿಡೀ ಶಿವನ ನಾಮಜಪ ಮಾಡಿ
- ಸಾಧ್ಯವಾದರೆ ಶಿವಲಿಂಗಕ್ಕೆ ಅಭಿಷೇಕವನ್ನು ಮಾಡಿ
- ಶಿವನಿಗೆ ಬಿಳಿ ಅಕ್ಷತೆ, ಬಿಳಿ ಹೂವು, ಬಿಲ್ವಪತ್ರೆ ಅರ್ಪಿಸಿ ಪೂಜೆ ಮಾಡಿ
- ಶಿವನ ದೇವಸ್ಥಾನಕ್ಕೆ ಹೋಗಿ ದರ್ಶನ ಪಡೆಯಿರಿ

**ಮಹಾಶಿವರಾತ್ರಿ ಮಹತ್ವ ಏನು?**



## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ, ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ.

**ವೃಷಭ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾರುತ್ತದೆ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು.

**ಮಿಥುನ** ನಿಮ್ಮ ಆರೋಗ್ಯ ಸುಧಾರಿಸವುದನ್ನು ಪ್ರಾರಂಭಿಸಲು ಅತ್ಯುತ್ತಮ ದಿನ. ಆರ್ಥಿಕ ಜೇವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು.

**ಕರ್ಕಾಟಕ** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ-ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ ಮತ್ತು ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ.

**ಸಿಂಹ** ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸಲು ನಿರಾಕರಿಸಿ. ಇದು ಅನಾರೋಗ್ಯದ ವಿರುದ್ಧ ಪ್ರಬಲ ಚುಚ್ಚುಮದ್ದು. ನಿಮ್ಮ ಸರಿಯಾದ ಮನೋಭಾವ ತಪ್ಪು ಮನೋಭಾವವನ್ನು ಸೋಲಿಸುತ್ತದೆ.

**ಕನ್ಯಾ** ಯಾರಾದರೂ ನಿಮ್ಮನ್ನು ಬಲಿಪಶುವನ್ನಾಗಿ ಮಾಡಲು ಪ್ರಯತ್ನಿಸಬಹುದಾದ್ದರಿಂದ ಎಚ್ಚರಿಕೆಯಿಂದಿರಿ. ಒತ್ತಡ ಹೆಚ್ಚಾಗಬಹುದು. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ.

**ತುಲಾ** ನೀವು ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ.

**ವೃಶ್ಚಿಕ** ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ.

**ಧನಸ್ಸು** ನಿಮ್ಮ ಆರೋಗ್ಯ ಸುಧಾರಿಸವುದನ್ನು ಪ್ರಾರಂಭಿಸಲು ಅತ್ಯುತ್ತಮ ದಿನ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ.

**ಮಕರ** ಅಸಾಧ್ಯವಾದ ಅನಗತ್ಯ ಚಿಂತನೆಯಲ್ಲಿ ನಿಮ್ಮ ಶಕ್ತಿ ವ್ಯರ್ಥ ಮಾಡುವ ಬದಲು ಅದನ್ನು ಸರಿಯಾದ ದಿಕ್ಕಿನಲ್ಲಿ ಬಳಸಿ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ.

**ಕುಂಭ** ನಿಮ್ಮ ಆರೋಗ್ಯ ಸುಧಾರಿಸವುದನ್ನು ಪ್ರಾರಂಭಿಸಲು ಅತ್ಯುತ್ತಮ ದಿನ. ಗಡಿಬಿಡಯ ನಿರ್ಧಾರಗಳನ್ನು ಕೈಗೊಳ್ಳಬೇಡಿ – ವಿಶೇಷವಾಗಿ ಪ್ರಮುಖ ಹಣಕಾಸಿನ ವ್ಯವಹಾರಗಳ ಬಗ್ಗೆ ಮಾತನಾಡುವಾಗ.

**ಮೀನ** ತೊಂದರೆಗಳ ಬಗ್ಗೆ ಚಿಂತಿಸುವ ಮತ್ತು ಅವುಗಳನ್ನು ದೊಡ್ಡದಾಗಿಸುವ ನಿಮ್ಮ ಸ್ವಭಾವ ನಿಮ್ಮ ನೈತಿಕತೆಯನ್ನು ದುರ್ಬಲಗೊಳಿಸಬಹುದು. ಇಂದು ನೀವು ಆಲ್ಕೊಹಾಲ್ಯುಕ್ತ ಮದ್ಯವನ್ನು ಸೇವಿಸಬಾರದು.

# ಬೇಸಿಗೆಯಲ್ಲಿ ಕುಡಿಯುವ ನೀರು ಸಮಸ್ಯೆಗೆ ಶಾಶ್ವತ ಪರಿಹಾರ: ಸಚಿವ

## ಎಲ್ಲಾ ಗ್ರಾಮೀಣ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿಕರ ಅರೋಗ್ಯ ಕಾಪಾಡುವ ನಿಟ್ಟಿನಲ್ಲಿ ಮುನ್ನೆಚ್ಚರಿಕೆ ಕ್ರಮ

• ಉದಯವಾಹಿನಿ, ಕಲಬುರಗಿ


ಉದಯವಾಹಿನಿ ಚಿತ್ರ

**ಕ್ರಿಯಾ ಯೋಜನೆ ರೂಪಿಸಿ**

ಪ್ರತಿ ವರ್ಷ ಬೇಸಿಗೆಯಲ್ಲಿ ಜಿಲ್ಲೆಯಾದ್ಯಂತ ನಗರ-ಪಟ್ಟಣ ಹಾಗೂ ಗ್ರಾಮೀಣ ಭಾಗದಲ್ಲಿ ಕಂಡುಬರುವ ಸಂಭಾವ್ಯ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ದೊರಕಿಸಲು ಚಿಂತನೆ ನಡೆಸಲಾಗುತ್ತಿದ್ದು, ಕೂಡಲೆ ತಾಲ್ಲೂಕಾವಾರು ಸಭೆ ನಡೆಸಿ ಸಮಗ್ರ ಕ್ರಿಯಾ ಯೋಜನೆ ರೂಪಿಸಿ ಸಲ್ಲಿಸುವಂತೆ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ.-ಬಿ.ಟಿ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅಧಿಕಾರಿಗಳಿಗೆ ಸೂಚಿಸಿದರು.

ಇಂದು ಇಲ್ಲಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮುಂಬರುವ ಬೇಸಿಗೆಗೆ ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವು ಪೂರೈಕೆ ಸಂಬಂಧ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಹಿಂದಿನ 5 ವರ್ಷಗಳ ಸಮಸ್ಯಾತ್ಮಕ ಪ್ರದೇಶಗಳನ್ನು ಗಮನದಲ್ಲಿಟ್ಟುಕೊಂಡು ಯೋಜನೆ ರೂಪಿಸಿ ಸಲ್ಲಿಸಿದಲ್ಲಿ ಕಂದಾಯ, ಕೃಷಿ ರೇಷ್ಮೆ, ತೋಟಗಾರಿಕೆ, ಪಶು ಸಂಗೋಪನಾ ಸಚಿವರೊಂದಿಗೆ ಚರ್ಚಿಸಿ ಪರಿಹಾರ ಕಲ್ಪಿಸುವುದರ ಜೊತೆಗೆ ಇದಕ್ಕೆ ಬೇಕಾದ ಹಣ ಸಹ ಹೊಂದಿಸಲಾಗುವುದು ಎಂದರು.

ಕಳೆದ ವರ್ಷ ನೀರು ಪೂರೈಕೆ ಮಾಡಿದ ಖಾಸಗಿ ಬೋರವೆಲ್, ಟ್ಯಾಂಕರ್‌ಗಳಿಗೆ ಬಾಕಿ ಉಳಿದಿದೆ ಎಂಬ ಮಾಹಿತಿ ಇದ್ದು, ಕೂಡಲೆ ಸದರಿ ಬಿಲ್ ಕ್ಲಿಯರ್ ಮಾಡಬೇಕು ಎಂದು ಡಿ.ಸಿ, ಸಿ.ಇ.ಓ ಗೆ ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಕಲಬುರಗಿ ನಗರದಲ್ಲಿನ ಕುಡಿಯುವ ನೀರಿನ ಸಮಸ್ಯೆ ಕುರಿತು ಪಾಲಿಕೆ ಆಯುಕ್ತ ಶಿಂಧೇ ಅವಿನಾಶ ಸಜ್ಜನ್ ಅವರು ಮಾತನಾಡಿ, 15ನೇ ಹಣ ಕಾಸು ಯೋಜನೆಯಡಿ ಬೋರವೆಲ್ ಕೊರೆಯಲು ದಕ್ಷಿಣ ಕ್ಷೇತ್ರಕ್ಕೆ 96 ಲಕ್ಷ ರೂ., ಉತ್ತರ ಕ್ಷೇತ್ರಕ್ಕೆ 79 ಲಕ್ಷ ರೂ., ನಗರಕ್ಕೆ 1 ಕೋಟಿ ರೂ. ಸೇರಿ ಒಟ್ಟಾರೆ 2.75 ಕೋಟಿ ರೂ. ಮೀಸಲಿರಿಸಿದೆ. ಪ್ರತಿ ವಾ ರ್ಡ್‌ಗೆ ಒಂದು ಟ್ಯಾಂಕರ್ ಮೀಸಲಿರುವಂತೆ ಎಲ್ & ಟಿ ಕಂಪನಿಗೆ ಸೂಚಿಸಿದೆ ಎಂದರು.

> ಪ್ರತಿ ಬೇಸಿಗೆಯಲ್ಲಿ ಹೊಸದಾಗಿ ಬೋರವೆಲ್ ಕೊರೆಯುವುದು ಬೇಡ. ಬದಲು ಇರುವ ಬೋರವೆಲ್‌ಗಳಿಗೆ ಫ್ಲಶ್ಶಿಂಗ್ ಮಾಡಬೇಕು, ಮೋಟಾರ್ ಕೆಟ್ಟಿದರೆ ಅದನ್ನು ಬದಲಾಯಿಸಬೇಕು. ಯುದ್ದ ಆರಂಭವಾದಾಗ ಶಸ್ತ್ರಾಭ್ಯಾಸ ಬೇಡ. ಈಗಿನಿಂದಲೆ ಸಮಸ್ಯಾತ್ಮಕ ಹಳ್ಳಿ, ನಗರ ಪಟ್ಟಣಗಳಲ್ಲಿ ಕುಡಿಯುವ ನೀರು ಸಮಸ್ಯೆಯನ್ನು ಸಮರ್ಥವಾಗಿ ಎದುರಿಸಲು ಸಿದ್ಧತೆ ಮಾಡಿಕೊಳ್ಳಬೇಕು
> -ಪ್ರಿಯಾಂಕ್ ಖರ್ಗೆ ಉಸ್ತುವಾರಿ ಸಚಿವ

ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ ಕುಡಿಯುವ ನೀರು ಪೂರೈಕೆ ವಿಚಾರದಲ್ಲಿ ಪಾಲಿಕೆ ಸದಸ್ಯರು ಮತ್ತು ಅಧಿಕಾ ರಿಗಳ ನಡುವೆ ಸಮನ್ವಯತೆ ಇಲ್ಲ. ಕೂಡಲೆ ಸಭೆ ಕರೆದು ಸಮನ್ವಯ ಸಾಧಿಸಬೇಕು ಎಂದರು.

ಸಭೆಯಲ್ಲಿ ಭಾಗವಹಿಸಿದ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ ಸಾವಳಗಿ ಗ್ರಾಮದಲ್ಲಿ ಕುಡಿ ಯುವ ನೀರಿನ ಸಮಸ್ಯೆ ಹೆಚ್ಚಿದ್ದು, ಪರಿಹಾರ ಕಲ್ಪಿಸಬೇಕು. ನಗರದಲ್ಲಿ ಕೊಳವೆ ಬಾವಿಗೆ 300 ಮೋಟಾರ್ ಅವಶ್ಯಕತೆ ಇದೆ ಎಂದು ಸಭೆಯ ಗಮನಕ್ಕೆ ತಂದರು.

**ಮುನ್ನೆಚ್ಚರಿಕೆ ಕ್ರಮ**

> ಹವಾಮಾನ ಇಲಾಖೆ ಪ್ರಕಾರ ಈ ಬಾರಿ ಹೆಚ್ಚಿನ ಬಿಸಿಲಿನ ಜೊತೆಗೆ ಬಿಸಿ ಗಾಳಿ ಇದೆ. ಹೀಗಾಗಿ ಎಲ್ಲಾ ಗ್ರಾಮೀಣ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿಕರ ಅರೋಗ್ಯ ಕಾಪಾಡುವ ನಿಟ್ಟಿನಲ್ಲಿ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಬಳಿ ಪಿ.ಡಿ.ಖಾತೆಯಲ್ಲಿ ಹಣ ಇದ್ದು, ಅದನ್ನು ಸಮರ್ಪಕವಾಗಿ ಬಳಸಿ ಎಂದು ಅಧಿಕಾರಿಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ ನೀಡಿದರು.

**ಮಾರ್ಚ್ 1 ರಿಂದ 15 ದಿನಕ್ಕೊಮ್ಮೆ ಪರಾಮರ್ಶಿಸಬೇಕು:** ಮಾರ್ಚ್ 1 ರಿಂದ ಮುಂದಿನ ಮೂರು ತಿಂಗಳ ಕಾಲ ಪ್ರತಿ 15 ದಿನಕ್ಕೊಮ್ಮೆ ತಹಶೀಲ್ದಾರರು ಮತ್ತು ತಾಲ್ಲೂಕು ಪಂಚಾಯತ್ ಇ.ಓ ಗಳು ತಾಲ್ಲೂಕು ಮಟ್ಟದಲ್ಲಿ ಕುಡಿಯುವ ನೀರು ಸಂಬಂಧ ಸಭೆ ನಡೆಸಿ ಪರಾಮರ್ಶಿಸಬೇಕು. ಟಾಸ್ಟ್ ಫೋರ್ಸ್ ಸಭೆ ಕರೆದು ಸಭೆ ನಡಾವಳಿ ಸಿದ್ದಪಡಿಸಿ ಅದರಂತೆ ಅನುದಾನ ಖರ್ಚು ಮಾಡಬೇಕು. ಎಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ತಲದೋರದಂತೆ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದರು. ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮತ್ತು ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಮಾತನಾಡಿ ಜಿಲ್ಲೆಯಾದ್ಯಂತ 194 ಪ್ರದೇಶಗಳನ್ನು ಸಮ್ಯಸ್ಯಾತ್ಮಕ ಪಟ್ಟಿ ಗುರುತಿಸಿ ಇಲ್ಲಿ ಸರ್ಕಾರಿ, ಖಾಸಗಿ, ಕೊಳವೆ ಹಾಗೂ ಟ್ಯಾಂಕರ್ ಮೂಲಕ ನೀರು ಪೂರೈಕೆಗೆ ನೀಲಿ ನಕ್ಷೆ ಸಿದ್ಧಪಡಿಸಿದೆ ಎಂದು ಸಚಿವರ ಗಮನಕ್ಕೆ ತಂದರು.

**ಟಾಸ್ಕ್ ಫೋರ್ಸ್ ಕಮಿಟಿ ಸಭೆ ಕರೆಯಿರಿ**

> ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ, ಕೂಡಲೆ ಶಾಸಕರ ಅದ್ಯಕ್ಷತೆಯಲ್ಲಿ ಟಾಸ್ಕ್ ಫೋರ್ಸ್ ಕಮಿಟಿ ಸಭೆ ಕರೆದು ಶಾಸಕರ ಅಭಿಪ್ರಾಯ ಪಡೆದು ಕ್ರಿಯಾ ಯೋಜನೆ ರೂಪಿಸಬೇಕು ಎಂದು ನಿರ್ದೇಶನ ನೀಡಿದರು.

## ಮೊಬೈಲ್ ದೀಪದ ಬೆಳಕಿನಲ್ಲಿ ವಿದ್ಯಾರ್ಥಿಗಳ ಓದು ಬರಹ
# ಮೂಲಭೂತ ಸೌಕರ್ಯ ವಂಚಿತ ದೊಡ್ಡಿಯ ನಿವಾಸಿಗಳು

• ಉದಯವಾಹಿನಿ, ವಡಗೇರಾ



ಉದಯವಾಹಿನಿ ಚಿತ್ರ

**ಅಧಿಕಾರಿಗಳು ಸೌಲಭ್ಯ ಒದಗಿಸುವಲ್ಲಿ ವಿಫಲ**

ತಾಲ್ಲೂಕಿನ ಕುರುಕುಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಾಗ್ಲಿ ಹುಲಿಯಪ್ಪ ಪೂಜಾರಿ ದೊಡ್ಡಿಗೆ ಮೂಲಭೂತ ಸೌಕರ್ಯ ಕಲ್ಪಿಸುವಂತೆ ರಾಜ್ಯ ರೈತ ಸಂಘ ಹಸಿರು ಸೇನೆ ಜಿಲ್ಲಾಧ್ಯಕ್ಷ ಮಲ್ಲನಗೌಡ ಹಗರಟಗಿ ಒತ್ತಾಯಿಸಿದ್ದಾರೆ.

ಸ್ಥಳಕ್ಕೆ ಭೇಟಿ ನೀಡಿ ಅಲ್ಲಿಯ ನಿವಾಸಿಗಳ ಕುಂದು ಕೊರತೆಗಳ ಆಲಿಸಿ ಅವರು ಮಾತನಾಡಿದರು. ಸುಮಾರು 40 ವರ್ಷಗಳಿಂದ 30ಕ್ಕೂ ಹೆಚ್ಚು ಕುಟುಂಬಗಳು ಇಲ್ಲಿ ವಾಸವಾಗಿದ್ದು ಇಲ್ಲಿಯವರೆಗೆ ಅವರಿಗೆ ಕನಿಷ್ಠ ಸೌಲಭ್ಯವು ಕೂಡ ಸಿಕ್ಕಿಲ್ಲ ಕುಡಿಯುವ ನೀರು ವಿದ್ಯುತ್ ಹಾಗೂ ರಸ್ತೆ ಇನ್ನಿತರ ಮೂಲಭೂತ ಸೌಕರ್ಯಗಳಿಂದ ಅವರು ವಂಚಿತರಾಗಿದ್ದಾರೆ ಅಧಿಕಾರಿಗಳು ಮಾತ್ರ ಅವರಿಗೆ ಕನಿಷ್ಠ ಸೌಲಭ್ಯ ಒದಗಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ.

ಸರಿಯಾದ ಬೆಳಕಿನ ವ್ಯವಸ್ಥೆ ಇಲ್ಲದ ಕಾರಣ ಅಲ್ಲಿನ ಶಾಲೆ ಕಲಿಯುವ ಚಿಕ್ಕ ಮಕ್ಕಳು ಮೊಬೈಲ್ ಬೆಳಕು ಹಾಗೂ ದೀಪದ ಬೆಳಕಿನಲ್ಲಿ ದಿನನಿತ್ಯ ವಿದ್ಯಾಭ್ಯಾಸ ಮಾಡುತ್ತಾರೆ. ನಮಗೆ ಕುಡಿಯುವ ನೀರಿನ ವ್ಯವಸ್ಥೆ ರಸ್ತೆ ವಿದ್ಯುತ್ ಇಲ್ಲ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದರು ಯಾವುದೇ ಪ್ರಯೋಜನವಾಗಿಲ್ಲ ಚುನಾವಣೆ ಸಮಯದಲ್ಲಿ ಎಲ್ಲಾ ಪಕ್ಷದವರು ಬಂದು ನಿಮ್ಮ ಸಮಸ್ಯೆಗಳನ್ನು ಬಗೆಹರಿಸುತ್ತೇವೆ ಎಂದು ಸುಳ್ಳು ಭರವಸೆ ನೀಡಿ ಹೋಗುತ್ತಾರೆ ಚುನಾವಣೆಯಲ್ಲಿ ಗೆದ್ದು ಬಂದ ನಂತರ ಯಾರೂ ಕೂಡ ನಮ್ಮ ಸಮಸ್ಯೆಗೆ ಸ್ಪಂದಿಸಿಲ್ಲ ಎಂದು ಅಲ್ಲಿನ ನಿವಾಸಿ ಹುಲಿಯಪ್ಪ .ಬೀರಲಿಂಗಪ್ಪ ತಮ್ಮ ಅಳಲನ್ನು ತೋಡಿಕೊಂಡಿದ್ದಾರೆ. ಇದೆಲ್ಲವೂ ನೋಡಿದರೆ ಅಲ್ಲಿನ ಜನ ನರಕಯಾತನೆಯನ್ನು ಅನುಭವಿಸುತ್ತಿರುವುದು ಕಂಡು ಬರುತ್ತದೆ ಕೂಡಲೇ ಸಂಬಂಧಿಸಿದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಅಲ್ಲಿನ ನಿವಾಸಿಗಳಿಗೆ ರಸ್ತೆ ಕುಡಿಯುವ ನೀರು ವಿದ್ಯುತ್ ಹಾಗೂ ಇನ್ನಿತರ ಮೂಲಭೂತ ಸೌಕರ್ಯಗಳು ಒದಗಿಸಿ ಕೊಡಬೇಕು ಒಂದು ವೇಳೆ ನಿರ್ಲಕ್ಷ ವಹಿಸಿದ್ದಲ್ಲಿ ರಾಜ್ಯ ರೈತ ಸಂಘ ಹಸಿರು ಸೇನೆ ವತಿಯಿಂದ ಉಗ್ರ ಹೋರಾಟ ಮಾಡುವುದಾಗಿ ಜಿಲ್ಲಾಧ್ಯಕ್ಷ ಮಲ್ಲನಗೌಡ ಹಗರಟಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಶರಣಪ್ಪ ಸಾಹುಕಾರ ತಡಬಿಡಿ, ಭೀಮರಾಯ ಬೆಳಗುಂದಿ , ಶರಣು ಖಾನಾಪುರ, ಹಾಗೂ ಇನ್ನಿತರರು ಎಚ್ಚರಿಸಿದ್ದಾರೆ.

## ಕೀಟಜನ್ಯ ರೋಗಗಳ ಬಗ್ಗೆ ತರಬೇತಿ ಕಾರ್ಯಗಾರ

• ಉದಯವಾಹಿನಿ, ಚಿತ್ರದುರ್ಗ


ಉದಯವಾಹಿನಿ ಚಿತ್ರ

**ಕೀಟಜನ್ಯ ರೋಗಗಳ ಬಗ್ಗೆ ತರಬೇತಿ**

ದಿನಾಂಕ:24.02.2024 ರಂದು ಎನ್.ವಿ.ಬಿಡಿ.ಸಿ.ಪಿವಿಭಾಗ ಆರೋಗ್ಯಸೌಧ ಬೆಂಗಳೂರು ಮತ್ತು ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿಗಳ ಕಛೇರಿ ಹಾಗೂ ಜಿಲ್ಲಾ ರೋಗವಾಹಕ ಆಶ್ರೀತರೋಗಗಳ ನಿಯಂತ್ರಣ ಕಛೇರಿ ಚಿತ್ರದುರ್ಗ ವತಿಯಿಂದ ಐ.ವಿ.ಎಂಐ.ಆರ್.ಎಸ್ ಕುರಿತು ಮಲೇರಿಯಾ ಹಾಗೂ ಇತರೆ ಕೀಟಜನ್ಯ ರೋಗಗಳ ಬಗ್ಗೆ ತರಬೇತಿ ಕಾರ್ಯಗರವನ್ನು ಮಾನ್ಯ ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿಗಳ ಡಾ. ರೇಣುಪ್ರಸಾದ್ . ಜಿ ಪಿ ಉದ್ಘಾಟಿಸಿ ಚಿತ್ರದುರ್ಗ, ತುಮಕೂರು, ದಾವಣಗೆರೆ, ಹಾವೇರಿ, ಬೆಳಗಾವಿ, ಉತ್ತರಕನ್ನಡ, ದಕ್ಷಿಣಕನ್ನಡ, ಶಿವಮೊಗ್ಗ, ಜಿಲ್ಲೆಗಳಿಂದ ಆಗಮಿಸಿರುವ ಎಲ್ಲಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳು ಕುರಿತು ಮಾತನಾಡಿ 2025ಕ್ಕೆ ಮಲೇರಿಯಾ ರೋಗವನ್ನು ನಿರ್ಮೂನೆ ಮಾಡಲು ಕ್ಷೇತ್ರ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಕಾರ್ಯ ನಿರ್ವಸಲು ಸಲಹೆ ನೀಡಿದರು.

ತರಬೇತಿಕಾರ್ಯಗಾರದಲ್ಲಿ ಸಹ ನಿರ್ದೇಶಕರು ಎನ್.ವಿ..ಬಿಡಿ .ಸಿ.ಪಿ ಡಾ. ಮಹಮದ್ ಶರೀಪ್ ರಾಜ್ಯ ಕೀಟ ಶಾಸ್ತರಜ್ಞರಾದ ಶ್ರೀಮತಿ ಭಾವನ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಾದ ಡಾ.ಕಾಶಿ. ಎನ್ ಜಿಲ್ಲಾ ಸಹಾಯಕ ಶಾಸ್ತ್ರಜ್ಞರಾದ ಶ್ರೀಮತಿ ನಂದಿನಿಕಡಿ , ಶ್ರೀಬಾರ್ಕಿ ಮತ್ತು ಶ್ರೀಕಾಂತ್ ಶ್ರೀಮತಿ ಜೋನ್ಸ್ಸ . ಚಿತ್ರದುರ್ಗ ಡಿ.ವಿ.ಬಿ.ಡಿ.ಸಿ.ಪಿ ಕಛೇರಿಯ ಎಲ್ಲಾ ಅಧಿಕಾರಿಗಳು ಕಾರ್ಯಗಾರದಲ್ಲಿ ಹಾಜರಿದ್ದರು.

## ಅಮರಗಣಂಗಳ ಐಕ್ಯ ಸ್ಥಳ ಪುಣ್ಯಕ್ಷೇತ್ರವಾಗಬೇಕು

• ಉದಯವಾಹಿನಿ, ಮುದ್ದೇಬಿಹಾಳ


ಉದಯವಾಹಿನಿ ಚಿತ್ರ


12ನೇ ಶತಮಾನದಲ್ಲಿ ಬಸವಣ್ಣನವರ ಅನುಯಾಯಿಗಳಾಗಿದ್ದ ಶರಣರು (ಅಮರಗಣಂಗಳು) ಐಕ್ಯರಾಗಿರುವ ಕೃಷ್ಣಾ ನದಿ ತೀರದ ಅಮರಗೋಳ ಗ್ರಾಮವನ್ನು ಪುಣ್ಯಕ್ಷೇತ್ರ ಮಾಡುವಂತೆ ಸರ್ಕಾರಕ್ಕೆ ಹಲವು ಬಾರಿ ಪತ್ರ ಬರೆದು ಒತ್ತಾಯಿಸಲಾಗಿದೆ. ಈ ಭಾಗದವರೆಲ್ಲರೂ ಈ ಬಗ್ಗೆ ಹಕ್ಕೊತ್ತಾಯ ಮಾಡಲು ಅಣಿಯಾಗಬೇಕು ಎಂದು ತಂಗಡಗಿಯ ಹಡಪದ ಅಪ್ಪಣ್ಣ ದೇವರ ಮಹಾಸಂಸ್ಥಾನದ ಪೀಠಾಧಿಪತಿ ಅನ್ನದಾನಭಾರತಿ ಅಪ್ಪಣ್ಣ ಸ್ವಾಮೀಜಿ ಕರೆ ನೀಡಿದರು. ಮುದ್ದೇಬಿಹಾಳ ತಾಲ್ಲೂಕು ಅಮರಗೋಳದ ಶ್ರೀ ನಾಗಲಿಂಗೇಶ್ವರ ದೇವಸ್ಥಾನದಲ್ಲಿ ಭಾನುವಾರ ಏರ್ಪಡಿಸಿದ್ದ ಭಾಮಿನಿ ಷಟ್ಪದಿ ಕವಿ ಮಲಕಣ್ಣ ಮಾಸ್ತರ ಅಮರಗೋಳ (ಮಲಿಕಸಾಬ ನದಾಫ) ಅವರ 8ನೇ ಸ್ಮರಣೋತ್ಸವ, ಕೃತಿ ಬಿಡುಗಡೆ, ಪ್ರಶಸ್ತಿ ಪ್ರದಾನ, ನಿವೃತ್ತರಿಗೆ, ಸಾಧಕರಿಗೆ ಸನ್ಮಾನ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಸಾಹಿತಿ, 5ನೇ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷ ಅಶೋಕ ಮಣಿ ಅವರು ಮಾತನಾಡಿ ಮಲಕಣ್ಣನವರ ಜೀವನ ಚರಿತ್ರೆ ಕುರಿತಾದ ಪುಸ್ತಕ ಬರೆಯುವ ಅಪೇಕ್ಷೆ ಮಾಡಿದ್ದು ಮುಂದಿನ ವರ್ಷ ಇದೇ ವೇದಿಕೆಯ 9ನೇ ಸ್ಮರಣೋತ್ಸವದಲ್ಲಿ ಅದನ್ನು ಬಿಡುಗಡೆಗೊಳಿಸುವೆ. ಸೌಹಾರ್ದತೆಯ ಪ್ರತೀಕವಾಗಿರುವ ಮಲಕಣ್ಣ ಮಾಸ್ತರ ಅವರು ಪೂಜನೀಯರು ಎಂದರು.

> ಅಮರಗೋಳ ಗ್ರಾಮವು ಬಸವಣ್ಣನವರ ಐಕ್ಯಸ್ಥಳ ಕೂಡಲಸಂಗಮ, ಬಸವಣ್ಣನವರ ಆಪ್ತ ಕಾರ್ಯದರ್ಶಿ ಹಡಪದ ಅಪ್ಪಣ್ಣ ಮತ್ತು ಬಸವಣ್ಣನ ಧರ್ಮಪತ್ನಿ ನೀಲಾಂಬಿಕೆಯ ಐಕ್ಯಸ್ಥಳ ತಂಗಡಗಿಯಿಂದ ಕೂಗಳತೆ ದೂರದಲ್ಲಿದೆ. ಎಲ್ಲರೂ ಹಕ್ಕೊತ್ತಾಯಕ್ಕೆ ಅಣಿಯಾದಲ್ಲಿ ನಾನೂ ಸೇರಿ ಈ ಭಾಗದ ಸ್ವಾಮೀಜಿಗಳು ನಿಮ್ಮ ಜೊತೆಗಿರುತ್ತೇವೆ. ಮಲಕಣ್ಣನವರ ಕುರಿತು ಹೊರಬರಲಿರುವ ಸಾಹಿತ್ಯ ಅರ್ಥಪೂರ್ಣ ವಾಗಿರಲಿ -ಅಪ್ಪಣ್ಣ ಸ್ವಾಮೀಜಿ

## ನುಡಿದಂತೆ ನಡೆದ ಶರಣ ಅಂಬಿಗರ ಚೌಡಯ್ಯ: ಡಾ.ನಾಗಾಬಾಯಿ

• ಉದಯವಾಹಿನಿ ವಾಡಿ


ಉದಯವಾಹಿನಿ ಚಿತ್ರ

ನಿಜಶರಣ ಅಂಬಿಗರ ಚೌಡಯ್ಯ ನುಡಿದಂತೆ ನಡೆದ ಕ್ರಾಂತಿಕಾರಿ ಶರಣರಾಗಿದ್ದರು. ಸಮಾಜದಲ್ಲಿನ ಅನ್ಯಾಯ, ಅಸತ್ಯ, ಶೋಷಣೆಗಳ ವಿರುದ್ಧ ಬಂಡಾಯದ ವಚನಗಳನ್ನು ನೀಡುವ ಮೂಲಕ ಸಮಾಜವನ್ನು ತಿದ್ದುವ ಕರ್ತವ್ಯ ಮಾಡಿದ್ದಾರೆ ಎಂದು ಹಿರಿಯ ಸಾಹಿತಿ ಡಾ.ನಾಗಾಬಾಯಿ ಬುಳ್ಳಾ ಹೇಳಿದರು.

ಪಟ್ಟಣದ ಸಾಹೇಬ್ ಫಂಕ್ಷನ್ ಹಾಲ್‌ನಲ್ಲಿ ಕೋಲಿ ಸಮಾಜದ ವತಿಯಿಂದ ಆಯೋಜಿಸಿದ್ದ ನಿಜಶರಣ ಅಂಬಿಗರ ಚೌಡಯ್ಯನವರ 905ನೇ ವರ್ಷದ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. 12ನೇ ಶತಮಾನದಲ್ಲಿ ಬಾಳಿದ ಶರಣರಲ್ಲಿ ಅಂಬಿಗರ ಚೌಡಯ್ಯನವರು ತಮ್ಮ ನೇರ ನಿಷ್ಠುರ ವಚನಗಳಿಂದ ಸಮಾಜದಲ್ಲಿರುವ ಮೌಢ್ಯ, ಕಂದಾಚಾರ, ಮೂಢ ನಂಬಿಕೆ, ಆಡಂಬರದ ಬದುಕು, ಢಾಂಬಿಕತನವನ್ನು ಖಂಡತುಂಡವಾಗಿ ಖಂಡಿಸಿದ್ದರು ಎಂದರು. ಆಂದೋಲಾದ ಪೂಜ್ಯ ವಾಸುದೇವ ಮಹಾಯೋಗಿ ಮಾತನಾಡಿದರು. ತೊನಸನಹಳ್ಳಿ ಅಲ್ಲಮಪ್ರಭು ಸಂಸ್ಥಾನ ಮಠದ ಡಾ.ಮಲ್ಲಣ್ಣಪ್ಪ ಸ್ವಾಮಿಗಳು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಸಮಾಜದ ಮುಖಂಡರಾದ ಉಮೇಶ ಮುದ್ನಾಳ, ಬಿಜೆಪಿ ಶಕ್ತಿ ಕೇಂದ್ರದ ಅಧ್ಯಕ್ಷ ವೀರಣ್ಣ ಯಾರಿ ಸಮಾರಂಭ ಉದ್ದೇಶಿಸಿ ಮಾತನಾಡಿದರು.

ಹಲಕರ್ಟಿ ಕಟ್ಟಿಮನಿ ಹಿರೇಮಠದ ಮುನೀಂದ್ರ ಶಿವಾಚಾರ್ಯ, ಶಹಾಪುರ ಮಹಲರೋಜಾ ಮಲ್ಲಿಕಾರ್ಜುನ ಮುತ್ಯಾ, ಡಿವೈಎಸ್ಪಿ ಶಂಕರಗೌಡ ಪಾಟೀಲ, ಸಿಪಿಐ ಚಂದ್ರಶೇಖರ ತಿಗಡಿ, ಕೋಲಿ ಸಮಾಜದ ಅಧ್ಯಕ್ಷ ಮಲ್ಲಿಕಾರ್ಜುನ ತಳವಾರ, ಶಿವಾನಂದ ಹೊನಗುಂಟಿ, ಭಾಗಣ್ಣ ಹೊನಗುಂಟಿ, ಶಿವುಕುಮಾರ ಸುಣಗಾರ, ಮಲ್ಲಿಕಾರ್ಜುನ ದಂಡಗುಂಡ, ಶರಣಗೌಡ ಮಾಲಿಪಾಟೀಲ, ದೇವಿಂದ್ರ ಪಂಚಾಳ, ಸಿದ್ದಣ್ಣ ಕಲಶೆಟ್ಟಿ, ಶಿವಪ್ಪ ಮುಂಡರ್ಗಿ, ಮಲ್ಲು ಅಂಕಲಗಿ, ಸಂದೀಪ್ ಕಟ್ಟಿ, ಬಸವರಾಜ ನಾಟೇಕಾರ. ರಾಜು ಕೋಲಿ, ರಾಜು ಆಂದೋಲ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು. ಸಾಯಬಣ್ಣ ಗುಡುಬಾ ನಿರೂಪಿಸಿ, ಶಿಕ್ಷಕ ಗುಂಡಪ್ಪ ಭಂಕೂರ ಸ್ವಾಗತಿಸಿ, ವಂದಿಸಿದರು.

> ರಾಜ್ಯದಲ್ಲಿ ಸುಮಾರು 67 ಲಕ್ಷ ಜನಸಂಖ್ಯೆ ಹೊಂದಿರುವ ಕೋಲಿ ಸಮಾಜ ಸಂಘಟಿತರಾಗಬೇಕು. ಸಂಘಟಿತರಾದಾಗ ಮಾತ್ರ ರಾಜಕೀಯ, ಸಾಮಾಜಿಕ, ಹಾಗೂ ಶೈಕ್ಷಣಿಕ ಸೌಲಭ್ಯ ದೊರೆಯುತ್ತವೆ. ಬರುವ ದಿನಗಳಲ್ಲಿ ಬೆಂಗಳೂರು ವಿಧಾನಸೌಧ ಹಾಗೂ ಕಲಬುರಗಿ ಪಾಲಿಕೆಯ ಆವರಣದಲ್ಲಿ ಅಂಬಿಗರ ಚೌಡಯ್ಯನವರ ಪ್ರತಿಮೆ ಸ್ಥಾಪಿಸಲು ಸರ್ಕಾರಕ್ಕೆ ಮನವಿ ಮಾಡಲಾಗುತ್ತದೆ
> -ತಿಪ್ಪಣ್ಣಪ್ಪ ಕಮಕನೂರ, ವಿಧಾನ ಪರಿಷತ್ ಸದಸ್ಯ

## ಕ್ಲಸ್ಟರ್ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬ


ಉದಯವಾಹಿನಿ ಚಿತ್ರ

• ಉದಯವಾಹಿನಿ ಗದಗ

ಸೊರಟೂರ ಗ್ರಾಮದ ಸರಕಾರಿ ಡಿ ಪಿ ಇ ಪಿ ಶಾಲೆಯಲ್ಲಿ ಕ್ಲಸ್ಟರ್ ಮಟ್ಟದ ಎಫ್ ಎಲ್ ಎನ್ ಕಲಿಕಾ ಹಬ್ಬ ಸಂಭ್ರಮದಿಂದ ನೆರವೇರಿತು.

ಈ ಹಬ್ಬದಲ್ಲಿ ಒಂದನೆ ತರಗತಿಯ ಮಕ್ಕಳಿಂದ ಐದನೆ ತರಗತಿಯ ವರೆಗಿನ ವಿಭಾಗದಲ್ಲಿ ಶ್ರೇಯಾ ಮಾರುತಿ ಮಲ್ಲಾಡದ ಡಿ ಪಿ ಇ ಪಿ ಶಾಲೆ ಈ ವಿದ್ಯಾರ್ಥಿನಿ ಕಥೆ ಹೇಳುವ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ. ಈ ಕಾರ್ಯಕ್ರಮದಲ್ಲಿ ಶಿಕ್ಷಣಾಧಿಕಾರಿಗಳು ಶಿಕ್ಷಕರು ಶಾಲಾ ಅಭಿವೃದ್ಧಿ ಸಮಿತಿ ಸದಸ್ಯರು ಅಧ್ಯಕ್ಷರು ಗ್ರಾಮ ಪಂಚಾಯಿತಿ ಅಧ್ಯಕ್ಷರು ಸದಸ್ಯರು ಗ್ರಾಮದ ಶಿಕ್ಷಣ ಪ್ರೇಮಿಗಳು ಭಾಗಿಯಾಗಿದ್ದರು.

## ಕೈಕಾಲು ತೊಳೆಯಲು ಕೆರೆಗೆ ಇಳಿದಿದ್ದ ಇಬ್ಬರು ಬಾಲಕರು ಮುಳುಗಿ ಸಾವು

• ಉದಯವಾಹಿನಿ ಹಾವೇರಿ

ಬಹಿರ್ದೆಸೆ ಮುಗಿಸಿ ಕೈಕಾಲು ತೊಳೆಯಲು ಕೆರೆಗೆ ಹೋಗಿದ್ದ ಇಬ್ಬರು ಬಾಲಕರು ಕೆರೆಯಲ್ಲಿ ಮುಳುಗಿ ಮೃತಪಟ್ಟಿರುವ ಘಟನೆ ಹಾನಗಲ್ ತಾಲ್ಲೂಕಿನ ಕೊಪ್ಪರಸಿಕೊಪ್ಪ ಗ್ರಾಮದಲ್ಲಿ ನಡೆದಿದೆ.

ಕೊಪ್ಪರಸಿಕೊಪ್ಪದ ಜಗದೀಶ್ ನಾಗೋಜಿ ಎಂಬವರ ಪುತ್ರ ನಿಖಿಲ್ ನಾಗೋಜಿ (11) ಮತ್ತು ಪ್ರಕಾಶ್ ಚೋಳಪ್ಪನವರ್ ಎಂಬವರ ಪುತ್ರ ಧನುಷ್ ಚೊಳಪ್ಪನವರ್ (13) ಮೃತ ಬಾಲಕರು ಎಂದು ಗುರುತಿಸಲಾಗಿದೆ. ಬಾಲಕರು ಗ್ರಾಮದ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡು ಬಳಿಕ ಬಹಿಲು ಬಹಿರ್ದೆಸೆ ಮುಗಿಸಿ ಕೈಕಾಲು ತೊಳೆಯಲು ದೊಡ್ಡಕೆರೆಗೆ ಹೋಗಿದ್ದರು. ಈ ಸಂದರ್ಭದಲ್ಲಿ ಬಾಲಕರು ಕಾಲುಜಾರಿ ಕೆರೆಗೆ ಬಿದ್ದಿದ್ದು, ಈಜು ಬಾರದ ಕಾರಣ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ.

## ಕಾರು ಡಿಕ್ಕಿ: ವ್ಯಕ್ತಿ ಸ್ಥಳದಲ್ಲೇ ಸಾವು

• ಉದಯವಾಹಿನಿ ಉಡುಪಿ

ಉಡುಪಿ-ಪರ್ಕಳ ಪೇಟೆಯ ಬಡಗುಬೆಟ್ಟು ತಿರುವಿನಲ್ಲಿ ರಸ್ತೆ ದಾಟುತ್ತಿದ್ದ ವ್ಯಕ್ತಿಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ವ್ಯಕ್ತಿ ಸ್ಥಳದಲ್ಲಿಯೇ ಸಾವನ್ನಪ್ಪಿದ ಘಟನೆ ಇಂದು ಸಂಭವಿಸಿದೆ. ಮೃತರನ್ನು ಶೇಡಿಗುಡ್ಡೆ ನಿವಾಸಿ ರಮೇಶ್ ನಾಯಕ್ (55) ಎಂದು ಗುರುತಿಸಲಾಗಿದೆ.

ರಮೇಶ್ ನಾಯಕ್ ಅವರು ಕಾರು ಇಳಿದು ಬೀಡ ತೆಗೆದುಕೊಳ್ಳಲು ಪಕ್ಕದ ರಸ್ತೆಯಲ್ಲಿರುವ ಅಂಗಡಿಗೆ ರಸ್ತೆ ದಾಟಲು ಪ್ರಯತ್ನಿಸುತ್ತಿದ್ದಾಗ ವೇಗವಾಗಿ ಬಂದ ಕಾರೊಂದು ಅವರಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ರಭಸಕ್ಕೆ ರಮೇಶ್ ನಾಯಕ್ ಅವರನ್ನು ಕಾರು ಸುಮಾರು ದೂರದವರೆಗೆ ಎಳೆದುಕೊಂಡು ಹೋಗಿದೆ.

ಈ ವೇಳೆ ಅವರ ತಲೆಗೆ ಗಂಭೀರವಾದ ಗಾಯವಾಗಿದ್ದು, ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಈ ಸ್ಥಳವು ಅಪಾಯಕಾರಿ ತಾಣವಾಗಿ ಮಾರ್ಪಟ್ಟಿದ್ದು, ಇಲ್ಲಿ ಪದೇ ಪದೇ ಅಪಘಾತ ಪ್ರಕರಣಗಳು ವರದಿಯಾಗುತ್ತಿವೆ.

# ಕಾರಾಗೃಹಕ್ಕೆ ಹೈ.ಕ.ವಿ ಹೋರಾಟಗಾರ ಶಾಮಲಾಲ ಅವರ ಹೆಸರಿಡಿ

## • ಪ್ರಾಣ ಬಲಿದಾನ ಮಾಡಿದ ಕಾರಣಕ್ಕಾಗಿ ಅವರು ಇದ್ದ ಕೊಠಡಿಯನ್ನು ಶಾಮಲಾಲ್ ಮ್ಯುಸಿಯಂ ಮಾಡಬೇಕು

• ಉದಯವಾಹಿನಿ ಬೀದರ್

**ನಿಜಾಮರ ಜೊತೆ ಹೋರಾಡಿ ಹುತಾತ್ಮ**

ಬೀದರ್ ಜಿಲ್ಲಾ ಕಾರಾಗೃಹಕ್ಕೆ ಹೈದ್ರಾಬಾದ್ ಕರ್ನಾಟಕ ವಿಮೋಚನಾ ಸಂದರ್ಭದಲ್ಲಿ ನಿಜಾಮರ ಜೊತೆ ಹೋರಾಡಿ ಹುತಾತ್ಮರಾದ ಶಾಮಲಾಲ ಅವರ ಹೆಸರಿಡಬೇಕೆಂದು ಸ್ಥಳಿಯ ಬಿಜೆಪಿ ಮುಖಂಡರು ಹಾಗೂ ವಿಶ್ವ ಹಿಂದು ಪರಿಷತ್‌ನ ಪ್ರಮುಖರಾದ ಈಶ್ವರಸಿಂಗ್ ಠಾಕೂರ್ ಹೇಳಿದರು.

ನಗರದ ಬೀದರ್-ಉದಗಿರ ರಸ್ತೆಯಲ್ಲಿರುವ ಜಿಲ್ಲಾ ಕಾರಾಗೃಹದಲ್ಲಿ ಸ್ವತಂತ್ರ ಹೋರಾಟಗಾರರು ಹಾಗೂ ಹೈದ್ರಾಬಾದ್ ಕರ್ನಾಟಕ ವಿಮೋಚನಾ ಹೋರಾಟದಲ್ಲಿ ಧುಮುಕಿ ಈ ಭಾಗದ ಸ್ವತಂತ್ರ್ಯಕ್ಕಾಗಿ ತಮ್ಮ ಪ್ರಾಣ ಬಲಿದಾನ ಮಾಡಿದ ಶಾಮಲಾಲ ಹಾಗೂ ಬನ್ಸಿಲಾಲ್ ಅವರ ಹುತಾತ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಅವರು ಮಾತನಾಡಿದರು.

ಹುಮನಾಬಾದ್‌ನಲ್ಲಿ ಶಿವಚಂದ್ರ ಆರ್ಯ, ಬಸವಕಲ್ಯಾಣದಲ್ಲಿ ಧಮಧಪ್ರಕಾಶ, ಗುಂಜಾಟಿಯಲ್ಲಿ ದೇವಿಪ್ರಕಾಶ ಸೇರಿದಂತೆ ಇತರರೊಡಗೂಡಿ ಈ ಫೌಂಡೇಶನ್ ಹುಟ್ಟುಹಾಕಿ ಹೋರಾಟಕ್ಕಿಳಿದಿದ್ದರು. ವಿಜಯದಶಮಿ ದಿನದಂದು ಮಹಾರಾಷ್ಟ್ರದ ಉದಗಿರದಲ್ಲಿ ಭಾಲಿ, ಭರ್ಚಿ ಹಿಡಿದು ಮೆರವಣಿಗೆ ಮೂಲಕ ನಿಜಾಮನ ವಿರೂದ್ಧ ಯುದ್ದದ ರಣಕಹಳೆ ಊದಿದರು. ದೇಶದ್ರೋಹದ ಆರೋಪದ ಮೇಲೆ ಅವರನ್ನು ಬಂಧಿಸಿ ಬೀದರ್ ಕಾರಾಗೃಹದಲ್ಲಿರಿಸಿದರು. ಅವರಿಗೆ ಕೊಡುವ ಊಟದಲ್ಲಿ ಸಿಮೆಂಟ್ ಬೆರೆಸಿ ಕೊಡುತ್ತಿದ್ದರು. ಅನ್ನದಲ್ಲಿ ಗಾಜು ಸೇರಿಸಿ ಬಡಿಸುತ್ತಿದ್ದರು. ಹೀಗೆ ನಿತ್ಯ ನಿರಂತರ ಅವರಿಗೆ ಚಿತ್ರೆ, ಹಿಂಸೆ ಕೊಟ್ಟು ಸಾವಿನಂಚಿಗೆ ತಂದು ನಿಲ್ಲಿಸಿದರು.

ಅವರಿಗೆ ಭೇಟಿ ಮಾಡಲು ಸಹ ಯಾರನ್ನು ಜೈಲಿನೊಳಕ್ಕೆ ಬಿಡುತ್ತಿರಲಿಲ್ಲ. ಹೀಗೆ 1939ರ ಫೆಬ್ರವರಿ 23ರಂದು ಬೀದರ್ ಜೈಲಿನಲ್ಲಿಯೇ ವೀರಮರಣವನ್ನಪ್ಪಿದರು. ಅವರ ಶವವನ್ನು ಒಂದು ಲಾರಿಯಲ್ಲಿ ಸಾಗಿಸಿ ಸೋಲಾಪುರಕ್ಕೆ ಕಳುಹಿಸಿ ಕೊಡಲಾಯಿತು. ಈ ಸಂದರ್ಭದಲ್ಲಿ ಶಾಮಲಾಲ್ ಅವರಿಗೆ ಇರಿಸಲಾಗಿದ್ದ ಕಾರಾಗೃಹದ ಕೊಣೆಯಲ್ಲಿ ಅವರ ಭಾವಚಿತ್ರ ಅಳವಡಿಸಲಾಯಿತು.

ನಂತರ ವೇದಿಕೆ ಕಾರ್ಯಕ್ರಮ ಮುಂದುವರೆಯಿತು. ಶಾಮಲಾಲ ವಂಶಸ್ತರಾದ ಸುಬೋಧ್ ಲಕ್ಷ್ಮಣರಾವ ತಮ್ಮ ದೊಡ್ಡಪ್ಪ ಶಾಮಲಾಲ್ ಅವರನ್ನು ನೆನೆದು ಭಾವುಕರಾದರು. ಸುಭಾಷ ಅಷ್ಟಿಕರ್ ಮಾತನಾಡಿದರು. ಜೈಲಾಧಿಕಾರಿ ಸೋಮಶೇಖರ ಅಂಗಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

> ಸೋಲಾಪುರದಲ್ಲಿ ಲಕ್ಷಾಂತರ ಜನರ ಮಧ್ಯ ಅವರ ಅಂತ್ಯ ಸಂಸ್ಕಾರ ಜರುಗಿತ್ತು. ಈ ಭಾಗದ ಸ್ವತಂತ್ರಕ್ಕಾಗಿ ಹೋರಾಡಿ ಬೀದರ್ ಕಾರಾಗೃಹದಲ್ಲಿ ತಮ್ಮ ಪ್ರಾಣ ಬಲಿದಾನ ಮಾಡಿದ ಕಾರಣಕ್ಕಾಗಿ ಅವರು ಇದ್ದ ಕೊಠಡಿಯನ್ನು ಶಾಮಲಾಲ್ ಮ್ಯುಜಿಯಮ್ ಮಾಡಬೇಕೆಂದು ಠಾಕೂರ್ ಆಗ್ರಹಿಸಿದರು.

ಉದಯವಾಹಿನಿ ಚಿತ್ರ


> ಶಾಮಲಾಲ್ ದಕ್ಷಿಣ ಭಾರತದ ಭಗತಸಿಂಗ್ ಎಂದರೂ ತಪ್ಪಾಗಲಾರದು. ಶಾಮಲಾಲ್ ಹಾಗೂ ಅವರ ಸಹೋದರ ಬನ್ಸಿಲಾಲ್ ಅವರು ನಿಜಾಮನ ವಿರೂದ್ಧ ಹೋರಾಡಿ ಈ ಭಾಗಕ್ಕೆ ಸ್ವತಂತ್ರ ತಂದು ಕೊಡುವಲ್ಲಿ ಮುಖ್ಯ ಪಾತ್ರಧಾರಿಗಳಾಗಿದ್ದರು. ಅವರ ತ್ಯಾಗ ಹಾಗೂ ಬಲಿದಾನ ದೇಶದ ಎಲ್ಲಾ ಮೂಲೆ ಮೂಲೆಗಳಲ್ಲಿ ಆಚರಿಸುತ್ತಾರೆ. ಆದರೆ ದೀಪದ ಬುಡದಲ್ಲಿಯೇ ಕತ್ತಲು ಇರುತ್ತದೆ ಎಂಬ ಹಾಗೆ ನಮ್ಮ ಭಾಗದಲ್ಲಿ ಅವರ ಚರಿತ್ರೆ ಗೊತ್ತಿಲ್ಲ. ಹಾಗಾಗಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ಅವರ ಸ್ಮರಣೆಗಾಗಿ ದತ್ತಿ ನಿಧಿ ಸ್ಥಾಪಿಸಬೇಕು, ರಾಜ್ಯ ಸರ್ಕಾರದ ಪಠ್ಯದಲ್ಲಿ ಅವರ ಜೀವನ ಚರಿತ್ರೆಯುಳ್ಳ ಪಠ್ಯಕ್ರಮ ಅಧ್ಯಯನದ ವಸ್ತುವಾಗಿಸಬೇಕು
> -ರಾಜಶೇಖರ ನಾಗಮೂರ್ತಿ, ಮಾಜಿ ಜಿಲ್ಲಾ ಪಂಚಾಯತ ಸದಸ್ಯ

**ಶಾಮಲಾಲ್ ದಕ್ಷಿಣ ಭಾರತದ ಭಗತಸಿಂಗ್**

**ಹೋರಾಟಗಾರರೆಂಬ ಖ್ಯಾತಿ**

> ಶಾಮಲಾಲ ಅವರು 1903ರಲ್ಲಿ ಭಾಲ್ಕಿ ತಾಲ್ಲೂಕಿನ ಅಂಬೆಸಾಂಗವಿ ಗ್ರಾಮದಲ್ಲಿ ಜನಿಸಿದರು. ತಮ್ಮ ಸೋದರಮಾವನ ಊರಾದ ಹಳ್ಳಿಖೇಡ್ (ಬಿ)ದಲ್ಲಿ ವಿದ್ಯಾಭ್ಯಾಸ ಮಾಡಿದರು. ಉನ್ನತ ವ್ಯಾಸಾಂಗವನ್ನು ಪಾಕಿಸ್ತಾನದಲ್ಲಿರುವ ಲಾಹೋರನಲ್ಲಿ ಮುಗಿಸಿದರು. ಹೈಕೋರ್ಟ್‌ನಲ್ಲಿ ವಕೀಲ ವೃತ್ತಿ ಆರಂಭಿಸಿದ ಅವರು, ಸ್ವತಂತ್ರ ಸಂಗ್ರಾಮದಲ್ಲಿ ಹೋರಾಡಿದ್ದರು. ನಂತರ ಈ ಭಾಗದಲ್ಲಿ ಆರ್ಯ ಸಮಾಜ ಫಂಂಡೇಶನ್ ಸ್ಥಾಪನೆ ಮಾಡುವಲ್ಲಿ ಪ್ರಮುಖ ಕಾರಣೀಕರ್ತರಾದ ಅವರು, ಹೈದ್ರಾಬಾದ್ ಕರ್ನಾಟಕ ವಿಮೋಚನಾ ಚಳುವಳಿಯಲ್ಲಿ ಹೋರಾಟ ಮಾಡಿದ ಮೊದಲ ಹೋರಾಟಗಾರರೆಂಬ ಖ್ಯಾತಿಗೆ ಪಾತ್ರರಾದರು.

# ಜರ್ಮನಿಯಲ್ಲಿ ಕನ್ಸರ್ವೇಟಿವ್ ಮೈತ್ರಿಕೂಟದ ಜಯಭೇರಿ

## ಕನ್ಸರ್ವೇಟಿವ್ ಮೈತ್ರಿಕೂಟ ಅಧಿಕಾರಕ್ಕೆ ಬಂದಿರುವುದು, ಜರ್ಮನಿಗೆ ಒಳ್ಳೆಯ ದಿನಗಳನ್ನು ತರಲಿದೆ


**ಬರ್ಲಿನ್:** ಜರ್ಮನಿಯಲ್ಲಿ ನಡೆದ ರಾಷ್ಟ್ರೀಯ ಚುನಾವಣೆಯಲ್ಲಿ, ಫ್ರೆಡ್ರಿಕ್ ಮೆರ್ಜ್ ನೇತೃತ್ವದ ಸಂಪ್ರದಾಯವಾದಿ ಮೈತ್ರಿಕೂಟ ಗೆಲುವು ಸಾಧಿಸಿದೆ. ಫಲಿತಾಂಶಗಳು ದೇಶದ ರಾಜಕೀಯ ಭೂಪಟದಲ್ಲಿ ಗಮನಾರ್ಹ ಬದಲಾವಣೆಯನ್ನು ಸೂಚಿಸಿದ್ದು, ಫ್ರೆಡ್ರಿಕ್ ಮೆರ್ಜ್ ಜರ್ಮನಿಯ ನೂತನ ಚಾನ್ಸಲರ್ ಆಗಿ ಅಯ್ಕೆಯಾಗಿದ್ದಾರೆ.



ಇನ್ನು ಜರ್ಮನಿಯ ರಾಷ್ಟ್ರೀಯ ಚುನಾವಣೆ ಯಲ್ಲಿ ಕನ್ಸರ್ವೇಟಿವ್ ಮೈತ್ರಿಕೂಟ ಜಯ ಸಾಧಿಸಿರುವುದನ್ನು, ಅಮೇರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸ್ವಾಗತಿಸಿದ್ದಾರೆ.

ಜರ್ಮನಿಯ ಜನರು ಓಲಾಫ್ ಷೋಲ್ಜ್ ನೇತೃತ್ವದ ಮಧ್ಯ-ಎಡ ಸರ್ಕಾರದ ಸಾಮಾನ್ಯ ಜ್ಞಾನ ದ ಕೊರತೆಯ ನೀತಿಗಳನ್ನು ತಿರಸ್ಕರಿಸಿದ್ದಾರೆ ಎಂದು ಡೊನಾಲ್ಡ್ ಟ್ರಂಪ್ ಜರ್ಮನಿಯ ಫಲಿತಾಂಶವನ್ನು ವಿಶ್ಲೇಷಿಸಿದ್ದಾರೆ. ಅಮೆರಿಕದಂತೆಯೇ, ಜರ್ಮನಿಯ ಜನ ಕೂಡ ಸಾಮಾನ್ಯ ಜ್ಞಾನದ ಕೊರತೆಯ ಕಾರ್ಯಸೂಚಿಯಿಂದ ಬೇಸತ್ತಿದ್ದರು. ವಿಶೇಷವಾಗಿ ಓಲಾಫ್ ಷೋಲ್ಜ್ ಅವರ ಸರ್ಕಾರದ ವಲಸೆ ನೀತಿ ಜರ್ಮನಿಯ ಜನರ ಆತಂಕಕ್ಕೆ ಕಾರಣವಾಗಿತ್ತು. ಆದರೆ ಈಗ ಕನ್ಸರ್ವೇಟಿವ್ ಮೈತ್ರಿಕೂಟ ಅಧಿಕಾರಕ್ಕೆ ಬಂದಿರುವುದು, ಜರ್ಮನಿಗೆ ಒಳ್ಳೆಯ ದಿನಗಳನ್ನು ತರಲಿದೆ ಎಂದು ಡೊನಾಲ್ಡ್ ಟ್ರಂಪ್ ತಮ್ಮ ಟ್ರೂತ್ ಸೋಷಿಯಲ್ ಮಿಡಿಯಾದಲ್ಲಿ ಬರೆದುಕೊಂಡಿದ್ದಾರೆ.

ಆದರೆ ಡೊನಾಲ್ಡ್ ಟ್ರಂಪ್ ಜರ್ಮನಿಯಲ್ಲಿ ಕನ್ಸರ್ವೇಟಿವ್ ಮೈತ್ರಿಕೂಟದ ಗೆಲುವಿಗೆ ಶುಭ ಹಾರೈಸಿದ್ದರೂ, ನೂತನ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್ ಮಾತ್ರ ತಮ್ಮ ಗೆಲುವನ್ನು ಯುರೋಪ್‌ಗೆ ಅಮೆರಿಕದಿಂದ ನಿಜವಾದ ಸ್ವಾತಂತ್ರ್ಯ ದೊರಕಿಸಿ ಕೊಡಲು ಪೂರಕ ಎಂದು ಬಣ್ಣಿಸಿರುವುದು ಹಲವು ಚರ್ಚೆಗಳನ್ನು ಹುಟ್ಟುಹಾಕಿದೆ. ಅಮೆರಿಕ, ರಷ್ಯಾದ ಒತ್ತಡವನ್ನು ಜರ್ಮನಿ ಇನ್ನುಮುಂದೆ ಸಹಿಸುವುದಿಲ್ಲ ಎಂದಿರುವ ಫ್ರೆಡ್ರಿಕ್ ಮೆರ್ಜ್, ಯುರೋಪ್‌ನಲ್ಲಿ ಐಕ್ಯತೆಯನ್ನು ಸಾಧಿಸುವುದು ನನ್ನ ಪ್ರಾಥಮಿಕ ಆದ್ಯತೆಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಯುರೋಪ್‌ನಲ್ಲಿ ಐಕ್ಯತೆಯನ್ನು ಸೃಷ್ಟಿಸಲು ಸಾಧ್ಯವಿದೆ. ನಾವು ಅಮೆರಿಕದಿಂದ ನಿಜವಾದ ಸ್ವಾತಂತ್ರ್ಯ ಪಡೆಯುವ ಸಮಯ ಬಂದಿದೆ ಎಂದು ಫ್ರೆಡ್ರಿಕ್ ಮೆರ್ಜ್ ಹೇಳಿರುವುದು ಅಚ್ಚರಿಗೆ ಕಾರಣವಾಗಿದೆ. ಸದ್ಯ ಜರ್ಮನಿ ಯುರೋಪ್ ನಲ್ಲೇ ಅತಿದೊಡ್ಡ ಆರ್ಥಿಕ ಕುಸಿತವನ್ನು ದಾಖಲಿಸುತ್ತಿದೆ. ವಲಸೆ ಸಮಸ್ಯೆ ಬೃಹದಾಕಾರವಾಗಿ ಬೆಳೆಯುತ್ತಿದ್ದು, ವಲಸೆ ನೀತಿಯ ಪರ-ವಿರೋಧ ಅಭಿಪ್ರಾಯಗಳಿಂದ ಜರ್ಮನಿಯ ಸಮಾಜ ಬಹುವಾಗಿ ವಿಭಜನೆಗೊಂಡಿದೆ. ಓಲಾಫ್ ಷೋಲ್ಜ್ ಅವರ ಉದಾರ ವಲಸೆ ನೀತಿಗೆ ಜರ್ಮನಿಯಲ್ಲಿ ಭಾರೀ ಪ್ರತಿರೋಧ ವ್ಯಕ್ತವಾಗಿತ್ತಲ್ಲದೇ, ಜರ್ಮನಿಯಲ್ಲಿ ಜರ್ಮನಿಗೆ ಬಲ ಪರ್ಯಾಯದಂತಹ ತೀವ್ರ ಬಲ ಪಂಥೀಯ ಪಕ್ಷದ ಉದಯಕ್ಕೂ ಕಾರಣವಾಗಿತ್ತು.



ಫ್ರೆಡ್ರಿಕ್ ಮೆರ್ಜ್‌ಗೆ ಟ್ರಂಪ್ ಅಭಿನಂದನೆ

ಇದಕ್ಕೆ ಸಾಕ್ಷಿಯಾಗಿ ಈ ಬಾರಿಯ ರಾಷ್ಟ್ರೀಯ ಚುನಾವಣೆಯಲ್ಲಿ ಎಎಫ್‌ಡಿ ಎರಡನೇ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಅಮೆರಿಕದ ಬಿಲಿಯನೇರ್ ಉದ್ಯಮಿ ಎಲಾನ್ ಮಸ್ಕ್ ಸೇರಿದಂತೆ ಹಲವು ಅಮೆರಿಕನ್ ಖ್ಯಾತನಾಮರು, ಜರ್ಮನಿಯ ರಾಷ್ಟ್ರೀಯ ಚುನಾವಣೆಯಲ್ಲಿ ಎಎಫ್‌ಡಿ ಪಕ್ಷಕ್ಕೆ ಬಹಿರಂಗ ಬೆಂಬಲ ವ್ಯಕ್ತಪಡಿಸಿದ್ದರು. ಪರಿಣಾಮವಾಗಿ ಎಎಫ್‌ಡಿ ಪಕ್ಷ ಚುನಾವಣೆಯಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ. ಇಂತಹ ಕ್ಲಿಷ್ಟಕರ ಸಮಯದಲ್ಲಿ ಫ್ರೆಡ್ರಿಕ್ ಮೆರ್ಜ್ ಜರ್ಮನಿಯ ಚಾನ್ಸಲರ್ ಆಗಿ ಆಯ್ಕೆಯಾಗಿದ್ದು, ಜರ್ಮನಿಯ ರಾಜಕಾರಣ ಮತ್ತೊಮ್ಮೆ ಮಧ್ಯ-ಬಲಪಂಥದತ್ತ ವಾಲಿದೆ.

ಆದರೆ ಫ್ರೆಡ್ರಿಕ್ ಮೆರ್ಜ್ ಅಮೆರಿಕ, ರಷ್ಯಾದ ಪ್ರಭಾವದಿಂದ ಜರ್ಮನಿಯನ್ನು ಹೊರತರಲು ಬಯಸಿದ್ದು, ಯುರೋಪ್ ಕೇಂದ್ರಿತ ರಾಜಕಾರಣದತ್ತ ಅವರು ಹೆಚ್ಚು ಒಲವು ಹೊಂದಿದ್ದಾರೆ ಎಂಬುದು ಇದೀಗ ಸ್ಪಷ್ಟವಾಗಿದೆ.

### ಸ್ವಾತಂತ್ರ್ಯ ದೊರಕಿಸಿ ಕೊಡಲು ಪೂರಕ

**ಜರ್ಮನಿಯಲ್ಲಿ ನಡೆದ ರಾಷ್ಟ್ರೀಯ ಚುನಾವಣೆಯಲ್ಲಿ, ಫ್ರೆಡ್ರಿಕ್ ಮೆರ್ಜ್ ನೇತೃತ್ವದ ಸಂಪ್ರದಾಯವಾದಿ ಮೈತ್ರಿಕೂಟ ಗೆಲುವು ಸಾಧಿಸಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜರ್ಮನಿಯ ಫಲಿತಾಂಶವನ್ನು ಸ್ವಾಗತಿಸಿದ್ದಾರೆ. ಆದಾಗ್ಯೂ ಫ್ರೆಡ್ರಿಕ್ ಮೆರ್ಜ್ ಅವರು ತಮ್ಮ ಗೆಲುವನ್ನು ಯುರೋಪ್‌ಗೆ ಅಮೆರಿಕದಿಂದ ನಿಜವಾದ ಸ್ವಾತಂತ್ರ್ಯ ದೊರಕಿಸಿ ಕೊಡಲು ಪೂರಕ ಎಂದು ಹೇಳಿರುವುದು ಅಚ್ಚರಿಗೆ ಕಾರಣವಾಗಿದೆ.**

- ಜರ್ಮನಿ ರಾಷ್ಟ್ರೀಯ ಚುನಾವಣೆಯಲ್ಲಿ ಕನ್ಸರ್ವೇಟಿವ್ ಮೈತ್ರಿಕೂಟಕ್ಕೆ ಜಯ
- ಜರ್ಮನಿಯ ನೂತನ ಚಾನ್ಸಲರ್ ಆಗಿ ಫ್ರೆಡ್ರಿಕ್ ಮೆರ್ಜ್ ಆಯ್ಕೆ
- ಫ್ರೆಡ್ರಿಕ್ ಮೆರ್ಜ್ ಅವರನ್ನು ಅಭಿನಂದಿಸಿದ ಡೊನಾಲ್ಡ್ ಟ್ರಂಪ್
- ಫ್ರೆಡ್ರಿಕ್ ಮೆರ್ಜ್ ಅವರ ಯುರೋಪ್ ಕೇಂದ್ರಿತ ರಾಜಕಾರಣ ಕೈಹಿಡುಯುವುದೇ

## ಮಿನಿ ನ್ಯೂಸ್

### ಭದ್ರತಾ ಪಡೆಗಳ ಕಾರ್ಯಾಚರಣೆ 7 ಮಂದಿ ಭಯೋತ್ಪಾದಕರ ಹತ್ಯೆ

**ಪೇಶಾವರ:** ಪಾಕಿಸ್ತಾನದ ಖೈಬರ್ ಪುಂಖ್ವಾ ಪ್ರಾಂತ್ಯದಲ್ಲಿ ಕಾರ್ಯಾಚರಣೆ ನಡೆಸಿದ ಪಾಕಿಸ್ತಾನ ಭದ್ರತಾ ಪಡೆಗಳು ಕನಿಷ್ಠ 7 ಮಂದಿ ಭಯೋತ್ಪಾದಕರನ್ನು ಹತ್ಯೆಗೈದಿವೆ ಎಂದು ಮಿಲಿಟರಿ ಮಾಧ್ಯಮ ವಿಭಾಗ ತಿಳಿಸಿದೆ. ಗುಪ್ತಚರ ಮಾಹಿತಿ ಆಧಾರಿಸಿ ಕಾರ್ಯಾಚರಣೆ ನಡೆಸಲಾಯಿತು ಎಂದು ಇಂಟರ್-ಸರ್ವೀಸಸ್ ಪಬ್ಲಿಕ್ ರಿಲೇಶನ್ಸ್ ಬಿಡುಗಡೆ ಮಾಡಿದ ಪ್ರಕಟಣೆಯಲ್ಲಿ ತಿಳಿಸಿದೆ.


ದರಬನ್‌ನಲ್ಲಿ ಕಾರ್ಯಾಚರಣೆ ನಡೆಸಿದ ಭದ್ರತಾ ಪಡೆಗಳು ಭಯೋತ್ಪಾದಕ ಸ್ಥಳಗಳ ಮೇಲೆ ದಾಳಿ ನಡೆಸಿದ್ದು, ಈ ದಾಳಿಯಲ್ಲಿ ನಾಲ್ವರು ಭಯೋತ್ಪಾದಕರನ್ನು ಹತ್ಯೆ ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಮತ್ತೊಂದು ಕಾರ್ಯಾಚರಣೆಯಲ್ಲಿ ಮಡಿಯಲ್ಲಿ ಮೂವರು ಭಯೋತ್ಪಾದಕರನ್ನು ಹತ್ಯೆ ಮಾಡಲಾಗಿದೆ ಎಂದೂ ಅಧಿಕಾರಿಗಳು ತಿಳಿಸಿದ್ದಾರೆ. ದಾಳಿ ವೇಳೆ ಶಸ್ತ್ರಾಸ್ತ್ರಗಳು, ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ. ಹತ್ಯೆಯಾದವರು ಭಯೋತ್ಪಾದಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು ಪ್ರಕಟಣೆ ತಿಳಿಸಿದೆ. ಪಾಕಿಸ್ತಾನ್ ಇನ್‌ಸ್ಟಿಟ್ಯೂಟ್ ಫಾರ್ ಕಾನ್ಫಿಕ್ಟ್ ಅಂಡ್ ಸೆಕ್ಯುರಿಟಿ ಸ್ಟಡೀಸ್ ಬಿಡುಗಡೆ ಮಾಡಿದ ಮಾಹಿತಿಯ ಪ್ರಕಾರ, 2025ರ ಜನವರಿಯಲ್ಲಿ ದೇಶದಲ್ಲಿ ಭಯೋತ್ಪಾದಕ ದಾಳಿ ಪ್ರಕರಣಗಳ ಸಂಖ್ಯೆ ತೀವ್ರ ಹೆಚ್ಚಳವಾಗಿದೆ. ಹಿಂದಿನ ತಿಂಗಳಿಗೆ (2024ರ ಡಿಸೆಂಬರ್) ಹೋಲಿಸಿದರೆ ಶೇ 42ರಷ್ಟು ಹೆಚ್ಚಾಗಿದೆ.

### 2 ಸಾವಿರ ಉದ್ಯೋಗಿಗಳನ್ನು ವಜಾ ಮಾಡಿದ ಟ್ರಂಪ್ ಆಡಳಿತ


**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೇತೃತ್ವದ ಆಡಳಿತವು ಅಂತರರಾಷ್ಟ್ರೀಯ ಅಭಿವೃದ್ಧಿಗಾಗಿನ ಅಮೆರಿಕದ ಏಜೆನ್ಸಿಯ 2 ಸಾವಿರ ಉದ್ಯೋಗಿಗಳನ್ನು ವಜಾ ಮಾಡಿದ್ದು, ಇತರೆ ಸಾವಿರಾರು ನೌಕರರನ್ನು ರಜೆ ಮೇಲೆ ಕಳುಹಿಸಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ. ಉದ್ಯಮಿ ಎಲಾನ್ ಮಸ್ಕ್ ನೇತೃತ್ವದ ಅಮೆರಿಕದ ಸರ್ಕಾರಿ ದಕ್ಷತೆಯ ಇಲಾಖೆಯು ವೆಚ್ಚಗಳಲ್ಲಿ ಕಡಿತ ಮಾಡುವುದಾಗಿ ಈಚೆಗೆ ಘೋಷಿಸಿತ್ತು. ಇದರ ಬೆನ್ನಲ್ಲೇ ಯುಎಸ್‌ಏಡ್‌ನ ಉದ್ಯೋಗಿಗಳನ್ನು ಕಡಿತಗೊಳಿಸಿರುವುದು ಚರ್ಚೆಗೆ ಗ್ರಾಸವಾಗಿದೆ.

ಯುಎಸ್‌ಏಡ್ ಉದ್ಯೋಗಿಗಳನ್ನು ಕಡಿತಗೊಳಿಸುವ ಟ್ರಂಪ್ ಆಡಳಿತದ ಪ್ರಸ್ತಾವಕ್ಕೆ ಫೆಡರಲ್ ನ್ಯಾಯಾಧೀಶರು ಸಮ್ಮತಿ ಸೂಚಿಸಿದ್ದಾರೆ. ಇದರಿಂದಾಗಿ ಸರ್ಕಾರಿ ನೌಕರರ ಸಂಘಗಳಿಗೆ ಹಿನ್ನಡೆಯಾಗಿದೆ ಎಂದು ವಿಶ್ಲೇಷಿಸಲಾಗಿದೆ. 4,600 ಯುಎಸ್‌ಏಡ್ ಉದ್ಯೋಗಿಗಳ ಕಡಿತ ಸೇರಿದಂತೆ ಅಮೆರಿಕದ ನಾಗರಿಕ ಸೇವೆ ಮತ್ತು ವಿದೇಶಾಂಗ ಸಚಿವಾಲಯದ ಸಿಬ್ಬಂದಿಯನ್ನು ರಜೆ ಮೇಲೆ ಕಳುಹಿಸಲು ಸಾಧ್ಯತೆ ಇದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಮಹಾಕುಂಭ ಅಪಪ್ರಚಾರ; ಯೋಗಿ ಖಡಕ್ ಎಚ್ಚರಿಕೆ



**ಲಖ್ನೋ:** ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭ ಮೇಳದ ಬಗ್ಗೆ ಕೆಲವರು ಸಾಮಾಜಿಕ ಜಾಲತಾಣದಲ್ಲಿ ಅಪಪ್ರಚಾರ ಮಾಡುತ್ತಿದ್ದು, ಅಂಥವರ ಮೇಲೆ ಇದೀಗ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಂಡಿದೆ. ಮಹಾಕುಂಭದಲ್ಲಿ ತಪ್ಪುದಾರಿಗೆಳೆಯುವ ವಿಷಯವನ್ನು ಪ್ರಸಾರ ಮಾಡಿದ 140 ಸಾಮಾಜಿಕ ಮಾಧ್ಯಮ ಖಾತೆಗಳ ವಿರುದ್ಧ 13 ಎಫ್‌ಐಆರ್‌ಗಳು ದಾಖಲಾಗಿವೆ ಎಂದು ಮಹಾಕುಂಭ ಉಪ ಪೊಲೀಸ್ ಮಹಾನಿರ್ದೇಶಕ (ಡಿಐಜಿ) ವೈಭವ್ ಕೃಷ್ಣ ತಿಳಿಸಿದ್ದಾರೆ. ಮಹಾಕುಂಭ ಮೇಳವು ಫೆಬ್ರವರಿ 26ರಂದು ಮುಕ್ತಾಯಗೊಳ್ಳಲಿದ್ದು, ಶಿವರಾತ್ರಿ ಹಬ್ಬಕ್ಕೆ ಸಂಪೂರ್ಣ ವ್ಯವಸ್ಥೆ ಮಾಡಲಾಗಿದೆ. ಮಹಾಕುಂಭ ಪ್ರದೇಶದಲ್ಲಿ ಎಲ್ಲಿಯೂ ಸಂಚಾರ ದಟ್ಟಣೆ ಉಂಟಾಗದಂತೆ ನೋಡಿಕೊಳ್ಳಲಾಗುವುದು, ಎಲ್ಲಾ ವ್ಯವಸ್ಥೆಗಳು ಸುಗಮವಾಗಿ ನಡೆಯಬೇಕು, ಎಷ್ಟೇ ಜನಸಂದಣಿ ಇದ್ದರೂ ನಾವು ಸಂಪೂರ್ಣವಾಗಿ ಸಿದ್ಧರಿದ್ದೇವೆ ಎಂದು ಡಿಐಜಿ ತಿಳಿಸಿದ್ದಾರೆ.ಹೆಚ್ಚುತ್ತಿರುವ ಭಕ್ತರ ಸಂಖ್ಯೆಯನ್ನು ನಿರ್ವಹಿಸಲು ಅಧಿಕಾರಿಗಳು ಅಯೋಧ್ಯಾ ಧಾಮ್ ರೈಲು ನಿಲ್ದಾಣದಲ್ಲಿ ವ್ಯಾಪಕ ಜನಸಂದಣಿ ನಿಯಂತ್ರಣ ಕ್ರಮಗಳನ್ನು ಜಾರಿಗೆ ತರಲಾಗಿದೆ ಮಹಾ ಶಿವರಾತ್ರಿಯ ಮಹಾಕುಂಭ ಸ್ನಾನಕ್ಕೆ ಮುಂಚಿತವಾಗಿ ನಾವು ಜಾಗರೂಕತೆಯನ್ನು ಹೆಚ್ಚಿಸಿದ್ದೇವೆ. ಇಲ್ಲಿ ಹೆಚ್ಚುವರಿ ಭದ್ರತೆಯನ್ನು ನಿಯೋಜಿಸಲಾಗಿದೆ, ಅದರ ನಂತರ ಒಟ್ಟು 350ಕ್ಕೂ ಹೆಚ್ಚು ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಸುತ್ತಲೂ ಬ್ಯಾರಿಕೇಡಿಂಗ್ ಮಾಡಲಾಗಿದೆ. ಹಿಡುವಳಿ ಪ್ರದೇಶವನ್ನು ಸ್ಥಾಪಿಸಲಾಗಿದೆ ಮತ್ತು ಪ್ರಯಾಣಿಕರನ್ನು ಇಲ್ಲಿಗೆ ಕರೆತರಲಾಗುತ್ತಿದೆ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ (ಡಿಎಸ್ಪಿ) ಯಶವಂತ್ ಸಿಂಗ್ ತಿಳಿಸಿದ್ದಾರೆ. ರೈಲುಗಳಿಗೆ ಸಂಬಂಧಿಸಿದಂತೆ ನಾವು ನಿಯಮಿತವಾಗಿ ಘೋಷಣೆಗಳನ್ನು ಮಾಡುತ್ತಿದ್ದೇವೆ, ಇದರಿಂದ ಜನರು ಜಾಗೃತರಾಗಿರುತ್ತಾರೆ. ಅವರ ರೈಲು ಪ್ಲಾಟ್‌ಫಾರ್ಮ್‌ಗೆ ಬಂದ ನಂತರವೇ ಜನರಿಗೆ ಪ್ರವೇಶ ನೀಡಲಾಗುತ್ತಿದೆ. ಪ್ಲಾಟ್‌ಫಾರ್ಮ್‌ನ ಪ್ರಯಾಣಿಕರು ಅದರ ಸಾಮರ್ಥ್ಯವನ್ನು ಮೀರದಂತೆ ನಾವು ಖಚಿತಪಡಿಸಿಕೊಳ್ಳುತ್ತಿದ್ದೇವೆ. ಎಲ್ಲಾ ವ್ಯವಸ್ಥೆಗಳು ಜಾರಿಯಲ್ಲಿವೆ ಎಂದು ಅವರು ತಿಳಿಸಿದ್ದಾರೆ.



ಪ್ರಯಾಗ್‌ರಾಜ್‌ನಲ್ಲಿ ನಡೆದ ಮಹಾಕುಂಭಮೇಳಕ್ಕೆ 60 ಕೋಟಿಗೂ ಅಧಿಕ ಭಕ್ತರು ಭೇಟಿ ನೀಡಿದ್ದಾರೆ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹೇಳಿದ್ದಾರೆ. ಪ್ರಯಾಗ್‌ರಾಜ್‌ನ ಮಹಾಕುಂಭದಲ್ಲಿ ಪವಿತ್ರ ಸ್ನಾನ ಮಾಡಲು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿದ್ದಾರೆ. ಫೆಬ್ರವರಿ 26 ರಂದು ನಿಗದಿಯಾಗಿರುವ ಮಹಾ ಶಿವರಾತ್ರಿಯಂದು ಅಂತಿಮ ಪ್ರಮುಖ ಸ್ನಾನ ನಡೆಯಲಿದೆ.

# ಮಹಿಳೆಯರ ಖಾತೆಗೆ ಹಣ ಪಾವತಿಸಲು ಆಗ್ರಹ

**ನವದೆಹಲಿ:** ಚುನಾವಣೆಯಲ್ಲಿ ನೀಡಿದ ಭರವಸೆಯಂತೆ ಮಹಿಳೆಯರಿಗೆ 2,500 ಗೌರವಧನ ಪಾವತಿಸುವಂತೆ ಒತ್ತಾಯಿಸಿ ವಿರೋಧ ಪಕ್ಷದ ನಾಯಕಿ ಅತಿಶಿ ನೇತೃತ್ವದಲ್ಲಿ ಸೋಮವಾರ ಸಿಎಂ ರೇಖಾ ಗುಪ್ತಾ ಕಚೇರಿ ಮುಂದೆಯೇ ಪ್ರತಿಭಟನೆ ನಡೆಸಿದರು.


ಮೊದಲ ಸಂಪುಟ ಸಭೆಯಲ್ಲಿ ಭರವಸೆ ಈಡೇರಿಸುವುದಾಗಿ ಪ್ರಧಾನಿ ಮೋದಿ ಅವರು ಚುನಾವಣಾ ಪ್ರಚಾರದ ವೇಳೆ ಭರವಸೆ ನೀಡಿದ್ದರು. ಈ ಕುರಿತು ಚರ್ಚಿಸಲು ದೆಹಲಿ ಮುಖ್ಯಮಂತ್ರಿ ಬಳಿ ಸಮಯಾವಕಾಶ ಕೋರಿದ್ದೆವು. ಆದರೆ ಭೇಟಿಗೆ ಅವಕಾಶ ನೀಡಲಿಲ್ಲ. ಭರವಸೆ ಈಡೇರಿಸುವ ಮಾತನ್ನೂ ಆಡಿಲ್ಲ. ಮಾರ್ಚ್ 8ರ ಒಳಗಾಗಿ ಈ ನಿಟ್ಟಿನಲ್ಲಿ ಪ್ರಯತ್ನಿಸುವುದಾಗಿ ಹೇಳಿದ್ದಾರೆ ಅಷ್ಟೇ ಎಂದರು. 26 ವರ್ಷದ ಬಳಿಕ ದೆಹಲಿಯಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿದ್ದು ಅಧಿವೇಶನದ ಮೊದಲ ದಿನವೇ ಪ್ರತಿಭಟನೆಗೆ ಸಾಕ್ಷಿಯಾಯಿತು.



ಮೊದಲ ದಿನವೇ ಎಎಪಿ ಪ್ರತಿಭಟನೆ

# ವೇಗವಾಗಿ ಬೆಳೆಯುವ ಆರ್ಥಿಕತೆಯಾಗಿ ಭಾರತ: ಮೋದಿ

**ಭೋಪಾಲ್:** ಮುಂಬರುವ ವರ್ಷಗಳಲ್ಲಿಯೂ ಭಾರತವು ಅತಿ ವೇಗವಾಗಿ ಬೆಳೆಯುವ ಆರ್ಥಿಕತೆಯಾಗಿ ಮುಂದುವರಿಯಲಿದೆ ಎಂಬ ವಿಶ್ವಾಸವನ್ನು ವಿಶ್ವ ಬ್ಯಾಂಕ್ ವ್ಯಕ್ತಪಡಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಸೋಮವಾರ ತಿಳಿಸಿದರು.ಇನ್‌ವೆಸ್ಟ್ ಮಧ್ಯಪ್ರದೇಶ-ಜಾಗತಿಕ ಹೂಡಿಕೆದಾರರ ಸಮಾವೇಶ-2025 ಉದ್ಘಾಟಿಸಿದ ನಂತರ ಅವರು ಮಾತನಾಡಿದರು.



ಭಾರತವು ಜಾಗತಿಕ ವೈಮಾನಿಕ ಸಂಸ್ಥೆಗಳಿಗೆ ಅಗತ್ಯವಿರುವ ಸಾಧನಗಳನ್ನು ಪೂರೈಸುವ ಪ್ರಮುಖ ರಾಷ್ಟ್ರವಾಗಿದೆ. ಜವಳಿ, ಪ್ರವಾಸೋದ್ಯಮ, ತಂತ್ರಜ್ಞಾನ ವಲಯಗಳಲ್ಲಿ ಕೋಟಿಗಟ್ಟಲೆ ಉದ್ಯೋಗ ಸೃಷ್ಟಿಯಾಗಲಿದೆ ಎಂದು ಹೇಳಿದರು. ಡಬಲ್ ಎಂಜಿನ್ ಸರ್ಕಾರ ಸ್ಥಾಪನೆ ಬಳಿಕ ಮಧ್ಯಪ್ರದೇಶ ರಾಜ್ಯದ ಅಭಿವೃದ್ಧಿಯ ವೇಗ ದುಪ್ಪಟ್ಟಾಗಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರು, ಮಧ್ಯಪ್ರದೇಶ ಸರ್ಕಾರದ 18 ನೀತಿಗಳಿಗೆ ಚಾಲನೆ ನೀಡಿದರು.

ವಿಶ್ವ ಬ್ಯಾಂಕ್ ಇತ್ತೀಚೆಗೆ ತನ್ನ ಜಾಗತಿಕ ಆರ್ಥಿಕ ಹೊರನೋಟ ವರದಿಯಲ್ಲಿ, ಭಾರತವು ಮುಂದಿನ ಎರಡು ವರ್ಷವೂ ಅತಿ ವೇಗವಾಗಿ ಬೆಳವಣಿಗೆ ಹೊಂದುವ ಪ್ರಮುಖ ಆರ್ಥಿಕತೆಯಾಗಿ ಮುಂದುವರಿಯಲಿದೆ ಎಂದು ಹೇಳಿತ್ತು.

**ಕ್ಷಮೆಯಾಚಿಸಿದ ಪ್ರಧಾನಿ:** ಕಾರ್ಯಕ್ರಮಕ್ಕೆ 10-15 ನಿಮಿಷ ತಡವಾಗಿ ಬಂದಿದ್ದ ಪ್ರಧಾನಿ ಮೋದಿ ಅವರು ನಂತರ ತಮ್ಮ ಭಾಷಣದ ವೇಳೆ ಸಭಿಕರ ಕ್ಷಮೆ ಕೇಳಿದರು. ತಡವಾಗಿ ಬಂದಿದ್ದಕ್ಕೆ ಕಾರಣವನ್ನೂ ವಿವರಿಸಿದರು. ನಾನು ಭಾನುವಾರವೇ ರಾಜ್ಯಕ್ಕೆ ಬಂದಿದ್ದೆ. 10 ಮತ್ತು 12ನೇ ತರಗತಿ ವಿದ್ಯಾರ್ಥಿಗಳಿಗೆ ಪರೀಕ್ಷೆ ಇರುವುದು ಗೊತ್ತಾಯಿತು. ರಾಜಭವನದಿಂದ ನಾನು ಹೊರಡುವ ಸಮಯ ಮತ್ತು ಮಕ್ಕಳ ಪರೀಕ್ಷಾ ಸಮಯ ಎರಡೂ ಒಂದೇ ಆಗಿತ್ತು. ಭದ್ರತಾ ಕಾರಣಗಳಿಂದ ಕೆಲ ರಸ್ತೆಗಳನ್ನು ಮುಚ್ಚುವ ಸಾಧ್ಯತೆ ಇರುತ್ತದೆ. ಇದರಿಂದ ಮಕ್ಕಳಿಗೆ ಪರೀಕ್ಷೆಗೆ ತೆರಳಲು ಅನನುಕೂಲವಾಗುತ್ತದೆ ಎಂದು ಭಾವಿಸಿ ಸ್ವಲ್ಪ ತಡವಾಗಿ ಹೊರಟೆ ಎಂದರು.

# ಇದೇ ಮೊದಲ ಬಾರಿಗೆ ಮತದಾನ ಮಾಡಿದ ಛತ್ತಿಸ್‌ಘಡದ ಈ ಹಳ್ಳಿಯ ಗ್ರಾಮಸ್ಥರು




**ಸುಕ್ಮಾ:** ದೇಶಕ್ಕೆ ಸ್ವಾತಂತ್ರ್ಯ ಬಂದ ನಂತರ ಛತ್ತಿಸ್‌ಘಡದ ಹಳ್ಳಿಯೊಂದರ ಗ್ರಾಮಸ್ಥರು ಇದೇ ಮೊದಲ ಬಾರಿಗೆ ಮತದಾನ ಮಾಡಿದ್ದಾರೆ. ಸುಕ್ಮಾ ಜಿಲ್ಲೆಯ ನಕ್ಸಲ್ ಪೀಡಿತ ಕೆರ್ಲಪೆಂಡಾ ಗ್ರಾಮದಲ್ಲಿ ಸ್ವಾತಂತ್ರ್ಯದ ನಂತರ ಮೊದಲ ಬಾರಿಗೆ ನಿವಾಸಿಗಳು ಮತ ಚಲಾಯಿಸುವ ಮೂಲಕ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾದರು. ನಿನ್ನೆ ನಡೆದ ಮೂರನೇ ಹಂತದ ಮತದಾನದ ಸಂದರ್ಭದಲ್ಲಿ ಕೆರ್ಲಪೆಂಡಾದ ನೂರಾರು ಮಂದಿ ತಮ್ಮ ಹಕ್ಕು ಚಲಾಯಿಸಿ ಖುಷಿಪಟ್ಟರು. ನಾನು ಮೊದಲ ಬಾರಿಗೆ ಮತ ಚಲಾಯಿಸಿದ್ದೇನೆ. ನಾವು ಹಿಂದೆಂದೂ ಮತ ಚಲಾಯಿಸಿರಲಿಲ್ಲ. ರಾಜಕೀಯ ನಾಯಕರ ಮುಂದೆ ತಮ್ಮ ಬೇಡಿಕೆಗಳನ್ನು ಎತ್ತಲು ಗ್ರಾಮಸ್ಥರಿಗೆ ಅವಕಾಶ ಸಿಕ್ಕಿದ್ದು ಇದೇ ಮೊದಲು ಎಂದು ಇಲ್ಲಿನ ನಿವಾಸಿ ಹೇಳಿದರು. 75 ವರ್ಷಗಳ ಬಳಿಕ ಇಲ್ಲಿ ಮತದಾನ ನಡೆಯುತ್ತಿದೆ. ಹತ್ತಿರದ ಹಳ್ಳಿಗಳ ಜನರು ಸಹ ತಮ್ಮ ಮತ ಚಲಾಯಿಸಲು ತಲುಪುತ್ತಿದ್ದಾರೆ. ನಾವು ಅಭಿವೃದ್ಧಿಯತ್ತ ಸಾಗುತ್ತೇವೆ ಎಂದು ನನಗೆ ಸಂತೋಷವಾಗಿದೆ. ನಾಯಕರ ಮುಂದೆ ನಮ್ಮ ಬೇಡಿಕೆಗಳನ್ನು ಎತ್ತಲು ನಮಗೆ ಮೊದಲ ಬಾರಿಗೆ ಅವಕಾಶ ಸಿಕ್ಕಿದೆ ಎಂದು ಅವರು ಸುದ್ದಿಸಂಸ್ಥೆಗೆ ತಿಳಿಸಿದರು. ಈ ಬೆಳವಣಿಗೆಯು ಪಂಚಾಯತ್ ಚುನಾವಣೆಯ ಎರಡನೇ ಹಂತದಲ್ಲಿ ಇದೇ ರೀತಿಯ ಸಕಾರಾತ್ಮಕ ಪ್ರವೃತ್ತಿಗಳನ್ನು ಅನುಸರಿಸುತ್ತದೆ. ಅಲ್ಲಿ ಒಂದು ಕಾಲದಲ್ಲಿ ಬಂಡಾಯದ ನಿವಾಸಿಗಳು ಇದ್ದರು ಇದೀಗ ನಾಗರಿಕತೆ ಬಗ್ಗೆ ಅರಿವು ಮೂಡತೊಡಗಿದೆ.


# 8 ಕಾರ್ಮಿಕರು ಬದುಕುಳಿಯುವುದು ಕಷ್ಟಸಾಧ್ಯ: ಸಚಿವ

**ಹೈದರಾಬಾದ್:** ಇಲ್ಲಿನ ಎಸ್‌ಎಲ್‌ಬಿಸಿ ಸುರಂಗದಲ್ಲಿ ಸಿಲುಕಿಕೊಂಡಿರುವ ಎಂಟು ಕಾರ್ಮಿಕರು ಬದುಕುಳಿಯುವ ಸಾಧ್ಯತೆಗಳು ಇಲ್ಲ ಎಂದು ತೆಲಂಗಾಣ ಸಚಿವ ಜುಪಲ್ಲಿ ಕೃಷ್ಣರಾವ್ ತಿಳಿಸಿದ್ದಾರೆ. 2023 ರಲ್ಲಿ ಉತ್ತರಾಖಂಡದ ಸಿಲ್ಕ್ಯಾರಾ ಬೆಂಡ್-ಬಾರ್ಕೋಟ್ ಸುರಂಗದಲ್ಲಿ ಸಿಕ್ಕಿಬಿದ್ದ ನಿರ್ಮಾಣ ಕಾರ್ಮಿಕರನ್ನು ರಕ್ಷಿಸಿದ ಇಲಿ ಗಣಿಗಾರರ ತಂಡವು ಪುರುಷರನ್ನು ಹೊರತೆಗೆಯಲು ರಕ್ಷಣಾ ತಂಡಗಳೊಂದಿಗೆ ಸೇರಿಕೊಂಡಿದೆ ಎಂದು ಅವರು ಉಲ್ಲೇಖಿಸಿದ್ದಾರೆ.

ಅಪಘಾತದ ಸ್ಥಳವು ಕೆಸರು, ಅವಶೇಷಗಳಿಂದ ತುಂಬಿರುವುದರಿಂದ ಸಿಕ್ಕಿ ಬಿದ್ದ ವ್ಯಕ್ತಿಗಳನ್ನು ರಕ್ಷಿಸಲು ಕನಿಷ್ಠ ಮೂರರಿಂದ ನಾಲ್ಕು ದಿನಗಳು ಬೇಕಾಗುತ್ತವೆ ಎಂದು ಸಚಿವರು ಹೇಳಿದ್ದಾರೆ.ಪ್ರಾಮಾಣಿಕವಾಗಿ ಹೇಳುವುದಾದರೆ, ಅವರು ಬದುಕುಳಿಯುವ ಸಾಧ್ಯತೆಗಳು ಬಹಳ ಕಡಿಮೆ ಎಂದು ಅವರು ಒಪ್ಪಿಕೊಂಡಿದ್ದಾರೆ.

ಏಕೆಂದರೆ, ನಾನು ಅಪಘಾತದ ಸ್ಥಳದಿಂದ ಕೇವಲ 50 ಮೀಟರ್ ದೂರದಲ್ಲಿ ಕೊನೆಯವರೆಗೆ ಹೋದೆ. ನಾವು ಛಾಯಾಚಿತ್ರಗಳನ್ನು ತೆಗೆದುಕೊಂಡಾಗ, ಸುರಂಗದ ಅಂತ್ಯವು ಗೋಚರಿಸುತ್ತಿತ್ತು. ಮತ್ತು ಸುರಂಗದ 9 ಮೀಟರ್ ವ್ಯಾಸದಲ್ಲಿ ಸುಮಾರು 30 ಅಡಿಗಳಲ್ಲಿ ಮಣ್ಣು ರಾಶಿಯಾಗಿದೆ. ಎಲ್ಲಾ ರೀತಿಯ ಪ್ರಯತ್ನಗಳ ಹೊರತಾಗಿಯೂ, ಎಲ್ಲಾ ರೀತಿಯ ಸಂಸ್ಥೆಗಳು (ಕೆಲಸ ಮಾಡಲು), ಜನರನ್ನು ಹೊರಹಾಕಲು 3-4 ದಿನಗಳಿಗಿಂತ ಕಡಿಮೆಯಿಲ್ಲ ಎಂದು ನಾನು ಭಾವಿಸುತ್ತೇನೆ ಎಂದು ನೀರಾವರಿ ಸಚಿವ ಉತ್ತಮ್ ಕುಮಾರ್ ರೆಡ್ಡಿ ಅವರೊಂದಿಗೆ ರಕ್ಷಣಾ ಕಾರ್ಯಾಚರಣೆಯ ಮೇಲ್ವಿಚಾರಣೆ ವಹಿಸಿದ್ದ ರಾವ್ ಹೇಳಿದರು. ಅವಶೇಷಗಳನ್ನು ತೆರವುಗೊಳಿಸಲು ಸುರಂಗದಲ್ಲಿ ಕನ್ವೇಯರ್ ಬೆಲ್ಟ್ ಅನ್ನು ಪುನಃಸ್ಥಾಪಿಸಲಾಗುತ್ತಿದೆ ಎಂದು ರಾವ್ ಹೇಳಿದರು. ಭಾರತೀಯ ಸೇನೆ, ಎನ್‌ಡಿಆರ್‌ಎಫ್ ಮತ್ತು ಇತರ ಏಜೆನ್ಸಿಗಳ ನಿರಂತರ ಪ್ರಯತ್ನಗಳ ಹೊರತಾಗಿಯೂ. ತೆಲಂಗಾಣದ ನಾಗಕರ್ನೂಲ್ ಜಿಲ್ಲೆಯ ಶ್ರೀಶೈಲಂ ಎಡದಂಡೆ ಕಾಲುವೆ (ಎಸ್‌ಎಲ್ಬಿಸಿ) ಯೋಜನೆಯಲ್ಲಿ ಸುರಂಗದ ಒಂದು ಭಾಗ ಕುಸಿದ ನಂತರ ಸುರಂಗದೊಳಗೆ 48 ಗಂಟೆಗಳಿಗೂ ಹೆಚ್ಚು ಕಾಲ ಸಿಕ್ಕಿಬಿದ್ದ ಎಂಟು ಜನರನ್ನು ಹೊರತೆಗೆಯುವ ರಕ್ಷಣಾ ಕಾರ್ಯಾಚರಣೆಯಲ್ಲಿ ಇಲ್ಲಿಯವರೆಗೆ ಯಾವುದೇ ಪ್ರಗತಿ ಸಾಧಿಸಲಾಗಿಲ್ಲ.





# ಶಿವರಾತ್ರಿ ಆಚರಣೆಗೆ ತಡೆ ಕೋರಿದ್ದ ಅರ್ಜಿ ವಜಾ

**ಚೆನ್ನೈ:** ಕೊಯಮತ್ತೂರಿನಲ್ಲಿರುವ ಈಶಾ ಪ್ರತಿಷ್ಠಾನದಲ್ಲಿ ಮಹಾಶಿವರಾತ್ರಿ ಆಚರಣೆಗೆ ಅನುಮತಿ ನೀಡದಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಕೋರಿದ್ದ ಅರ್ಜಿಯನ್ನು ಮದ್ರಾಸ್ ಹೈಕೋರ್ಟ್ ಸೋಮವಾರ ವಜಾಗೊಳಿಸಿದೆ. ಈಶಾ ಪ್ರತಿಷ್ಠಾನವು ಕೊಯಮತ್ತೂರಿನಲ್ಲಿ ಕೊಳಚೆ ನೀರನ್ನು ಸರಿಯಾಗಿ ಸಂಸ್ಕರಿಸುತ್ತಿಲ್ಲ, ಸರಿಯಾಗಿ ಸಂಸ್ಕರಿಸದ ಕೊಳಚೆ ನೀರನ್ನು ಅದು ಹೊರಬಿಡುತ್ತಿದೆ, ತೀವ್ರ ಪ್ರಮಾಣದಲ್ಲಿ ಶಬ್ದ ಮಾಲಿನ್ಯ ಉಂಟುಮಾಡುತ್ತಿದೆ ಎಂಬ ಆರೋಪಗಳ ಅಡಿಯಲ್ಲಿ ಸೂಕ್ತ ಕ್ರಮ ಜರುಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂಬ ಕೋರಿಕೆ ಸಹ ಈ ಅರ್ಜಿಯಲ್ಲಿ ಇತ್ತು. ಎಸ್.ಟಿ. ಶಿವಜ್ಞಾನಮ್ ಎನ್ನುವವರು ಈ ಅರ್ಜಿ ಸಲ್ಲಿಸಿದ್ದರು.

ಪ್ರತಿಷ್ಠಾನವು ಕಳೆದ ವರ್ಷ ಅಕ್ರಮಗಳನ್ನು ಎಸಗಿತ್ತು ಎಂಬ ಆರೋಪಗಳ ಹಿನ್ನೆಲೆಯಲ್ಲಿ, ಈ ವರ್ಷ ಅದಕ್ಕೆ ಮಹಾಶಿವರಾತ್ರಿ ಕಾರ್ಯಕ್ರಮ ಆಯೋಜಿಸಲು ಅವಕಾಶ ಕಲ್ಪಿಸಬಾರದು ಎಂದು ಅವರು ಕೋರಿದ್ದರು. ವಾಯು, ಜಲ ಮತ್ತು ಶಬ್ದ ಮಾಲಿನ್ಯದ ವಿಚಾರವಾಗಿ ಸಾರ್ವಜನಿಕರಿಂದ ಯಾವುದೇ ದೂರು ಬಂದಿಲ್ಲ ಎಂದು ಮಂಡಳಿ ಮಾಹಿತಿ ನೀಡಿತು. ಅಲ್ಲದೆ, ಶಬ್ದದ ಮಟ್ಟಕ್ಕೆ ಸಂಬಂಧಿಸಿದ ನಿಯಮಗಳನ್ನು ಪ್ರತಿಷ್ಠಾನವು ಪಾಲಿಸಿದೆ ಎಂದು ಹೇಳಿತು. ಇದನ್ನು ದಾಖಲಿಸಿಕೊಂಡ ನ್ಯಾಯಮೂರ್ತಿಗಳಾದ ಎಸ್.ಎಂ. ಸುಬ್ರಮಣಿಯಂ ಮತ್ತು ಕೆ. ರಾಜಶೇಖರ್ ಅವರು ಇರುವ ವಿಭಾಗೀಯ ಪೀಠವು ಅರ್ಜಿಯನ್ನು ವಜಾಗೊಳಿಸಿತು.



### ಕೊಳಚೆ ನೀರನ್ನು ಸಂಸ್ಕರಿಸಲು ಅಗತ್ಯವಿರುವ ಸೌಲಭ್ಯ

**ಪ್ರತಿಷ್ಠಾನವು ಮಹಾಶಿವರಾತ್ರಿ ಆಚರಣೆ ಸಂದರ್ಭದಲ್ಲಿ ನಿಯಮಗಳನ್ನು ಸರಿಯಾಗಿ ಪಾಲಿಸುತ್ತದೆಯೇ ಎಂಬುದನ್ನು ಪರಿಶೀಲಿಸುವಂತೆ ತಮಿಳುನಾಡು ಮಾಲಿನ್ಯ ನಿಯಂತ್ರಣ ಮಂಡಳಿಗೆ (ಟಿಎನ್‌ಪಿಸಿಬಿ) ಹೈಕೋರ್ಟ್ ಕಳೆದ ವಾರ ಸೂಚಿಸಿತ್ತು. ಕೊಳಚೆ ನೀರನ್ನು ಸಂಸ್ಕರಿಸಲು ಅಗತ್ಯವಿರುವ ಸೌಲಭ್ಯವು ಈಶಾ ಪ್ರತಿಷ್ಠಾನದಲ್ಲಿ ಇದೆ ಎಂದು ಮಂಡಳಿಯು ಹೈಕೋರ್ಟ್‌ಗೆ ಸೋಮವಾರ ತಿಳಿಸಿತು.**

## ಅವಿಭಜಿತ ಶಿವಸೇನೆಯಲ್ಲಿ ಹುದ್ದೆ ಬೇಕಂದ್ರೆ, ಮರ್ಸಿಡೀಸ್ ಕೊಡ್ಬೇಕಿತ್ತು; ಮಹಾ ಸ್ಫೋಟಕ್ಕೆ ಕಾರಣರಾದ ನೀಲಂ ಗೋರ್ಹೆ

# ರಾಜಕೀಯ ವಿಚಾರ ಮಾತನಾಡಲು ಅವಕಾಶ ಮಾಡಿಕೊಟ್ಟಿದ್ದ್ಯಾರು..?

**ಮುಂಬೈ:** ಪಕ್ಷ ವಿಭಜನೆ, ಬಿಜೆಪಿಯಿಂದ ದೂರ ಸರಿದ ಕಾರಣಕ್ಕೆ ಅನುಭವಿಸುತ್ತಿರುವ ರಾಜಕೀಯ ಹಿನ್ನಡೆ ಮತ್ತು ಹಿಂದುತ್ವ ರಾಜಕಾರಣದಿಂದ ವಿಮುಖರಾದ ಆರೋಪ ಎದುರಿಸಿ ಹೈರಾಣಾಗಿರುವ ಶಿವಸೇನೆ ನಾಯಕ ಉದ್ಧವ್ ಠಾಕ್ರೆ, ಅವರಿಗೆ, ಶಿವಸೇನೆ ನಾಯಕಿ ನೀಲಂ ಗೋರ್ಹೆ ಮತ್ತೊಂದು ಆಘಾತ ನೀಡಿದ್ದಾರೆ. ಅವಿಭಜಿತ ಶಿವಸೇನೆಯಲ್ಲಿ ಯಾರಾದರೂ ಹುದ್ದೆ ಬಯಸಿದರೆ ಅವರು ಮರ್ಸಡೀಸ್ ಕಾರನ್ನು ಉಡುಗೊರೆಯಾಗಿ ನೀಡಬೇಕಿತ್ತು ಎಂಬ ನೀಲಂ ಗೋರ್ಹೆ ಅವರ ಹೇಳಿಕೆ, ಮಹಾರಾಷ್ಟ್ರ ರಾಜಕೀಯದಲ್ಲಿ ಕೋಲಾಹಲವನ್ನೇ ಸೃಷ್ಟಿಸಿದೆ. ಪಕ್ಷದ ಉನ್ನತ ನಾಯಕತ್ವಕ್ಕೆ ಮರ್ಸಿಡೀಸ್ ಕಾರನ್ನು ಉಡುಗೊರೆಯಾಗಿ ನೀಡಿದ ಬಳಿಕವಷ್ಟೇ, ಹುದ್ದೆಗಳನ್ನು ಹಂಚಿಕೆ ಮಾಡಲಾಗುತ್ತಿತ್ತು ಎಂದು ನೀಲಂ ಗೋರ್ಹೆ ಗಂಭೀರ ಆರೋಪ ಮಾಡಿದ್ದಾರೆ.

ಮರಾಠಿ ಸಾಹಿತ್ಯ ಸಮ್ಮೇಳನದ ವೇದಿಕೆಯಲ್ಲಿ ಮಾತನಾಡಿದ ನೀಲಂ ಗೋರೆ, ಅವಿಭಜಿತ ಶಿವಸೇನೆಯಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿತ್ತು. ಹುದ್ದೆಗಳನ್ನು ಮರ್ಸಿಡೀಸ್ ಕಾರುಗಳನ್ನು ಉಡುಗೊರೆಯಾಗಿ ಪಡೆದು ಮಾರಾಟ ಮಾಡಲಾಗುತ್ತಿತ್ತು ಎಂದು ಹೇಳುವ ಮೂಲಕ ಸಂಚಲನ ಸೃಷ್ಟಿಸಿದರು.

**ಶಿವಸೇನೆ (ಯುಬಿಟಿ) ಗರಂ:** ಇನ್ನು ನೀಲಂ ಗೋರ್ಹೆ ಆರೋಪಕ್ಕೆ ಕೆಂಡಾಮಂಡಲವಾಗಿರುವ ಉದ್ಧವ್ ಠಾಕ್ರೆ ನೇತೃತ್ವದ ಶಿವಸೇನೆ ಬಣ, ಮರಾಠಿ ಸಾಹಿತ್ಯ ಸಮ್ಮೇಳನದ ವೇದಿಕೆಯಲ್ಲಿ ನೀಲಂ ಗೋರ್ಹೆ ಅವರಿಗೆ ರಾಜಕೀಯ ವಿಚಾರ ಮಾತನಾಡಲು ಅವಕಾಶ ಮಾಡಿಕೊಟ್ಟಿದ್ದ್ಯಾರು? ಎಂದು ಪ್ರಶ್ನಿಸಿದೆ. ಈ ಕುರಿತು ಮಾತನಾಡಿರುವ ಶಿವಸೇನೆ(ಯುಬಿಟಿ) ನಾಯಕ ಸಂಜಯ್ ರಾವತ್, ನೀಲಂ ಗೋರ್ಹೆ ಆರೋಪದಲ್ಲಿ ಸತ್ಯಾಂಶವಿದ್ದರೆ, ಉದ್ಧವ್ ಠಾಕ್ರೆ ಅವರ ಮಾತೋಶ್ರೀ ಮನೆ ಮುಂದೆ ಮರ್ಸಿಡೀಸ್ ಕಾರುಗಳ ದೊಡ್ಡ ಸಾಲು ಕಾಣ ಬೇಕಿತ್ತು. ಈ ಕಾರುಗಳು ಎಲ್ಲಿ ಹೋಗಿವೆ? ಎಂದು ವ್ಯಂಗ್ಯಭರಿತ ಧಾಟಿಯಲ್ಲಿ ಪ್ರಶ್ನಿಸಿದ್ದಾರೆ.

ಸಾಹಿತ್ಯ ಸಮ್ಮೇಳನದಲ್ಲಿ ರಾಜಕೀಯ ಹೇಳಿಕೆಗಳ ಸೂಕ್ತತೆಯ ಬಗ್ಗೆ ಅಖಿಲ ಭಾರತೀಯ ಮರಾಠಿ ಸಾಹಿತ್ಯ ಮಹಾ ಮಂಡಳದಿಂದ ವಿವರಣೆ ಕೇಳಿರುವ ಸಂಜಯ್ ರಾವತ್, ಈ ಕಾರ್ಯಕ್ರಮ ಯಾವುದೇ ರಾಜಕೀಯ ಒತ್ತಡದಲ್ಲಿ ನಡೆದಿದೆಯೇ? ಅಖಿಲ ಭಾರತೀಯ ಮರಾಠಿ ಸಾಹಿತ್ಯ ಮಹಾಮಂಡಳದ ಅಧ್ಯಕ್ಷೆ ಉಷಾ ತಂಬೆ ಈ ಕುರಿತು ಸ್ಪಷ್ಟನೆ ನೀಡಬೇಕು ಎಂದು ಸಂಜಯ್ ರಾವತ್ ಒತ್ತಾಯಿಸಿದ್ದಾರೆ.



ಇನ್ನು ಈ ವಿಚಾರವಾಗಿ ಮಾತನಾಡಿರುವ ಶಿವಸೇನೆ(ಯುಬಿಟಿ) ನಾಯಕ ಉದ್ಧವ್ ಠಾಕ್ರೆ, ರಾಜಕೀಯವಾಗಿ ನನಗೆ ಅಪ್ರಸ್ತುತರಾಗಿರುವ ವ್ಯಕ್ತಿಗಳ ಬಗ್ಗೆ ಮಾತನಾಡಿ ನನ್ನ ಸಮಯ ವ್ಯರ್ಥ ಮಾಡಿಕೊಳ್ಳಲು ನನಗೆ ಇಷ್ಟವಿಲ್ಲ ಎಂದು ಮಾರ್ಮಿಕವಾಗಿ ಹೇಳಿದ್ದಾರೆ. ಮುಂದುವರೆದು, ನೀಲಂ ಗೋರ್ಹೆ ಅವರು ನನಗೆ ನೀಡಿದ ಮರ್ಸಿಡೀಸ್ ಕಾರು ಎಲ್ಲಿ ಹೋಗಿದೆ ಎಂಬುದನ್ನು ಅವರು ಹೇಳಬೇಕು ಎಂದು ಉದ್ಧವ್ ಠಾಕ್ರೆ ಒತ್ತಾಯಿಸಿದ್ದಾರೆ.


ಇದೇ ವಿಚಾರವಗಿ ಮಾತನಾಡಿರುವ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಅಂಬಾದಾಸ್ ದಾನ್ವೆ ಮತ್ತು ಶಿವಸೇನೆ (ಯುಬಿಟಿ) ನಾಯಕಿ ಸುಶ್ಮಾ ಅಂಧಾರೆ, ನೀಲಂ ಗೋರ್ಹೆ ಅವರು ಅವಿಭಜಿತ ಶಿವಸೇನೆಯೊಂದಿಗಿನ ಮೂರು ದಶಕಗಳ ಸಂಬಂಧದಿಂದ ಎಷ್ಟು ಲಾಭಗಳಿಸಿದ್ದಾರೆ ಎಂಬುದನ್ನು ಬಹಿರಂಗಪಡಿಸಲಿ ಎಂದು ಸವಾಲು ಹಾಕಿದ್ದಾರೆ. ಅತ್ತ ನೀಲಂ ಗೋರ್ಹೆ ಹೇಳಿಕೆಯನ್ನು ಖಂಡಿಸಿ, ಶಿವಸೇನೆ(ಯುಬಿಟಿ) ಕಾರ್ಯಕರ್ತರು ಪುಣೆಯಲ್ಲಿರುವ ಅವರ ನಿವಾಸದೆದುರು ಪ್ರತಿಭಟನೆ ನಡೆಸಿದ್ದಾರೆ. ಉದ್ಧವ್ ಠಾಕ್ರೆ ವಿರುದ್ಧ ಸುಳ್ಳು ಆರೋಪಗಳನ್ನು ಮಾಡಿರುವ ನೀಲಂ ಗೋರ್ಹೆ ಈ ಕೂಡಲೇ ಕ್ಷಮೆಯಾಚಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ.

### ನೀಲಂ ಗೋರ್ಹೆ ಸ್ಪಷ್ಟನೆ

**ಇನ್ನು ತಮ್ಮ ಹೇಳಿಕೆ ತೀವ್ರ ವಿವಾದದ ಸ್ವರೂಪ ಪಡೆಯುತ್ತಿದ್ದಂತೇ ಎಚ್ಚೆತ್ತಿರುವ ನೀಲಂ ಗೋರ್ಹೆ, ತಮ್ಮ ಹೇಳಿಕೆ ನಿರ್ದಿಷ್ಟ ಪ್ರಶ್ನೆಗೆ ಪ್ರತಿಕ್ರಿಯೆಯಾಗಿತ್ತು ಎಂದು ಸಮರ್ಥಿಸಿಕೊಂಡಿದ್ದಾರೆ. ಅಲ್ಲದೇ ತಮ್ಮ ಹೇಳಿಕೆಯನ್ನು ಮಾಧ್ಯಮಗಳು ತಪ್ಪಾಗಿ ಅರ್ಥೈಸಿವೆ ಎಂದೂ ನೀಲಂ ಗೋರ್ಹೆ ಹೇಳಿದ್ದಾರೆ.**

### ನೀಲಂ ಗೋರ್ಹೆ ಅವರಿಗೆ ಸವಾಲು

**ಅವಿಭಜಿತ ಶಿವಸೇನೆಯಲ್ಲಿ ಯಾರಾದರೂ ಹುದ್ದೆ ಬಯಸಿದರೆ ಅವರು ಮರ್ಸಡೀಸ್ ಕಾರನ್ನು ಉಡುಗೊರೆಯಾಗಿ ನೀಡಬೇಕಿತ್ತು ಎಂಬ ಶಿವಸೇನೆ (ಏಕನಾಥ್ ಶಿಂಧೆ ಬಣ) ನಾಯಕಿ ನೀಲಂ ಗೋರ್ಹೆ ಹೇಳಿಕೆ, ಮಹಾರಾಷ್ಟ್ರ ರಾಜಕೀಯದಲ್ಲಿ ತೀವ್ರ ಕೋಲಾಹಲ ಸೃಷ್ಟಿಸಿದೆ. ನೀಲಂ ಗೋರ್ಹೆ ಹೇಳಿಕೆಯನ್ನು ಖಂಡಿಸಿರುವ ಶಿವಸೇನೆ(ಯುಬಿಟಿ) ನಾಯಕರು, ಉದ್ಧವ್ ಠಾಕ್ರೆ ಅವರ ಮಾತೋಶ್ರೀ ಮನೆ ಮುಂದೆ ನಿಲ್ಲಬೇಕಿದ್ದ ಮರ್ಸಿಡೀಸ್ ಕಾರುಗಳು ಎಲ್ಲಿವೆ ಎಂಬುದನ್ನು ತೋರಿಸುವಂತೆ ನೀಲಂ ಗೋರ್ಹೆ ಅವರಿಗೆ ಸವಾಲು ಹಾಕಲಾಗಿದೆ.**




## ಅಮೆರಿಕ ಗುಪ್ತಚರ ಸಂಸ್ಥೆಯ ಉಪನಿರ್ದೇಶಕರಾಗಿ ಡಾನ್ ಬೊಂಗಿನೊ ನೇಮಕ

**ನ್ಯೂಯಾರ್ಕ್:** ಅಮೆರಿಕ ಗುಪ್ತಚರ ಸಂಸ್ಥೆಯ (ಎಫ್‌ಬಿಐ) ಉಪನಿರ್ದೇಶಕರಾಗಿ ಡಾನ್ ಬೊಂಗಿನೊ ಅವರನ್ನು ನೇಮಕ ಮಾಡಲಾಗಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. 'ನಮ್ಮ ದೇಶದ ಬಗ್ಗೆ ಅಪಾರ ಪ್ರೀತಿ ಮತ್ತು ಉತ್ಸಾಹದ ವ್ಯಕ್ತಿಯಾಗಿರುವ ಡಾನ್ ಬೊಂಗಿನೊ ಅವರನ್ನು ಉಪನಿರ್ದೇಶಕರನ್ನಾಗಿ ಎಫ್‌ಬಿಐ ನಿರ್ದೇಶಕ ಕಾಶ್ ಪಟೇಲ್ ಹೆಸರಿಸಿದ್ದಾರೆ.

ಡಾನ್ ಬೊಂಗಿನೊ ಅವರು ಸ್ನಾತಕೋತ್ತರ ಪದವಿ ಪಡೆದಿದ್ದಾರೆ. ಜತೆಗೆ, ನ್ಯೂಯಾರ್ಕ್ ಪೊಲೀಸ್ ಇಲಾಖೆಯ ಸದಸ್ಯರಾಗಿದ್ದರು. ಈಗ ಅವರು ದೇಶದ ಅತ್ಯಂತ ಯಶಸ್ವಿ ಪಾಡ್‌ಕಾಸ್ಟರ್‌ಗಳಲ್ಲಿ ಒಬ್ಬರಾಗಿದ್ದಾರೆ. ಇದೀಗ ನಮ್ಮೊಂದಿಗೆ ಕೆಲಸ ಮಾಡಲು ಸಿದ್ಧರಿರುವ ಅವರಿಗೆ ಅಭಿನಂದನೆಗಳು' ಎಂದು ಟ್ರಂಪ್ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ. ಅಮೆರಿಕದ ತನಿಖಾ ಸಂಸ್ಥೆ ಎಫ್‌ಬಿಐನ 9ನೇ ನಿರ್ದೇಶಕರಾಗಿ ನೇಮಕಗೊಂಡಿರುವ ಭಾರತ ಮೂಲದ ಕಾಶ್ ಪಟೇಲ್ ಅವರು ಭಗವದ್ಗೀತೆ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಕಾಶ್ ಪಟೇಲ್ ಅವರು ಅಮೆರಿಕ ಗುಪ್ತಚರ ಸಂಸ್ಥೆ (ಎಫ್‌ಬಿಐ) ನಿರ್ದೇಶಕರ ಹುದ್ದೆಯನ್ನೇರಿದ ಮೊದಲ ಭಾರತೀಯ-ಅಮೆರಿಕನ್ ಎನಿಸಿಕೊಂಡಿದ್ದಾರೆ.

ಗುಜರಾತ್ ಮೂಲದ ದಂಪತಿಯ ಮಗನಾದ ಕಾಶ್ ಪಟೇಲ್ ಅವರನ್ನು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಈ ಹಿಂದೆಯೇ ಎಫ್‌ಬಿಐ ನಿರ್ದೇಶಕರನ್ನಾಗಿ ನೇಮಕ ಮಾಡಿದ್ದರು. ಅವರ ನೇಮಕವನ್ನು ಅಮೆರಿಕದ ಸೆನೆಟ್ ಈಚೆಗೆ 51-49 ಮತಗಳಿಂದ ದೃಢಪಡಿಸಿತ್ತು.





# ರಚಿನ್ ರವೀಂದ್ರ ಸ್ಫೋಟಕ ಶತಕ

## ಬಾಂಗ್ಲಾ ಬಗ್ಗುಬಡಿದು ಸೆಮಿಫೈನಲ್ ಪ್ರವೇಶಿಸಿದ ನ್ಯೂಜಿಲ್ಯಾಂಡ್

ರಚಿನ್ ರವೀಂದ್ರ ಅವರ ಆಕರ್ಷಕ ಶತಕದ ನೆರವಿನಿಂದ ಐಸಿಸಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಬಾಂಗ್ಲಾದೇಶದ ವಿರುದ್ಧ ನ್ಯೂಜಿಲೆಂಡ್ 5 ವಿಕೆಟ್‌ಗಳ ಜಯ ಸಾಧಿಸಿದೆ. ನ್ಯೂಜಿಲೆಂಡ್ ಜಯದೊಂದಿಗೆ ಟೂರ್ನಿಯಿಂದಲೇ ಬಾಂಗ್ಲಾದೇಶ ಮತ್ತು ಅತಿಥೇಯ ಪಾಕಿಸ್ತಾನ ನಿರ್ಗಮಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಬಾಂಗ್ಲಾದೇಶ 50 ಓವರ್‌ಗಳಲ್ಲಿ 236 ರನ್ ಗಳಿಸಿತು. ಸುಲಭ ಸವಾಲನ್ನು ಪಡೆದ ನ್ಯೂಜಿಲೆಂಡ್ ಆರಂಭದಲ್ಲೇ ವಿಕೆಟ್ ಕಳೆದುಕೊಂಡರೂ ಅಂತಿಮವಾಗಿ 46.1 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 240 ರನ್ ಹೊಡೆದು ಸೆಮಿಫೈನಲ್ ಪ್ರವೇಶಿಸಿತು. ಇಂದಿನ ಪಂದ್ಯ ಬಾಂಗ್ಲಾದೇಶ ಮತ್ತು ಪಾಕಿಸ್ತಾನಕ್ಕೆ ನಿರ್ಣಾಯಕವಾಗಿತ್ತು.

ಇಂದಿನ ಪಂದ್ಯದಲ್ಲಿ ಬಾಂಗ್ಲಾದೇಶ ಗೆದ್ದು, ನ್ಯೂಜಿಲೆಂಡ್ ವಿರುದ್ಧದ ಪಂದ್ಯದಲ್ಲಿ ಭಾರತ ಜಯಗಳಿಸಿ ಬಾಂಗ್ಲಾ ವಿರುದ್ಧ ಪಾಕ್ ಗೆದ್ದಿದ್ದರೆ ರನ್ ರೇಟ್ ಆಧಾರದಲ್ಲಿ ತಂಡಗಳು ಸೆಮಿಫೈನಲ್ ಪ್ರವೇಶಿಸಬೇಕಿತ್ತು.

ಆದರೆ ಈಗ ಬಾಂಗ್ಲಾ ಸೋಲುವ ಮೂಲಕ ನ್ಯೂಜಿಲೆಂಡ್ ಮತ್ತು ಭಾರತ ಅಧಿಕೃತವಾಗಿ ಸೆಮಿಫೈನಲ್ ಪ್ರವೇಶಿಸಿವೆ. ನ್ಯೂಜಿಲೆಂಡ್ ಪರ ಡಿವೋನ್ ಕಾನ್ವೆ 45 ಎಸೆತಗಳಲ್ಲಿ 6 ಬೌಂಡರಿ ನೆರವಿಂದ 30 ರನ್, ರಚಿನ್ ರವೀಂದ್ರ 105 ಎಸೆತಗಳಲ್ಲಿ 1 ಸಿಕ್ಸರ್, 12 ಬೌಂಡರಿ ನೆರವಿನಿಂದ 112 ರನ್ ಹೊಡೆದರು. ಟಾಮ್ ಲ್ಯಾಥಮ್ 76 ಎಸೆತಗಳಲ್ಲಿ 55 ರನ್ ಹೊಡೆದರು. ಬಾಂಗ್ಲಾ ಪರ ತಸ್ಕಿನ್ ಅಹ್ಮದ್, ನಹಿದ್ ರಾಣಾ, ಮುಸ್ತಾಫಿಜುರ್ ರೆಹಮಾನ್, ರಿಷದ್ ಹೊಸ್ಸೈನ್ ತಲಾ ಒಂದೊಂದು ವಿಕೆಟ್ ಉರುಳಿಸಿದರು.

ಮೊದಲು ಬ್ಯಾಟ್ ಮಾಡಿದ ಬಾಂಗ್ಲಾ ಪರ ತಾಂಜಿದ್ ಹಸನ್ 24 ಎಸೆತಗಳಲ್ಲಿ 2 ಸಿಕ್ಸರ್, 1 ಬೌಂಡರಿ ನೆರವಿನಿಂದ 24 ರನ್, ನಜ್ಮುಲ್ ಹೊಸೇನ್ 110 ಎಸೆತಗಳಲ್ಲಿ 9 ಬೌಂಡರಿಗಳ ನೆರವಿನಿಂದ 77 ರನ್, ಜಾಕರ್ ಅಲಿ 55 ಎಸೆತಗಳಲ್ಲಿ 1 ಸಿಕ್ಸರ್ 3 ಬೌಂಡರಿ ನೆರವಿನಿಂದ 45 ರನ್, ರಿಷದ್ ಹುಸೇನ್ 25 ಎಸೆತಗಳಲ್ಲಿ 1 ಸಿಕ್ಸರ್ ಹಾಗೂ 2 ಬೌಂಡರಿ ನೆರವಿನಿಂದ 26 ರನ್ ಕಲೆ ಹಾಕಿದರು. ನ್ಯೂಜಿಲೆಂಡ್ ಪರ ಮೈಕೆಲ್ ಬ್ರೇಸ್‌ವೆಲ್ 4 ವಿಕೆಟ್, ವಿಲ್ ಒ'ರೂರ್ಕ್ 2 ವಿಕೆಟ್, ಮ್ಯಾಟ್ ಹೆನ್ರಿ ಮತ್ತು ಕೈಲ್ ಜೇಮಿಸನ್ ತಲಾ ಒಂದೊಂದು ವಿಕೆಟ್ ಪಡೆದರು.

### ಕನ್ನಡಿಗ ರಚಿನ್ ರವೀಂದ್ರ ಸೆಂಚುರಿ

**ಡೆವೋನ್ ಕಾನ್ವೆ ಮತ್ತು ಕರ್ನಾಟಕದ ಮೂಲದ ರಚಿನ್ ರವೀಂದ್ರ ಅವರು 3ನೇ ವಿಕೆಟ್‌ಗೆ 58 ರನ್‌ಗಳ ಜೊತೆಯಾಟವಾಡಿದ್ದು ತಂಡವನ್ನು ಆರಂಭಿಕ ಕುಸಿತದಿಂದ ಪಾರು ಮಾಡಿತು. ಆದರೆ ಕಾನ್ವೆ(30) ಅವರ ವಿಕೆಟ್ ಅನ್ನು ಕ್ಲೀನ್ ಬೌಲ್ಡ್ ಮಾಡಿದ ವೇಗಿ ಮುಸ್ತಫಿಝುರ್ ರಹೀಮ್ ಅವರು ಬಾಂಗ್ಲಾ ಪಾಳೆಯದಲ್ಲಿ ಮತ್ತೆ ಗೆಲುವಿನ ಆಸೆ ಚಿಗುರಿಸಿದ್ದರು. ಆಧರೆ ರಚಿನ್ ರವೀಂದ್ರ ಮತ್ತು ಟಾವ್ ಲಾಥಮ್ ಅವರು ಅದಕ್ಕೆ ಅವಕಾಶ ನೀಡಲಿಲ್ಲ. ಇವರಿಬ್ಬರು 4ನೇ ವಿಕೆಟ್‌ಗೆ ಮಹತ್ವದ 129 ರನ್‌ಗಳ ಜೊತೆಯಾಟವಾಡಿದರು. ಹೀಗಾಗಿ ತಂಡ 38 ಓವರ್‌ಗಳಲ್ಲಿ 200ರ ಗಡಿ ದಾಟಿತು. ರಚಿನ್ ರವೀಂದ್ರ ಭರ್ಜರಿ ಶತಕ ಬಾರಿಸಿದರೆ, ಟಾಮ್ ಲಾಥಮ್ ಅವರು ಅರ್ಧಶತಕ ಗಳಿಸಿದರು.**

## ಕೊಹ್ಲಿಗೆ ಅಲ್ಲ ಗೆಲುವಿನ ಶ್ರೇಯಸ್ಸು

### ಇವರಿಗೆ ಸಲ್ಲುತ್ತೆ ಎಂದ ರೋಹಿತ್ ಶರ್ಮಾ



ಪಾಕಿಸ್ತಾನ್ ವಿರುದ್ಧದ ಹೈವೋಲ್ಟೇಜ್ ಮ್ಯಾಚ್‌ನಲ್ಲಿ ವಿರಾಟ್ ಕೊಹ್ಲಿ ಪವರ್‌ಫುಲ್ ಪ್ರದರ್ಶನ ನೀಡಿದ್ದಾರೆ. ದುಬೈನಲ್ಲಿ ನಡೆದ ಈ ಪಂದ್ಯದಲ್ಲಿ 111 ಎಸೆತಗಳನ್ನು ಎದುರಿಸಿದ ಕಿಂಗ್ ಕೊಹ್ಲಿ ಭರ್ಜರಿ ಶತಕ ಸಿಡಿಸಿದ್ದಾರೆ. ಈ ಶತಕದೊಂದಿಗೆ ಟೀಮ್ ಇಂಡಿಯಾ ಈ ಪಂದ್ಯವನ್ನು 6 ವಿಕೆಟ್‌ಗಳಿಂದ ಗೆದ್ದುಕೊಂಡಿದೆ.

2025ರ ಐಸಿಸಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಟೀಮ್ ಇಂಡಿಯಾ ಸತತ ಎರಡನೇ ಗೆಲುವು ದಾಖಲಿಸಿದೆ. ನವೆಂಬರ್ 20 ರಂದು ಬಾಂಗ್ಲಾದೇಶವನ್ನು ಸೋಲಿಸುವ ಮೂಲಕ ಗೆಲುವಿನ ಅಭಿಯಾನ ಆರಂಭಿಸಿದ್ದ ಭಾರತ ತಂಡ, ಇದೀಗ ಪಾಕಿಸ್ತಾನ್ ತಂಡವನ್ನು ಸಹ ಬಗ್ಗು ಬಡಿದಿದೆ. ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಪಾಕ್ ನೀಡಿದ 242 ರನ್‌ಗಳ ಗುರಿಯನ್ನು ಟೀಮ್ ಇಂಡಿಯಾ 42.3 ಎಸೆತಗಳಲ್ಲಿ ಬೆನ್ನತ್ತಿ 6 ವಿಕೆಟ್‌ಗಳ ಜಯ ಸಾಧಿಸಿದೆ.

ಈ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಮಿಂಚಿದ್ದು ವಿರಾಟ್ ಕೊಹ್ಲಿ. ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಕೊಹ್ಲಿ ಅಜೇಯ ಶತಕದೊಂದಿಗೆ ತಂಡವನ್ನು ಗೆಲುವಿನ ದಡ ಸೇರಿಸಿದರು. ಈ ಗೆಲುವಿನ ಬಳಿಕ ಮಾತನಾಡಿದ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಜಯದ ಶ್ರೇಯಸ್ಸನ್ನು ಮೂವರು ಆಟಗಾರರಿಗೆ ಸಲ್ಲಿಸಿದ್ದಾರೆ.

ಈ ಟೂರ್ನಿಯಲ್ಲಿ ನಾವು ಅದ್ಭುತ ಆರಂಭವನ್ನು ಪಡೆದುಕೊಂಡಿದ್ದೇವೆ. ಅದರಲ್ಲೂ ಪಾಕಿಸ್ತಾನ್ ವಿರುದ್ಧ ನಮ್ಮ ಬೌಲರ್‌ಗಳು ಅತ್ಯುತ್ತಮ ಪ್ರದರ್ಶನ ನೀಡಿದ್ದಾರೆ. ಮಧ್ಯಮ ಓವರ್‌ಗಳ ವೇಳೆ ಅಕ್ಷರ್ ಪಟೇಲ್, ಕುಲ್ದೀಪ್ ಯಾದವ್ ಮತ್ತು ರವೀಂದ್ರ ಜಡೇಜಾ ಅತ್ಯುತ್ತಮ ದಾಳಿ ಸಂಘಟಿಸಿದ್ದಾರೆ.

ಹೀಗಾಗಿ ಈ ಗೆಲುವಿನ ಶ್ರೇಯಸ್ಸು ಅವರಿಗೆ ಸಲ್ಲಬೇಕು ಎಂದು ರೋಹಿತ್ ಶರ್ಮಾ ಹೇಳಿದ್ದಾರೆ. ಅಲ್ಲದೆ ಮೊಹಮ್ಮದ್ ಶಮಿ, ಹರ್ಷಿತ್ ರಾಣಾ ಹಾಗೂ ಹಾರ್ದಿಕ್ ಪಾಂಡ್ಯ ಕೂಡ ಆರಂಭದಲ್ಲಿ ಉತ್ತಮ ದಾಳಿ ಸಂಘಟಿಸುವಲ್ಲಿ ಸಫಲರಾಗಿದ್ದರು. ಹೀಗಾಗಿ ಅವರ ಪ್ರದರ್ಶನವನ್ನು ನಾನು ಇಲ್ಲಿ ಮರೆಯುವಂತಿಲ್ಲ. ಹೀಗಾಗಿ ಈ ಪಂದ್ಯದ ಗೆಲುವಿನ ಶ್ರೇಯಸ್ಸು ಎಲ್ಲಾ ಬೌಲರ್‌ಗಳಿಗೆ ನೀಡುತ್ತೇನೆ ಎಂದು ಟೀಮ್ ಇಂಡಿಯಾ ನಾಯಕ ಹೇಳಿದ್ದಾರೆ.

ಇದೇ ವೇಳೆ ವಿರಾಟ್ ಕೊಹ್ಲಿಯ ಭರ್ಜರಿ ಶತಕದ ಬಗ್ಗೆ ಮಾತನಾಡಿದ ಹಿಟ್‌ಮ್ಯಾನ್, ಅವರು ನಿಜವಾಗಿಯೂ ತಮ್ಮ ದೇಶಕ್ಕಾಗಿ ಆಡುವುದನ್ನು ಇಷ್ಟಪಡುತ್ತಾರೆ. ತಂಡಕ್ಕಾಗಿ ಸಂಪೂರ್ಣ ತೊಡಗಿಸಿಕೊಳ್ಳಲು, ಪಂದ್ಯ ಗೆದ್ದು ಕೊಡಲು ಬಯಸುತ್ತಾರೆ. ಕಳೆದ ಕೆಲವು ವರ್ಷಗಳಿಂದ ಅದನ್ನೇ ಮಾಡುತ್ತಿರುವುದು ನಾವು ನೋಡಿದ್ದೇವೆ. ಡ್ರೆಸ್ಸಿಂಗ್ ರೂಮ್‌ನಲ್ಲಿ ಕುಳಿತವರಿಗೆ, ಅವರ ಪ್ರದರ್ಶನ ಅಚ್ಚರಿಯೇನಲ್ಲ.

## ಕೊಹ್ಲಿ ಶತಕದ ಭರಾಟೆಯಲ್ಲಿ ಮರೆಯಾದ ಶ್ರೇಯಸ್ ಅಯ್ಯರ್ ದಾಖಲೆ

### ಅತಿ ಹೆಚ್ಚು 50 ಪ್ಲಸ್ ಸ್ಕೋರ್



ಚಾಂಪಿಯನ್ಸ್ ಟ್ರೋಫಿಯಲ್ಲಿ ಪಾಕಿಸ್ತಾನ ವಿರುದ್ಧದ ಪಂದ್ಯವನ್ನು ಟೀಂ ಇಂಡಿಯಾ ನಿರೀಕ್ಷಿಸಿದ ರೀತಿಯಲ್ಲಿ ಗೆದ್ದುಕೊಂಡಿದೆ. ಮಾಜಿ ನಾಯಕ ವಿರಾಟ್ ಕೊಹ್ಲಿ ದಾಖಲೆಯ ಶತಕ ಸಿಡಿಸುವುದರೊಂದಿಗೆ ತಂಡಕ್ಕೆ ಸುಲಭ ಜಯ ತಂದುಕೊಟ್ಟರು. ಇದೀಗ ಕಿಂಗ್ ಕೊಹ್ಲಿಯ ಶತಕದ ಬಗ್ಗೆಯೇ ಎಲ್ಲೆಡೆ ಮಾತನಾಡಲಾಗುತ್ತಿದೆ. ಆದರೆ ಕೊಹ್ಲಿ ಜೊತೆಗೆ ಗೆಲುವಿನ ಅರ್ಧಶತಕ ಸಿಡಿಸಿದ ಅಯ್ಯರ್ ಅವರ ದಾಖಲೆಯ ಬಗ್ಗೆ ಚರ್ಚೆಯೇ ಇಲ್ಲವಾಗಿದೆ.

ಪಾಕಿಸ್ತಾನ ವಿರುದ್ಧದ ಪಂದ್ಯದಲ್ಲಿ ನಾಲ್ಕನೇ ಕ್ರಮಾಂಕದಲ್ಲಿ ಬಂದ ಶ್ರೇಯಸ್ ಅಯ್ಯರ್ ಪಾಕಿಸ್ತಾನ ವಿರುದ್ಧವೂ ಅದ್ಭುತವಾಗಿ ಆಡಿ ಅರ್ಧಶತಕದ ಇನ್ನಿಂಗ್ಸ್‌ನೊಂದಿಗೆ ಹೊಸ ದಾಖಲೆಯನ್ನು ಸೃಷ್ಟಿಸಿದರು. ಪಾಕ್ ವಿರುದ್ಧದ ಅರ್ಧಶತಕದೊಂದಿಗೆ ಇದೀಗ ಅಯ್ಯರ್ 62 ಏಕದಿನ ಇನ್ನಿಂಗ್ಸ್‌ಗಳ ನಂತರ ಅತಿ ಹೆಚ್ಚು 50 ಪ್ಲಸ್ ಸ್ಕೋರ್‌ಗಳನ್ನು ಗಳಿಸಿದ ಆರಂಭಿಕರಲ್ಲದ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದಾರೆ.

ಅಯ್ಯರ್ ಪಾಕಿಸ್ತಾನ ವಿರುದ್ಧ 67 ಎಸೆತಗಳನ್ನು ಎದುರಿಸಿ 56 ರನ್ ಗಳಿಸಿದರು. ಈ ಇನ್ನಿಂಗ್ಸ್‌ನಲ್ಲಿ 1 ಸಿಕ್ಸರ್ ಮತ್ತು 5 ಬೌಂಡರಿಗಳು ಸೇರಿದ್ದವು. ಈ ಅದ್ಭುತ ಇನ್ನಿಂಗ್ಸ್ ನಂತರ, ಅಯ್ಯರ್ 62 ಏಕದಿನ ಇನ್ನಿಂಗ್ಸ್‌ಗಳಲ್ಲಿ ಅತಿ ಹೆಚ್ಚು 50+ ಸ್ಕೋರ್‌ಗಳನ್ನು ಗಳಿಸಿದ ಬ್ಯಾಟ್ಸ್‌ಮನ್‌ಗಳ ಪಟ್ಟಿಯಲ್ಲಿ (ಆರಂಭಿಕರಲ್ಲದವರು) ಅಗ್ರಸ್ಥಾನವನ್ನು ಅಲಂಕರಿಸಿದ್ದಾರೆ. ಪಾಕಿಸ್ತಾನ ವಿರುದ್ಧ ಅರ್ಧಶತಕ ದಾಖಲಿಸುವ ಮೂಲಕ ಅಯ್ಯರ್, ನ್ಯೂಜಿಲೆಂಡ್ ಬ್ಯಾಟ್ಸ್‌ಮನ್ ಕೇನ್ ವಿಲಿಯಮ್ಸನ್, ವೆಸ್ಟ್ ಇಂಡೀಸ್‌ನ ವಿವಿಯನ್ ರಿಚರ್ಡ್ಸ್ ಮತ್ತು ಇಂಗ್ಲೆಂಡ್‌ನ ಕೆವಿನ್ ಪೀಟರ್ಸನ್ ಅವರ ದಾಖಲೆಯನ್ನು ಹಿಂದಿಕ್ಕಿದ್ದಾರೆ. ಈ ಮೂವರು ಬ್ಯಾಟ್ಸ್‌ಮನ್‌ಗಳು 62 ಏಕದಿನ ಇನ್ನಿಂಗ್ಸ್‌ಗಳಲ್ಲಿ 22 ಬಾರಿ 50+ ಸ್ಕೋರ್ ಕಲೆಹಾಕಿದ್ದರು.

ಅಯ್ಯರ್ ಟೀಂ ಇಂಡಿಯಾ ಪರ ಮಧ್ಯಮ ಕ್ರಮಾಂಕದಲ್ಲಿ ನಿರಂತರವಾಗಿ ಕಲೆಹಾಕುತ್ತಿದ್ದಾರೆ. ಬಾಂಗ್ಲಾದೇಶ ವಿರುದ್ಧದ ಚಾಂಪಿಯನ್ಸ್ ಟ್ರೋಫಿಯ ಮೊದಲ ಪಂದ್ಯದಲ್ಲಿ 15 ರನ್‌ಗಳಿಗೆ ಔಟಾಗಿದ್ದ ಅಯ್ಯರ್, ಅದಕ್ಕೂ ಮೊದಲು ನಡೆದಿದ್ದ ಇಂಗ್ಲೆಂಡ್ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಅಮೋಘ ಪ್ರದರ್ಶನ ನೀಡಿದ್ದರು. ಮೊದಲ ಏಕದಿನ ಪಂದ್ಯದಲ್ಲಿ 59 ರನ್, ಎರಡನೇ ಪಂದ್ಯದಲ್ಲಿ 44 ಮತ್ತು ಮೂರನೇ ಪಂದ್ಯದಲ್ಲಿ 78 ರನ್ ಗಳಿಸಿದ್ದರು. 30 ವರ್ಷದ ಅಯ್ಯರ್ ಇದುವರೆಗೆ 67 ಏಕದಿನ ಪಂದ್ಯಗಳ 62 ಇನ್ನಿಂಗ್ಸ್‌ಗಳಲ್ಲಿ 2673 ರನ್ ಗಳಿಸಿದ್ದಾರೆ.



## ಭಯ ಬಿದ್ದೇ ಅತ್ಯಂತ ಕೆಟ್ಟ ದಾಖಲೆಗೆ ಕೊರಳೊಡ್ಡಿದ ರಿಝ್ವಾನ್

ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಚಾಂಪಿಯನ್ಸ್ ಟ್ರೋಫಿಯ 5ನೇ ಪಂದ್ಯದಲ್ಲಿ ಭಾರತ ತಂಡ ಗೆಲುವು ದಾಖಲಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ್ ತಂಡ 241 ರನ್ ಕಲೆಹಾಕಿದರೆ. ಈ ಗುರಿಯನ್ನು ಟೀಮ್ ಇಂಡಿಯಾ 42.3 ಓವರ್‌ಗಳಲ್ಲಿ ಚೇಸ್ ಮಾಡಿದೆ. ಇನ್ನು ಈ ಪಂದ್ಯದಲ್ಲಿ ನಿಧಾನಗತಿಯಲ್ಲಿ ಬ್ಯಾಟಿಂಗ್ ಮಾಡಿ ಪಾಕ್ ತಂಡದ ನಾಯಕ ಮೊಹಮ್ಮದ್ ರಿಝ್ವಾನ್ ಹೀನಾಯ ದಾಖಲೆಯೊಂದನ್ನು ನಿರ್ಮಿಸಿದ್ದಾರೆ. ಭಾರತ ಮತ್ತು ಪಾಕಿಸ್ತಾನ್ ನಡುವಣ ಪಂದ್ಯವು ಹಲವು ದಾಖಲೆಗಳಿಗೆ ಸಾಕ್ಷಿಯಾಗಿದೆ. ಈ ರೆಕಾರ್ಡ್‌ಗಳ ನಡುವೆ ಪಾಕಿಸ್ತಾನ್ ತಂಡದ ನಾಯಕ ಮೊಹಮ್ಮದ್ ರಿಝ್ವಾನ್ ಅನಗತ್ಯ ದಾಖಲೆಯೊಂದನ್ನು ನಿರ್ಮಿಸಿದ್ದಾರೆ. ಅದು ಸಹ ನಿಧಾನಗತಿಯ ಬ್ಯಾಟಿಂಗ್‌ನೊಂದಿಗೆ..! ದುಬೈನ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಪಾಕಿಸ್ತಾನ್ ತಂಡದ ನಾಯಕ ಮೊಹಮ್ಮದ್ ರಿಝ್ವಾನ್ ಬ್ಯಾಟಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಪಾಕ್ ತಂಡವು 47 ರನ್‌ಗಳಿಗೆ ಆರಂಭಿಕರಿಬ್ಬರ ವಿಕೆಟ್ ಕಳೆದುಕೊಂಡಿತು. ಈ ಹಂತದಲ್ಲಿ ಕಣಕ್ಕಿಳಿದ ಮೊಹಮ್ಮದ್ ರಿಝ್ವಾನ್ ಟೀಮ್ ಇಂಡಿಯಾ ಬೌಲರ್‌ಗಳನ್ನು ಎದುರಿಸಲು ತಡಕಾಡಿದರು. ಅದರಲ್ಲೂ ಕೆಲ ಹಂತದಲ್ಲಿ ವಿಕೆಟ್ ಕಳೆದುಕೊಳ್ಳುವ ಭಯ ಭೀತಿಯಲ್ಲೇ ಬ್ಯಾಟಿಂಗ್ ಮಾಡುತ್ತಿದ್ದರು. ಪರಿಣಾಮ 46 ರನ್‌ಗಳಿಸಲು ಮೊಹಮ್ಮದ್ ರಿಝ್ವಾನ್ ಬರೋಬ್ಬರಿ 77 ಎಸೆತಗಳನ್ನು ತೆಗೆದುಕೊಂಡಿದ್ದಾರೆ. 2004 ರಲ್ಲಿ ನಡೆದ ನ್ಯೂಝಿಲೆಂಡ್ ವಿರುದ್ಧದ ಪಂದ್ಯದಲ್ಲಿ ಪಾಕ್ ತಂಡದ ವಿಕೆಟ್ ಕೀಪರ್ ಬ್ಯಾಟರ್ ಮೊಯೀನ್ ಖಾನ್ 78 ಎಸೆತಗಳಲ್ಲಿ 52 ರನ್ ಮಾತ್ರ ಬಾರಿಸಿದ್ದರು. ಇದೀಗ ಭಾರತದ ವಿರುದ್ಧ ಮೊಹಮ್ಮದ್ ರಿಝ್ವಾನ್ 59.74ರ ಸ್ಟ್ರೈಕ್ ರೇಟ್‌ನಲ್ಲಿ ಕೇವಲ 46 ರನ್ ಬಾರಿಸಿ ಅತ್ಯಂತ ಕೆಟ್ಟ ದಾಖಲೆಯನ್ನು ತಮ್ಮದಾಗಿಸಿಕೊಂಡಿದ್ದಾರೆ. ಇದರೊಂದಿಗೆ ಈ ಶತಮಾನದಲ್ಲಿ ಕನಿಷ್ಠ 75 ಎಸೆತಗಳನ್ನು ಎದುರಿಸಿ ಅತ್ಯಂತ ನಿಧಾನಗತಿಯ ಇನ್ನಿಂಗ್ಸ್ ಆಡಿದ ಪಾಕಿಸ್ತಾನ್ ತಂಡದ ವಿಕೆಟ್ ಕೀಪರ್ ಬ್ಯಾಟರ್ ಎಂಬ ಅನಗತ್ಯ ದಾಖಲೆಯೊಂದು ರಿಝ್ವಾನ್ ಪಾಲಾಯಿತು.

ಇದಕ್ಕೂ ಮುನ್ನ ಇಂತಹದೊಂದು ಕೆಟ್ಟ ದಾಖಲೆ ಮೊಯೀನ್ ಖಾನ್ ಹೆಸರಿನಲ್ಲಿತ್ತು. ಇನ್ನು ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ್ ತಂಡವು 49.4 ಓವರ್‌ಗಳಲ್ಲಿ 241 ರನ್‌ಗಳಿಸಿ ಆಲೌಟ್ ಆಯಿತು.

## ಸಪ್ತಪದಿ ತುಳಿದ ವೈಭವಿ ಶಾಂಡಿಲ್ಯ!

### ತಮ್ಮದು ಪ್ರೇಮವಿವಾಹ



ಯೋಗರಾಜ್ ಭಟ್ ನಿರ್ದೇಶನದ ಗಾಳಿಪಟ 2 ಚಿತ್ರದ ಮೂಲಕ ಕನ್ನಡಿಗರ ಮನೆ ಮಾತಾಗಿದ್ದ, ಇತ್ತೀಚೆಗಷ್ಟೇ ಧ್ರುವ ಸರ್ಜಾ ಅಭಿನಯದ ಮಾರ್ಟಿನ್ ಚಿತ್ರದಲ್ಲಿ ನಟಿಸಿದ್ದ ವೈಭವಿ ಶಾಂಡಿಲ್ಯ ಇದೀಗ ಸದ್ದಿಲ್ಲದೆ ಹಸೆಮಣೆ ಏರಿದ್ದಾರೆ. ಕೊಲ್ಲಾಪುರದಲ್ಲಿ ನಡೆದ ಸಮಾರಂಭದಲ್ಲಿ ತಮ್ಮ ಗೆಳೆಯ ಹರ್ಷವರ್ಧನ್ ಜೆ ಪಾಟೀಲ್ ಅವರೊಂದಿಗೆ ಸಪ್ತಪತಿ ತುಳಿದಿದ್ದಾರೆ. ಈ ಕುರಿತು ಶನಿವಾರ ತಮ್ಮ ಇನ್‌ಸ್ಟಾಗ್ರಾಂನಲ್ಲಿ ಪೋಸ್ಟ್ ಹಂಚಿಕೊಂಡಿರುವ ವೈಭವಿ, 'ನಮ್ಮ ಕುಟುಂಬ ಮತ್ತು ಸ್ನೇಹಿತರ ಆಶೀರ್ವಾದದೊಂದಿಗೆ, ಹರ್ಷವರ್ಧನ್ ಮತ್ತು ನಾನು ಪ್ರೀತಿ ಮತ್ತು ಒಗ್ಗಟ್ಟಿನ ಈ ಸುಂದರ ಪ್ರಯಾಣವನ್ನು ಪ್ರಾರಂಭಿಸಿದ್ದೇವೆ. ಎಲ್ಲರ ಪ್ರೀತಿ ಮತ್ತು ಬೆಂಬಲಕ್ಕೆ ಕೃತಜ್ಞರಾಗಿರುತ್ತೇನೆ. ಜೀವಮಾನದ ಸಂತೋಷ ಇಲ್ಲಿದೆ! ಎಂದು ಬರೆದುಕೊಂಡಿದ್ದಾರೆ.

ಸುದ್ದಿಸಂಸ್ಥೆ ಐಎಎನ್‌ಎಸ್ ಜೊತೆ ಮಾತನಾಡಿದ ವೈಭವಿ ಈ ಸುದ್ದಿಯನ್ನು ಖಚಿತಪಡಿಸಿದ್ದಾರೆ. 'ಹೌದು, ನಾವು ಫೆಬ್ರವರಿ 21 ರ ಶುಕ್ರವಾರದಂದು ಕೊಲ್ಲಾಪುರದಲ್ಲಿ ಮದುವೆಯಾದೆವು. ಕೊಲ್ಲಾಪುರದಲ್ಲಿ ನಮಗೆ ಆತ್ಮೀಯ ಸ್ನೇಹಿತರು ಮತ್ತು ಕುಟುಂಬವಿದೆ. ಹರ್ಷವರ್ಧನ್ ಬಾಲಿವುಡ್‌ನಲ್ಲಿ ಛಾಯಾಗ್ರಾಹಕರಾಗಿದ್ದಾರೆ. ತಮ್ಮದು ಪ್ರೇಮವಿವಾಹವಾಗಿದ್ದು, ಇಬ್ಬರೂ ಚಿತ್ರರಂಗದವರಾಗಿದ್ದರಿಂದ ಪ್ರೀತಿಯಲ್ಲಿ ಮುಳುಗಿದ್ದೇವೆ. ತಮ್ಮ ಮದುವೆಗೆ ಆಪ್ತರು ಮತ್ತು ಕುಟುಂಬ ಸದಸ್ಯರು ಮಾತ್ರ ಹಾಜರಾಗಿದ್ದರು' ಎಂದು ಹೇಳಿದರು. ಹರ್ಷವರ್ಧನ್ ಕೂಡ ಸಾಮಾಜಿಕ ಮಾಧ್ಯಮದಲ್ಲಿ ಮದುವೆಯ ವಿಡಿಯೋ ತುಣುಕುಗಳನ್ನು ಪೋಸ್ಟ್ ಮಾಡಿದ್ದಾರೆ. ವೈಭವಿ ಶಾಂಡಿಲ್ಯ ಅವರು ದಕ್ಷಿಣ ಭಾರತದ ತಮಿಳು, ತೆಲುಗು ಮತ್ತು ಕನ್ನಡ ಚಿತ್ರಗಳಲ್ಲಿ ಕೆಲಸ ಮಾಡಿದ್ದಾರೆ. 'ಜಾನಿವಾ' ಚಿತ್ರದ ಮೂಲಕ ಮರಾಠಿ ಚಿತ್ರರಂಗಕ್ಕೂ ಪದಾರ್ಪಣೆ ಮಾಡಿದರು.

## ಗೋವಾದಲ್ಲಿ ಪತಿಯ ಜೊತೆ ಭರ್ಜರಿ ಪಾರ್ಟಿ ಮಾಡಿದ ಕೀರ್ತಿ ಸುರೇಶ್

### ಬಾಲ್ಯದ ಗೆಳೆಯ ಆಂಟೋನಿ

ಕೀರ್ತಿ ಸುರೇಶ್ ಅವರು ಗೋವಾದಲ್ಲಿ ತಮ್ಮ ಪತಿ ಆಂಟನಿಯೊಂದಿಗೆ ಪಾರ್ಟಿಯನ್ನು ಆಚರಿಸಿದ್ದಾರೆ. ಈ ಚಿತ್ರಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿವೆ. ವಿವಾಹದ ನಂತರ ಅವರು 'ಬೇಬಿ ಜಾನ್' ಚಿತ್ರದ ಪ್ರಚಾರದಲ್ಲಿ ತೊಡಗಿದ್ದರು. ಈಗ ಅವರು ಕುಟುಂಬ ಮತ್ತು ಚಲನಚಿತ್ರ ಕೆಲಸಗಳಲ್ಲಿ ನಿರತರಾಗಿದ್ದಾರೆ. ಗೋವಾದಲ್ಲಿ ಕೀರ್ತಿ ಸುರೇಶ್ ಅವರು ಪತಿ ಆಯಂಟೋನಿ ಜೊತೆ ಪಾರ್ಟಿ ಮಾಡಿದ್ದಾರೆ. ಈ ಸಂದರ್ಭದ ಫೋಟೋಗಳನ್ನು ಅವರು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಈ ಫೋಟೋಗೆ ಲಕ್ಷಾಂತರ ಲೈಕ್ಸ್ ಸಿಕ್ಕಿದೆ. ಗೋವಾದಲ್ಲಿ ಕೀರ್ತಿ ಸುರೇಶ್ ಅವರು ಪತಿ ಆಂಟೋನಿ ಜೊತೆ ಪಾರ್ಟಿ ಮಾಡಿದ್ದಾರೆ. ಈ ಸಂದರ್ಭದ ಫೋಟೋಗಳನ್ನು ಅವರು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಈ ಫೋಟೋಗೆ ಲಕ್ಷಾಂತರ ಲೈಕ್ಸ್ ಸಿಕ್ಕಿದೆ. ಕೀರ್ತಿ ಸುರೇಶ್ ಅವರು ಇತ್ತೀಚೆಗೆ ವಿವಾಹ ಆಗಿದ್ದಾರೆ. ಅವರ ಬಾಲ್ಯದ ಗೆಳೆಯ ಆಂಟೋನಿ ಅವರನ್ನು ಕುಟುಂಬದವರ ಜೊತೆ ಮದುವೆ ಆದರು.

ವಿವಾಹದ ಬಳಿಕ ಅವರು ಪತಿಯ ಜೊತೆ ಹಾಯಾಗಿ ಸಮಯ ಕಳೆಯುತ್ತಾ ಇದ್ದಾರೆ. ಕೀರ್ತಿ ಸುರೇಶ್ ಗೋವಾದಲ್ಲಿ ಪತಿಯ ಜೊತೆ ಪಾರ್ಟಿ ಮಾಡಿದ್ದಾರೆ. ಈ ಪಾರ್ಟಿ ಸಾಕಷ್ಟು ಕಲರ್‌ಫುಲ್ ಆಗಿತ್ತು. ಕೀರ್ತಿ ಸುರೇಶ್ ಅವರು ಸಖತ್ ಗ್ಲಾಮರಸ್ ಆಗಿ ಮಿಂಚಿದ್ದಾರೆ. ಈ ಫೋಟೋನ ಫ್ಯಾನ್ಸ್ ಮೆಚ್ಚಿಕೊಂಡಿದ್ದಾರೆ. ಕೀರ್ತಿ ಸುರೇಶ್ ಅವರು ವಿವಾಹದ ಬಳಿಕ 'ಬೇಬಿ ಜಾನ್' ಸಿನಿಮಾ ಪ್ರಚಾರದಲ್ಲಿ ತೊಡಗಿಕೊಂಡರು. ಈಗ ಅವರು ಹಾಯಾಗಿ ಕುಟುಂಬದ ಜೊತೆ ಸಮಯ ಕಳೆಯುತ್ತಾ ಇದ್ದಾರೆ. ಇದರ ಜೊತೆಗೆ ಸಿನಿಮಾ ಕೆಲಸಗಳನ್ನು ಕೂಡ ಮಾಡುತ್ತಿದ್ದಾರೆ. ಕೀರ್ತಿ ಸುರೇಶ್ ನಟನೆಯ 'ಬೇಬಿ ಜಾನ್' ಸಿನಿಮಾ ಅಂದುಕೊಂಡ ರೀತಿಯಲ್ಲಿ ಗೆಲುವು ಕಂಡಿಲ್ಲ. ಈ ವಿಚಾರದಲ್ಲಿ ಅವರ ಅಭಿಮಾನಿಗಳಿಗೆ ಬೇಸರ ಇದೆ. ಅವರು ಸದ್ಯ ಎರಡು ತಮಿಳು ಸಿನಿಮಾ ಕೆಲಸಗಳಲ್ಲಿ ತೊಡಗಿಕೊಂಡಿದ್ದಾರೆ.



## ಇನೋಸೆಂಟ್‌ನಲ್ಲಿ ಟಗರು ಪುಟ್ಟಿ



ಹೈಕೋರ್ಟ್‌ನಲ್ಲಿ ವಕೀಲರಾಗಿದ್ದ ವಿಶ್ವಾಸ್ ಶಂಕರ್ ಅವರು ಇದೀಗ ನಟನೆಗೆ ಇಳಿದಿದ್ದಾರೆ. ವಕೀಲ ವೃತ್ತಿಯಿಂದ ಹಿಂದೆ ಸರಿದು ನಟನೆ ಬಗೆಗಿನ ತಮ್ಮ ಉತ್ಸಾಹದ ಕಡೆಗೆ ನಡೆಯುವ ದಿಟ್ಟ ನಿರ್ಧಾರವನ್ನು ತೆಗೆದುಕೊಂಡಿದ್ದಾರೆ. ಹಿಂದಿ ನಟ ವಿಜಯ್ ವರ್ಮಾ ಅವರನ್ನು ಹೋಲುವ ವಿಶ್ವಾಸ್ ಶಂಕರ್ ಇದೀಗ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡಲು ಸಜ್ಜಾಗಿದ್ದಾರೆ. ಸಹನಾ ಮೂರ್ತಿ ನಿರ್ದೇಶನದ ಇನೋಸೆಂಟ್ ಚಿತ್ರದಲ್ಲಿ ನಾಯಕನಾಗಿ ನಟಿಸುತ್ತಿದ್ದಾರೆ. ರೋಸ್, ಲೀಡರ್ ಮತ್ತು ತ್ರಿವಿಕ್ರಮದಂತಹ ಚಿತ್ರಗಳಿಗೆ ಹೆಸರುವಾಸಿಯಾಗಿರುವ ಸಹನಾ ಇದೀಗ ತಮ್ಮ ನಾಲ್ಕನೇ ನಿರ್ದೇಶನಕ್ಕೆ ಸಜ್ಜಾಗಲಿದ್ದಾರೆ. ಮುಂದಿನ ತಿಂಗಳು ಚಿತ್ರೀಕರಣ ಆರಂಭಿಸಲು ಚಿತ್ರತಂಡ ಯೋಜನೆ ರೂಪಿಸಿದೆ. ಹೈಕೋರ್ಟ್‌ನಲ್ಲಿ ವಕೀಲರಾಗಿದ್ದ ವಿಶ್ವಾಸ್ ಶಂಕರ್ ಅವರು ಇದೀಗ ನಟನೆಗೆ ಇಳಿದಿದ್ದಾರೆ. ವಕೀಲ ವೃತ್ತಿಯಿಂದ ಹಿಂದೆ ಸರಿದು ನಟನೆ ಬಗೆಗಿನ ತಮ್ಮ ಉತ್ಸಾಹದ ಕಡೆಗೆ ನಡೆಯುವ ದಿಟ್ಟ ನಿರ್ಧಾರವನ್ನು ತೆಗೆದುಕೊಂಡಿದ್ದಾರೆ. ನಿವೃತ್ತ ಐಎಎಸ್ ಅಧಿಕಾರಿ ಶಂಕರ್ ಅವರ ಪುತ್ರ, ವಿಶ್ವಾಸ್ ಕೇವಲ ನಟನೆಯತ್ತ ಗಮನ ಹರಿಸುತ್ತಿಲ್ಲ. ಬದಲಿಗೆ ಚಿತ್ರ ನಿರ್ಮಾಣದತ್ತಲೂ ಗಮನ ಹರಿಸಿದ್ದಾರೆ. ಅವರು ತಮ್ಮ ಸ್ವಂತ ನಿರ್ಮಾಣ ಸಂಸ್ಥೆಯಾದ ಕೈಂಡ್ ಬ್ರದರ್ ಫಿಲ್ಮ್ಸ್ ಮೂಲಕ ಇನೋಸೆಂಟ್‌ಗೆ ಬೆಂಬಲ ನೀಡಲಿದ್ದಾರೆ. ಚಿತ್ರಕ್ಕೆ ಸಂಗೀತ ಸಂಯೋಜನೆಯನ್ನು ಕೂಡ ಅವರೇ ಮಾಡಲಿದ್ದಾರೆ. ವಿಶ್ವಾಸ್ ಅವರು ತಮ್ಮದೇ ಆದ ಆಡಿಯೋ ಲೇಬಲ್ ವಿಶ್ವಾಸ್ ಮ್ಯೂಸಿಕ್ ಅನ್ನು ಪ್ರಾರಂಭಿಸಲು ತಯಾರಿ ನಡೆಸುತ್ತಿದ್ದಾರೆ.

ಇನೋಸೆಂಟ್ ಚಿತ್ರದಲ್ಲಿ ಟಗರು ಪುಟ್ಟಿ ಮಾನ್ವಿತಾ ಕಾಮತ್ ನಾಯಕಿಯಾಗಿ ನಟಿಸಲಿದ್ದಾರೆ. ಮತ್ತೋರ್ವ ನಾಯಕಿ ಸೇರಿದಂತೆ ಚಿತ್ರದ ತಾರಾಗಣವನ್ನು ಶೀಘ್ರದಲ್ಲೇ ಅಂತಿಮಗೊಳಿಸುವ ನಿರೀಕ್ಷೆಯಿದೆ. ಚಿತ್ರಕ್ಕೆ ಸಹನಾ ಮೂರ್ತಿ ಅವರ ಪ್ರಾಜೆಕ್ಟ್‌ಗಳಲ್ಲಿ ಈ ಹಿಂದೆ ಕೆಲಸ ಮಾಡಿದ ಗುರು ಪ್ರಶಾಂತ್ ರೈ ಅವರ ಛಾಯಾಗ್ರಹಣವಿದೆ.

## ಪ್ಯಾನ್ ಇಂಡಿಯಾ ಅಲ್ಲ.. ಪ್ಯಾನ್ ವರ್ಲ್ಡ್



ರಾಕಿಂಗ್ ಸ್ಟಾರ್ ಯಶ್ ತಮ್ಮ ಬಹು ನಿರೀಕ್ಷಿತ ಚಿತ್ರ ಟಾಕ್ಸಿಕ್ ಚಿತ್ರೀಕರಣದಲ್ಲಿ ತೊಡಗಿದ್ದು, ಇದೀಗ ಚಿತ್ರದ ಕುರಿತು ಮತ್ತೊಂದು ಅಧಿಕೃತ ಮಾಹಿತಿ ಹೊರಬಿದ್ದಿದೆ. ಹೌದು... ಕೆಜಿಎಫ್ ಮೂಲಕ ಪ್ಯಾನ್ ಇಂಡಿಯಾ ಹೀರೋ ಆಗಿರುವ ರಾಕಿಂಗ್ ಸ್ಟಾರ್ ಯಶ್ ಇದೀಗ ತಮ್ಮ ಬಹು ನಿರೀಕ್ಷಿತ ಚಿತ್ರ ಟಾಕ್ಸಿಕ್ ಮೂಲಕ ಪ್ಯಾನ್ ವರ್ಲ್ಡ್ ಹೀರೋ ಆಗುವತ್ತ ದಿಟ್ಟ ಹೆಜ್ಜೆ ಇಟ್ಟಿದ್ದಾರೆ. ಟಾಕ್ಸಿಕ್ ಸಿನಿಮಾವನ್ನು ಕೆಜಿಎಫ್‌ಗಿಂತ ಮತ್ತೊಂದು ಎತ್ತರಕ್ಕೆ ತೆಗೆದುಕೊಂಡು ಹೋಗುವ ಯೋಚನೆಯಲ್ಲಿದೆ ಚಿತ್ರತಂಡ. ಇದೇ ಕಾರಣಕ್ಕೆ ಚಿತ್ರ ತಂಡ ಈ ಸಿನಿಮಾವನ್ನು ಕನ್ನಡ ಹಾಗೂ ಇಂಗ್ಲಿಷ್ ಎರಡೂ ಭಾಷೆಗಳಲ್ಲಿ ಚಿತ್ರೀಕರಣ ಮಾಡುತ್ತಿದೆ. ಈ ಬಗ್ಗೆ ಚಿತ್ರತಂಡದ ಮೂಲಗಳೇ ಅಧಿಕೃತವಾಗಿ ಮಾಹಿತಿ ನೀಡಿವೆ ಎಂದು ಹೇಳಲಾಗಿದೆ.

'ಟಾಕ್ಸಿಕ್' ಚಿತ್ರವನ್ನು ಹೆಚ್ಚಿನ ಸಂಖ್ಯೆಯ ಪ್ರೇಕ್ಷಕರನ್ನು ತಲುಪಿಸುವ ಗುರಿ ಹೊಂದಿರುವ ಚಿತ್ರತಂಡ ಇದಕ್ಕಾಗಿ ದೊಡ್ಡ ಮಟ್ಟದಲ್ಲೇ ಯೋಜನೆ ರೂಪಿಸಿದೆ. ಅದರಂತೆ ಈ ಬಿಗ್ ಪ್ರಾಜೆಕ್ಟ್ ಸಿನಿಮಾವನ್ನು ಕನ್ನಡ–ಹಿಂದಿ–ಇಂಗ್ಲಿಷ್ ಸೇರಿದಂತೆ ಹಲವು ದೇಶ ವಿದೇಶ ಭಾಷೆಗಳಲ್ಲಿ ಬಿಡುಗಡೆ ಮಾಡಲು ಚಿತ್ರತಂಡ ತಯಾರಿ ನಡೆಸಿದೆ. ಕನ್ನಡ, ಇಂಗ್ಲಿಷ್ ಜೊತೆ ಹಿಂದಿ, ತೆಲುಗು, ತಮಿಳು, ಮಲೆಯಾಳಂ ಸೇರಿ ಹಲವು ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಹಲವು ಭಾಷೆಗಳಲ್ಲಿ ಟಾಕ್ಸಿಕ್ ಸಿನಿಮಾ ಡಬ್ ಆಗಲಿದೆಯಂತೆ. ಟಾಕ್ಸಿಕ್ ಕನ್ನಡ ಮತ್ತು ಇಂಗ್ಲಿಷ್ ಎರಡರಲ್ಲೂ ಏಕಕಾಲದಲ್ಲಿ ಚಿತ್ರೀಕರಣಗೊಳ್ಳುತ್ತಿದ್ದು, ದೀರ್ಘಾವಧಿಯ ಶೂಟಿಂಗ್ ವೇಳಾಪಟ್ಟಿಯನ್ನು ಹೊಂದಿದೆ ಎಂದು ತಿಳಿದುಬಂದಿದೆ.

## ತ್ರಿವೇಣಿಯಲ್ಲಿ ಅಕ್ಷಯ್ ಕುಮಾರ್ ಪುಣ್ಯಸ್ನಾನ

### ದೊಡ್ಡ ದೊಡ್ಡ ನಟರು ಭೇಟಿ



144 ವರ್ಷಗಳ ಬಳಿಕ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳಕ್ಕೆ ಬಾಲಿವುಡ್ ನಟ ಅಕ್ಷಯ್ ಕುಮಾರ್ ತೆರಳಿ, ತ್ರಿವೇಣಿ ಸಂಗಮದಲ್ಲಿ ಪುಣ್ಯಸ್ನಾನ ಮಾಡಿದರು. ಮಹಾ ಕುಂಭಮೇಳಕ್ಕೆ ಭೇಟಿ ನೀಡಿದ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮಹಾ ಕುಂಭಮೇಳದಲ್ಲಿ ಒಳ್ಳೆಯ ವ್ಯವಸ್ಥೆ ಮಾಡಲಾಗಿದೆ. ಅದ್ಭುತ ವ್ಯವಸ್ಥೆ ಮಾಡಿದ್ದಕ್ಕಾಗಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಗೆ ಧನ್ಯವಾದ ಹೇಳುತ್ತೇನೆ. 2019ರಲ್ಲಿ ನಡೆದ ಕುಂಭ ಮೇಳದಲ್ಲಿ ಜನರು ಸಂಕಷ್ಟ ಅನುಭವಿಸಿದ್ದು ನನಗೆ ನೆನಪಿದೆ. ಈ ಬಾರಿ ಅನೇಕ ಗಣ್ಯರು ಮಹಾ ಕುಂಭಮೇಳಕ್ಕೆ ಭೇಟಿ ನೀಡಿದ್ದಾರೆ. ಅಂಬಾನಿ, ಅದಾನಿ ಕುಟುಂಬದವರು ಹಾಗೂ ಅನೇಕ ದೊಡ್ಡ ದೊಡ್ಡ ನಟರು ಭೇಟಿ ನೀಡಿದ್ದಾರೆ. ಪೊಲೀಸರು ಹಾಗೂ ಸೇವಕರಿಗೆ ಕೈಮುಗಿದು ಧನ್ಯವಾದ ಹೇಳುತ್ತಿದ್ದೇನೆ ಎಂದರು. ಈ ಮೊದಲು ಮಹಾ ಕುಂಭಮೇಳಕ್ಕೆ ಬಾಲಿವುಡ್‌ನ ಸೊನಾಲಿ ಬೆಂದ್ರೆ, ವಿಕ್ಕಿ ಕೌಶಲ್, ತಮನ್ನ ಭಾಟಿಯಾ, ರಾಜ್‌ಕುಮಾರ್ ರಾವ್, ಹೇಮ ಮಾಲಿನಿ ಹಾಗೂ ಇನ್ನಿತರ ಸ್ಟಾರ್ ನಟರು ಭೇಟಿ ನೀಡಿ, ಪುಣ್ಯಸ್ನಾನ ಮಾಡಿದ್ದರು. ಮಹಾಶಿವರಾತ್ರಿಯಂದು ಮುಕ್ತಾಯಗೊಳ್ಳಲಿರುವ ಮಹಾ ಕುಂಭಮೇಳಕ್ಕೆ ಕೆಲವೇ ದಿನ ಬಾಕಿಯಿರುವಾಗ ನಟ ಅಕ್ಷಯ್ ಕುಮಾರ್ ಭೇಟಿ ನೀಡಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966